ಸಂಪುಟ: 13 Volume | ಸಂಚಿಕೆ: 266 Issue | ಪುಟಗಳು 08 Pages | ಮಂಗಳವಾರ 09 ಡಿಸೆಂಬರ್ 2025 | ₹6 | PRGINO.120927 (RNINO: KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ನನಗೆ ಕಾಲ ಕಳೆಯುವುದು ಹೇಗೆಂಬ ಚಿಂತೆಗಿಂತ ಕಾಲ ಕಳೆದು ಹೋಗುತ್ತದಲ್ಲಾ ಎನ್ನುವುದೇ ಚಿಂತೆ.

–ಕೆ.ಪಿ. ಪೂರ್ಣಚಂದ್ರ ತೇಜಸ್ವಿ

ವಿಭಾಗೀಯ ಕಚೇರಿ ಉದ್ಘಾಟನೆ 6
ಸಚಿವ ತಿಮ್ಮಾಪೂರ ನೇತೃತ್ವದಲ್ಲಿ ಸಭೆ 7
ಕನ್ನಡದ ಕಾರ್ಯಕ್ರಮಗಳಿಗೆ ಅಲಕ್ಷ್ಯ: ಕಿಡಿ 8



ಬೆಂಗಳೂರು JDS ಪ್ರಧಾನ ಕಚೇರಿಯಲ್ಲಿ ಮಲ್ಲಮ್ಮ ನುಡಿ.

### ನಾಗನೂರು ರುದ್ರಾಕ್ಷಿ ಮಠದ ಯುವ ವಿಜ್ಞಾನಿ ಕೇಂದ್ರಕ್ಕೆ ಸಚಿವ ಎಂ ಬಿ ಪಾಟೀಲ ಚಾಲನೆ



**ಬೆಳಗಾವಿ:** ಇಲ್ಲಿನ ನಾಗನೂರು ರುದ್ರಾಕ್ಷಿ ಮಠದ ವತಿಯಿಂದ ಉತ್ತರ ಕರ್ನಾಟಕದ ವಿದ್ಯಾರ್ಥಿಗಳಿಗೆ ಆಧುನಿಕ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ಸಂಶೋಧನೆ ನಡೆಸಲು ಹಾಗೂ ತರಬೇತಿ ನೀಡುವ ಉದ್ದೇಶದಿಂದ ನಿರ್ಮಿಸಿರುವ 'ಸ್ಟೆಮ್–ಎಚ್' (STEAM-H) ಯುವವಿಜ್ಞಾನಿ ಕೇಂದ್ರವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಸೋಮವಾರ ಉದ್ಘಾಟಿಸಿದರು. ಮಠದ ಲಿಂಗೈಕ್ಯ ಡಾ.ಶಿವಬಸವ ಮಹಾಸ್ವಾಮಿಗಳ 136ನೇ ಜಯಂತಿ ಮಹೋತ್ಸವದಲ್ಲಿ ಅವರು ಪಾಲ್ಗೊಂಡಿದ್ದರು.



ಬೆಂಗಳೂರು ಕ್ವೀನ್ಸ್ ರಸ್ತೆಯಲ್ಲಿರುವ ಕೆಪಿಸಿಸಿ ಕಚೇರಿಯಲ್ಲಿ ಮಲ್ಲಮ್ಮ ನುಡಿ ದಿನಪತ್ರಿಕೆ ಎಂಟ್ರಿ.



ಬೆಂಗಳೂರಿನ ಪ್ರತಿಷ್ಠಿತ ರೆಡ್ಡಿ ಜನ ಸಂಘದ ಶಿಕ್ಷಣ ಸಂಸ್ಥೆಗಳಲ್ಲಿಯೂ ಮಲ್ಲಮ್ಮ ನುಡಿ ಪ್ರಸರಣ.

## ಅಗಲಿದ ಗಣ್ಯರಿಗೆ ಸಿಎಂ ಸಂತಾಪ

**ಬೆಳಗಾವಿ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಮಂಡಲದ ಅಧಿವೇಶನದಲ್ಲಿ ಇತ್ತೀಚೆಗೆ ಅಗಲಿದ ಗಣ್ಯರಿಗೆ ಸಂತಾಪ ಸೂಚಿಸಿದರು.

ಮಾಜಿ ಸಚಿವರು, ಹಾಲಿ ಸಂಸದರಾಗಿದ್ದ ಉತ್ತರ ಕರ್ನಾಟಕಭಾಗದ ಹಿರಿಯ ನಾಯಕರಾದ ಹೆಚ್.ವೈ.ಮೇಟಿ ಅವರ ಕುರಿತು ಮಾತನಾಡಿ ದೀರ್ಘ ಕಾಲ ಸಾರ್ವಜನಿಕ ಬದುಕಿನಲ್ಲಿದ್ದ ಮೇಟಿಯವರು ಜನಪರವಾಗಿ, ಕ್ಷೇತ್ರದ ಅಭಿವೃದ್ಧಿಯ ಬಗ್ಗೆಯಷ್ಟೇ ಚಿಂತಿಸುತ್ತಿದ್ದ ಮುತ್ಸದ್ದಿ ನಾಯಕ. ನನ್ನ ಅನುಯಾಯಿಗಳಲ್ಲಿ ಮೇಟಿ ಅಗ್ರಗಣ್ಯರು. ವೃತ್ತಿಯಲ್ಲಿ ಕೃಷಿಕರಾಗಿದ್ದ ಮೇಟಿಯವರು ಬಿಲ್‌ಕೆರೂರು ಮಂಡಳ ಪಂಚಾಯಿತಿ ಅಧ್ಯಕ್ಷರಾಗುವ ಮೂಲಕ ರಾಜಕೀಯ ಪ್ರವೇಶಿಸಿದ್ದರು. ಬಾಗಲಕೋಟೆ ತಾಲ್ಲೂಕು ಕೃಷಿ ಹುಟ್ಟುವಳಿ ಮಾರಾಟ ಸಮಿತಿ, ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರ, ಮತ್ತು ಎಂ.ಎಸ್.ಐ.ಎಲ್.ನ ಅಧ್ಯಕ್ಷರಾಗಿ ಡಿ.ಸಿ.ಸಿ ಬ್ಯಾಂಕ್ ಹಾಗೂ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದರು.

1983 ರಿಂದಲೂ ಹೆಚ್.ವೈ. ಮೇಟಿಯವರೊಂದಿಗೆ ಒಡನಾಡವಿತ್ತು. ನಾನು ಜನತಾ ಪಕ್ಷ, ಜನತಾದಳ ಹಾಗೂ ಕಾಂಗ್ರೆಸ್ ಪಕ್ಷದಲ್ಲಿದ್ದರೂ ನಾನು ಕೈಗೊಳ್ಳುವ ತೀರ್ಮಾನಗಳಿಗೆ ಬದ್ಧರಾಗಿದ್ದರು. ಅಹಿಂದ ಸಂಘಟನೆಯಲ್ಲಿ ನನ್ನೊಂದಿಗೆ ಹೆಗಲು ಕೊಟ್ಟು ದುಡಿದವರು. ಶಾಸಕರಾಗಿ, ಸಂಸದರಾಗಿ, ಸಚಿವರಾಗಿ, ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ಮೇಟಿಯವರು ಸಜ್ಜನ ರಾಜಕಾರಣಿ ರಾಜಕೀಯ ತತ್ವಗಳನ್ನು ತಪ್ಪದೇ ಪಾಲಿಸುತ್ತಿದ್ದ ಅವರು ಜನರೊಂದಿಗೆ ಬೆರೆಯುವ ಗುಣವಿದ್ದ ಮೇಟಿಯವರು, ಜಾತ್ಯಾತೀತ ತತ್ವದ ಪಾಲಕರಾಗಿದ್ದರು. ಅವರು ಎಲ್ಲ ಜಾತಿ–ಧರ್ಮಗಳನ್ನು ಪ್ರೀತಿಯಿಂದ ಕಾಣುವ ಸ್ವಭಾವದವರಾಗಿದ್ದರು ಎಂದು ಸ್ಮರಿಸಿದರು.

## ಪಿಯು ಉಪನ್ಯಾಸಕರಿಂದ ಬೋಧನೆ ಇಲ್ಲ



**ಹುಮನಾಬಾದ್:** ಸರಕಾರಿ ಪದವಿ ಪೂರ್ವ ಉಪನ್ಯಾಸಕರಿಗೆ 9 ಮತ್ತು 10ನೇ ತರಗತಿ ವಿದ್ಯಾರ್ಥಿಗಳಿಗೆ ಬೋಧನೆ ಮಾಡಬೇಕು ಎಂಬುದರ ಬಗ್ಗೆ ಪರಿಶೀಲನೆಯಲ್ಲಿದೆ. ಇನ್ನೂ ಅಂತಹ ಆದೇಶ ಹೊರಡಿಸಿಲ್ಲ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ವಿಧಾನ ಪರಿಷತ್ ನಲ್ಲಿ ಪರಿಷತ್ ಸದಸ್ಯ ಡಾ.ಚಂದ್ರಶೇಖರ ಪಾಟೀಲ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ ಅವರು, ಹೈಸ್ಕೂಲ್ ವಿದ್ಯಾರ್ಥಿಗಳಿಗೆ ಬೋಧನೆ ಸಂಬಂಧ ಪಿಯು ಉಪನ್ಯಾಸಕರ ಸಂಘ ವಿರೋಧಿಸಿ ಪ್ರತಿಭಟನೆ ನಡೆಸಿ, ಮನವಿ ಸಲ್ಲಿಸಿರುವುದು ಸರಕಾರದ ಗಮನಕ್ಕೆ ಬಂದಿದೆ ಎಂದಿದ್ದಾರೆ.

ಹೀಗಾಗಿ ಈ ಬಗ್ಗೆ ಪರಿಶೀಲನೆ ಹಂತದಲ್ಲಿದೆ.ಈ ಕುರಿತು ಸಾಧಕ ಬಾಧಕಗಳ ಕುರಿತು ಕೂಲಂಕುಷವಾಗಿ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು .ಉಪನ್ಯಾಸಕರ ಕುಂದುಕೊರತೆಗಳ ಬಗ್ಗೆ ಆಲಿಸಲಾಗುವುದು ಎಂದು ಸಚಿವರು ಭರವಸೆ ನೀಡಿದ್ದಾರೆ.

# ಸದನದಲ್ಲೂ ಕುರ್ಚಿಯ ಕದನ

## ಇಂದಿನಿಂದ ವಿಧಾನ ಮಂಡಲದ ಚಳಿಗಾಲದ ಅಧಿವೇಶನ | ಪ್ರತಿಪಕ್ಷ-ಕಾಂಗ್ರೆಸ್ ಜಟಾಪಟಿ

• ಮಲ್ಲಮ್ಮ ನುಡಿ ಬೆಳಗಾವಿ

ಕುಂದಾನಗರಿ ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ ಇಂದಿನಿಂದ ವಿಧಾನ ಮಂಡಲದ ಉಭಯ ಸದನಗಳ ಚಳಿಗಾಲದ ಅಧಿವೇಶನ ಆರಂಭವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನಡುವಿನ ಕುರ್ಚಿಯ ಕದನ ಪ್ರತಿಧ್ವನಿಸಿದೆ.

**ಯತೀಂದ್ರ ಹೇಳಿಕೆಯ ಬಿಸಿ:** ಕಾಂಗ್ರೆಸ್ ಎಂಎಲ್ಸಿ ಯತೀಂದ್ರ ಸಿದ್ದರಾಮಯ್ಯ ಅವರು ಕಲಾಪದಲ್ಲಿ ಭಾಗವಹಿಸುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿ, ನಾಯಕತ್ವ ಬದಲಾವಣೆಗೆ ಹೈಕಮಾಂಡ್ ಸಮ್ಮತಿಸಿಲ್ಲ ಎನ್ನುವ ಮೂಲಕ ಚರ್ಚೆಗೆ ಬಿಸಿತುಪ್ಪ ಸುರಿದಿದ್ದಾರೆ. ಇದಕ್ಕೆ ಪರ ವಿರೋಧ ವಾದಗಳು ಗನ ಸೆಳೆದಿವೆ.



### ಡಿಕೆಶಿಗೆ ಮಾಜಿ ಸಚಿವ ರಾಜಣ್ಣ ಟಾಂಗ್

ಕೆಲವರು ಮುಖ್ಯಮಂತ್ರಿ ಆಗುವುದಕ್ಕೆ ಸಿದ್ದರಾಗಿದ್ದಾರೆ. ಆದರೆ ಒಬ್ಬರಿಂದ ಪಕ್ಷ ಅಧಿಕಾರಕ್ಕೆ ಬಂದಿಲ್ಲ ಎಂದು ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ಪರೋಕ್ಷವಾಗಿ ಮಾಜಿ ಸಚಿವ ಕೆ ಎನ್ ರಾಜಣ್ಣ ಟಾಂಗ್ ನೀಡಿದರು. ಅಧಿವೇಶನ ನಂತರ ಯಾವುದೇ ಬದಲಾವಣೆ ಆಗುವುದಿಲ್ಲ, ರಾಜಕಾರಣ ಎಂಬುದು ನಿಂತ ನೀರಲ್ಲ, ಯಾವತ್ತೂ ಚಲನಶೀಲತೆ ಇರಬೇಕು. ನಮ್ಮ ಪಕ್ಷದ ರೀತಿಯಲ್ಲೂ ಬೇರೆ ಪಕ್ಷದಲ್ಲೂ ಬದಲಾವಣೆ ಇರುತ್ತದೆ ಎಂದಿದ್ದಾರೆ.

### ಸಿಎಂ ಬದಲಾವಣೆ ಪರ–ವಿರೋಧ ದನಿ

ಸಿಎಂ ಆಗಿ ಸಿದ್ದರಾಮಯ್ಯ 5ವರ್ಷ ಪೂರೈಸುತ್ತಾರೆ ಎಂದು ಸಿದ್ದು ಅವರ ಪುತ್ರ ಯತೀಂದ್ರ ಸ್ಫೋಟಕ ಹೇಳಿಕೆಗೆ ಡಿಕೆಶಿ ಆಪ್ತರಾದ ಶಾಸಕ ಇಕ್ಬಾಲ್ ಹುಸೇನ್ ತಿರುಗೇಟು ನೀಡಿ, ವರಿಷ್ಠರು ಆ ಬಗ್ಗೆ ಚರ್ಚಿಸುತ್ತಾರೆ. ಪಕ್ಷಕ್ಕೆ ಡ್ಯಾಮೇಜ್ ಹೇಳಿಕೆ ಬೇಡ ಎಂದಿದ್ದಾರೆ. ಶಾಸಕ ಶಿವಗಂಗಾ ಬಸವರಾಜ್ ಮಾತ್ರ, ಜನವರಿ 8–9ರವರೆಗೆ ಕಾಯಿರಿ ಎಂದಿದ್ದಾರೆ. ಸ್ವತಃ ಸಿಎಂ ಕೂಡ ವರಿಷ್ಠರ ತೀರ್ಮಾನವೇ ಅಂತಿಮ ಅಂದಿದ್ದಾರೆ.

ಒಂದು ವೇಳೆ ಸದನದಲ್ಲಿ ತಮ್ಮ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಿದರೆ ಸರ್ಕಾರದ ತೀರ್ಮಾನಕ್ಕೆ ತಲೆಬಾಗುವೆ. ಹಾಗಂತ ಕೆಲವ ಕಡೆ ವರದಿಯಾಗಿದೆ. ಅದನ್ನು ಗಮನಿಸಿರುವೆ. ಆದರೆ ಸದನದಲ್ಲಿ ಸದಸ್ಯರು ತೆಗೆದುಕೊಳ್ಳುವ ತೀರ್ಮಾನವೇ ಅಂತಿಮ.

–ಬಸವರಾಜ್ ಹೊರಟ್ಟಿ
ವಿಧಾನ ಪರಿಷತ್ ಸಭಾಪತಿ

### ಅವಿಶ್ವಾಸ ಮಂಡಿಸುವ ಸಾಮರ್ಥ್ಯ ಬಿಜೆಪಿಗಿಲ್ಲ: ಸಿಎಂ

ಇದೇ ವೇಳೆ ರಾಜ್ಯ ಸರ್ಕಾರದ ವಿರುದ್ದ ಅವಿಶ್ವಾಸ ನಿರ್ಣಯ ಮಂಡಿಸುವ ಕೆಲ ಬಿಜೆಪಿ ನಾಯಕರ ಹೇಳಿಕೆಗೆ ಪ್ರತಿಕ್ರಿಯಿಸಿದ ಯತೀಂದ್ರ ಸಿದ್ದರಾಮಯ್ಯ ಅವರು, ಆ ಪ್ರಯತ್ನಕ್ಕೆ ಕೈಹಾಕಿದರೆ ಮುಖಭಂಗ ಎದುರಿಸುತ್ತಾರೆ. ಆ ಸಾಮರ್ಥ್ಯ ಅವರಿಗೆಲ್ಲಿದೆ ಎಂದು ಪ್ರಶ್ನಿಸಿದ್ದಾರೆ. ಸರ್ಕಾರಕ್ಕೆ ಸಂಪೂರ್ಣ ಬಹುಮತ ಇದೆ. ಅನಗತ್ಯ ರಾಜಕೀಯ ಬದಲು ಜನರ ವಿಷಯಗಳ ಬಗ್ಗೆಚರ್ಚಿಸಲಿ ಎಂದು ಪಂಥಾಹ್ವಾನ ನೀಡಿದ್ದಾರೆ.

### ಕಲ್ಯಾಣ ಕರ್ನಾಟಕದ ಜ್ವಲಂತ ಸಮಸ್ಯೆ..!

ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಬಗ್ಗೆ 145ನೇ ಅಧಿವೇಶನದಲ್ಲಿ 6 ಗಂಟೆ 35 ನಿಮಿಷ ಚರ್ಚೆಯಾಗಿದ್ದು, 19 ಜನ ಪರಿಷತ್ ಶಾಸಕರು ಮಾತನಾಡಿದ್ದಾರೆ. 151ನೇ ಅಧಿವೇಶನದಲ್ಲಿ 1 ಗಂಟೆ 40 ನಿಮಿಷ ಚರ್ಚೆಯಾಗಿದ್ದು 6 ಜನ ಪರಿಷತ್ ಶಾಸಕರು ಮಾತನಾಡಿದ್ದಾರೆ. 154ನೇ ಅಧಿವೇಶನದಲ್ಲಿ 5 ಗಂಟೆ 12 ನಿಮಿಷ ಚರ್ಚೆಯಾಗಿದ್ದು, 11 ಜನ ಪರಿಷತ್ ಶಾಸಕರು ಮಾತನಾಡಿದ್ದಾರೆ. ಅದೇ ರೀತಿ ಈ ಬಾರಿಯ ಅಧಿವೇಶನದಲ್ಲಿ ಸಹ ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಚರ್ಚೆಗೆ ವಿಶೇಷ ಅವಕಾಶ ಕಲ್ಪಿಸಲಾಗುವುದು ಎಂದು ಸಭಾಪತಿ ವಿವರಿಸಿದ್ದಾರೆ.

## ಗವಿಸಿದ್ದೇಶ್ವರ ಜಾತ್ರೆ ಜ.5ರಂದು

**ಕೊಪ್ಪಳ:** ದಕ್ಷಿಣ ಭಾರತದ ಕುಂಭ ಮೇಳ ಎಂದೇ ಪ್ರಸಿದ್ದಿ ಪಡೆದಿರುವ ಕೊಪ್ಪಳದ ಶ್ರೀ ಗವಿಸಿದ್ದೇಶ್ವರ ಜಾತ್ರೆಯ ಮಹಾ ರಥೋತ್ಸವ 2026ರ ಜನವರಿ 5 ರಂದು ನಡೆಯಲಿದೆ.ಲಕ್ಷಾಂತರ ಭಕ್ತರು ಭಾಗಿಯಾಗುವ ಈ ಮಹಾ ರಥೋತ್ಸವಕ್ಕೆ ಈ ಬಾರಿ ಮೇಘಾಲಯದ ರಾಜ್ಯಪಾಲರಾಗಿರುವ ಹಾಗೂ ಮೂಲತಃ ಜಿಲ್ಲೆಯ ಕೂಕನೂರು ತಾಲೂಕಿನ ಬಿನ್ನಾಳ ಗ್ರಾಮದ ಸಿ. ಎಚ್. ವಿಜಯಶಂಕರ್ ಅವರು ಚಾಲನೆ ನೀಡಲಿದ್ದಾರೆ. ಶ್ರೀ ಗವಿಸಿದ್ದೇಶ್ವರ ಮಹಾ ರಥೋತ್ಸವಕ್ಕೆ ದೇಶದ ಗಣ್ಯಮಾನ್ಯರಿಂದ ಹಾಗೂ ಮಹಾನ್ ಸಾಧಕರಿಂದ ಚಾಲನೆ ಕೊಡಿಸುವ ಸಂಪ್ರದಾಯವನ್ನು ಕೊಪ್ಪಳ ಸಂಸ್ಥಾನ ಗವಿಮಠವು ನಡೆಸಿಕೊಂಡು ಬಂದಿದೆ.

## ರೈತರಿಗೆ ಸಿಎಂ ಕೊಡುಗೆ..?



**ನವದೆಹಲಿ:** ಕುಮಾರಸ್ವಾಮಿ ಮಂಡ್ಯಕ್ಕೆ ಏನು ಕೊಟ್ಟಿದ್ದಾರೆ ಎಂದು ಕೇಳಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತೀಕ್ಷ್ಣವಾಗಿ ತಿರುಗೇಟು ಕೊಟ್ಟಿರುವ ಕೇಂದ್ರ ಸಚಿವರು; ನಾನು ಕೊಟ್ಟಿದ್ದನ್ನು ಪಟ್ಟಿ ಮಾಡಿ ಹೇಳುತ್ತೇನೆ, ಮೊದಲು ಐದು ವರ್ಷ ಮುಖ್ಯಮಂತ್ರಿ ಆಗಿದ್ದಾಗ, ಈಗ ಏನೇನು ಕೊಟ್ಟಿದ್ದೀರಿ ಎಂಬುದನ್ನು ಹೇಳಿ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಒತ್ತಾಯಿಸಿದ್ದಾರೆ.

## ರೈತರ ಸಂಕಷ್ಟ ಚರ್ಚೆ ಆಗಲಿ



**ಬೆಳಗಾವಿ:** ಇಂದಿನಿಂದ ಪ್ರಾರಂಭವಾಗುವ ಚಳಿಗಾಲದ ಅಧಿವೇಶನದಲ್ಲಿ ರಾಜ್ಯದ ಜ್ವಲಂತ ಸಮಸ್ಯೆಗಳ ಕುರಿತು ಸಮಗ್ರವಾಗಿ ಚರ್ಚಿಸಬೇಕಿದೆ. ಪ್ರಮುಖವಾಗಿ ನಾಡಿನ ರೈತರು ಸಂಕಷ್ಟದಲ್ಲಿದ್ದಾರೆ. ಆ ಕುರಿತು ಚರ್ಚೆ ಮಾಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆಗ್ರಹಿಸಿದ್ದಾರೆ.ಮಾಧ್ಯಮಗಳ ಜೊತೆ ಮಾತನಾಡಿ, ರಾಜ್ಯ ಸರಕಾರದ ನಿರ್ಲಕ್ಷ್ಯದಿಂದ ಕಬ್ಬು ಬೆಳೆಗಾರರು, ಮೆಕ್ಕೆ ಜೋಳ ಬೆಳೆಗಾರರು, ಭತ್ತ ಬೆಳೆಯುವ ರೈತರು, ತೊಗರಿ ಬೆಳೆಗಾರರು ಸಂಕಷ್ಟ ಅನುಭವಿಸಬೇಕಿದೆ ಎಂದು ಬಿ.ವೈ.ವಿಜಯೇಂದ್ರ ಆಕ್ಷೇಪಿಸಿದ್ದಾರೆ.

## ಎಂಇಎಸ್ ಪುಂಡರ ಪುಂಡಾಟಿಕೆ

• ಮಲ್ಲಮ್ಮ ನುಡಿ ಬೆಳಗಾವಿ

ಕುಂದಾನಗರಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಸೋಮವಾರ ವಿಧಾನ ಮಂಡಲದ ಉಭಯ ಸದನಗಳ ಚಳಿಗಾಲದ ಅಧಿವೇಶನ ಆರಂಭವಾಗಿದ್ದು, ಮೊದಲ ದಿನವೇ ಮಹಾರಾಷ್ಟ್ರದ ಶಿವಸೇನೆ ಹಾಗೂ ಎಂಇಎಸ್ ಕಾರ್ಯಕರ್ತರು ಮತ್ತೆ ಪುಂಡಾಟಿಕೆ ಮೆರೆದಿದ್ದು, ಗಡಿಭಾಗದಲ್ಲಿ ಉದ್ವಿಗ್ನತೆ ಹೆಚ್ಚಿಸಿದೆ.



ಇಂದು ಬೆಳಗಾವಿಯಲ್ಲಿ ಎಂಇಎಸ್ ಕಾರ್ಯಕರ್ತರು ಮಹಾಮೇಳಾವ್ ನಡೆಸಲು ಮುಂದಾಗಿದ್ದರು. ಆದರೆ ಜಿಲ್ಲಾಡಳಿತ ಇದಕ್ಕೆ ಅನುಮತಿ ನೀಡಿಲ್ಲ. ಹೀಗಾಗಿ ಕೊಲ್ಲಾಪುರದಲ್ಲಿ ಶಿವಸೇನೆ ಕಾರ್ಯಕರ್ತರು ರಸ್ತೆಗಿಳಿದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ(ಕೆಎಸ್‌ಆರ್ ಟಿಸಿ) ಬಸ್ಸುಗಳನ್ನು ತಡೆದು ಪ್ರತಿಭಟನೆ ನಡೆಸಿದ್ದಾರೆ.

ಕೊಲ್ಲಾಪುರ ಸೆಂಟ್ರಲ್ ಬಸ್ ಸ್ಟ್ಯಾಂಡ್‌ನಲ್ಲಿ ಶಿವಸೇನೆ ಕಾರ್ಯಕರ್ತರು ಉದ್ಧಟತನ ಪ್ರದರ್ಶಿಸಿದ್ದು, ಠಾಕ್ರೆ ಬಣದ ಶಿವಸೇನೆ ಜಿಲ್ಲಾಧ್ಯಕ್ಷ ವಿಜಯ ದೇವಣೆ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಿದ್ದಾರೆ. ಮಹಾರಾಷ್ಟ್ರದ ಕೆಲವು ನಾಯಕರು ಬೆಳಗಾವಿ ಜಿಲ್ಲೆ ಪ್ರವೇಶಿಸಲು ಯತ್ನಿಸುತ್ತಿರುವ ಹಿನ್ನೆಲೆಯಲ್ಲಿ ಪೊಲೀಸರು ಬೆಳಗಾವಿಯಲ್ಲಿ ಮತ್ತು ಗಡಿಯಲ್ಲಿ ತೀವ್ರ ಕಟ್ಟೆಚ್ಚರ ವಹಿಸಿದ್ದಾರೆ. ಈ ನಡುವೆ ಬೆಳಗಾವಿಯಲ್ಲಿ ಎಂಇಎಸ್ ಮಹಾಮೇಳಕ್ಕೆ ಸಂಬಂಧಿಸಿದ ಉದ್ವಿಗ್ನತೆ ಹೆಚ್ಚಿದ್ದು, ಎಂಇಎಸ್ ಮುಖಂಡ ಮಾಳೋಜಿ ಅಷ್ಟೇಕರ್ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

## ಇಂಡಿಗೋ 500 ವಿಮಾನ ರದ್ದು

**ಹೊಸದಿಲ್ಲಿ:** ಒಂದು ವಾರದಿಂದ ದೇಶಾದ್ಯಂತ ಪ್ರಯಾಣಿಕರನ್ನು ಹೈರಾಣಾಗಿಸಿರುವ ಇಂಡಿಗೋ ವಿಮಾನಯಾನ ಸಂಸ್ಥೆಯ ಬಿಕ್ಕಟ್ಟು ಸೋಮವಾರವೂ (ಏಳನೇ ದಿನ) ಮುಂದುವರಿದಿದೆ. ಪೈಲಟ್ ಡ್ಯೂಟಿ ನಿಯಮಗಳು ಮತ್ತು ಆಂತರಿಕ ಯೋಜನೆಯ ವೈಫಲ್ಯದಿಂದಾಗಿ 7ನೇ ದಿನವಾದ ಸೋಮವಾರ ಒಂದೇ ದಿನ 500ಕ್ಕೂ ಹೆಚ್ಚು ವಿಮಾನಗಳು ರದ್ದಾಗಿದ್ದು, ಸಾವಿರಾರು ಪ್ರಯಾಣಿಕರು ವಿಮಾನ ನಿಲ್ದಾಣಗಳಲ್ಲಿ ಪರದಾಡುವಂತಾಗಿದೆ. ಈ ನಡುವೆ, ವಿಮಾನಗಳ ರದ್ದು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯನ್ನು ತುರ್ತಾಗಿ ವಿಚಾರಣೆ ನಡೆಸಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ಕೇಂದ್ರ ಸರ್ಕಾರ ಈಗಾಗಲೇ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಕ್ರಮ ಕೈಗೊಳ್ಳುತ್ತಿರುವುದರಿಂದ, ನ್ಯಾಯಾಂಗದ ಮಧ್ಯಪ್ರವೇಶದ ಅಗತ್ಯವಿಲ್ಲ ಎಂದು ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅವರ ನೇತೃತ್ವದ ಪೀಠ ಅಭಿಪ್ರಾಯಪಟ್ಟಿದೆ. 827 ಕೋಟಿ ರೂ. ಹಣ ವಾಪಸ್ (ರೀಫಂಡ್) ವಿಮಾನಗಳ ರದ್ದತಿಯಿಂದಾಗಿ ಟಿಕೆಟ್ ಹಣ ಮರುಪಾವತಿ ಪ್ರಕ್ರಿಯೆಯನ್ನು ಚುರುಕುಗೊಳಿಸಲಾಗಿದೆ ಎಂದು ಸರ್ಕಾರ ತಿಳಿಸಿದೆ. ನವೆಂಬರ್ 21 ರಿಂದ ಡಿಸೆಂಬರ್ 7 ರ ನಡುವೆ ಒಟ್ಟು 9.55 ಲಕ್ಷ ಪಿಎನ್‌ಆರ್‌ಗಳು ರದ್ದಾಗಿದ್ದು, ಒಟ್ಟು 827 ಕೋಟಿ ರೂ.ಗಳನ್ನು ಮರುಪಾವತಿ ಮಾಡಲಾಗಿದೆ.



## ಸ್ವಾತಂತ್ರ್ಯದ ಶಕ್ತಿ ವಂದೇಮಾತರಂ

• ಮಲ್ಲಮ್ಮ ನುಡಿ ನವದೆಹಲಿ

"ವಂದೇ ಮಾತರಂ" ಗೀತೆಯ 150ನೇ ವಾರ್ಷಿಕೋತ್ಸವ ಕುರಿತು ಲೋಕಸಭೆಯಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ತುರ್ತು ಪರಿಸ್ಥಿತಿಯಿಂದ ಸಂವಿಧಾನವನ್ನು ಹತ್ತಿಕ್ಕಲಾಯಿತು. ರಾಷ್ಟ್ರವು ಸರಪಳಿಯಲ್ಲಿ ಬಂಧಿಸಲ್ಪಟ್ಟಿತು ಎಂದು ಟೀಕಿಸಿದ್ದಾರೆ.

'ವಂದೇ ಮಾತರಂ' ಗೀತೆಯು 100 ವರ್ಷಗಳನ್ನು ಪೂರೈಸಿದಾಗ, ರಾಷ್ಟ್ರವು ತುರ್ತು ಪರಿಸ್ಥಿತಿಯಿಂದ ಬಂಧಿಸಲ್ಪಟ್ಟಿತ್ತು. ಇದು ಇತಿಹಾಸದಲ್ಲಿ ಒಂದು ಕರಾಳ ಅಧ್ಯಾಯ. ಈಗ ವಂದೇ ಮಾತರಂನ ಶ್ರೇಷ್ಠತೆಯನ್ನು ಪುನಃಸ್ಥಾಪಿಸಲು ನಮಗೆ ಅವಕಾಶವಿದೆ ಎಂದಿದ್ದಾರೆ. ವಂದೇ ಮಾತರಂ ಗೀತೆಯು ಭಾರತದ ಸ್ವಾತಂತ್ರ್ಯ ಚಳವಳಿಗೆ ಶಕ್ತಿ ತುಂಬಿತು ಮತ್ತು ಸ್ಫೂರ್ತಿ ನೀಡಿತು. ಧೈರ್ಯ ಮತ್ತು ದೃಢಸಂಕಲ್ಪದ ಹಾದಿಯನ್ನು ತೋರಿಸಿತ್ತು. ವಂದೇ ಮಾತರಂ 150 ವರ್ಷಗಳನ್ನು ಪೂರೈಸುವ ಐತಿಹಾಸಿಕ ಸಂದರ್ಭವನ್ನು ನಾವು ವೀಕ್ಷಿಸುತ್ತಿರುವುದು ನಮಗೆ ಹೆಮ್ಮೆ ಎಂದು ನುಡಿದಿದ್ದಾರೆ.

### ಸ್ವಾತಂತ್ರ್ಯದ ಲಾಭ ಪಡೆದ ನೆಹರೂ

ಕಾಂಗ್ರೆಸ್ ನಲ್ಲಿ ಜವಾಹರಲಾಲ್ ನೆಹರು ಅವರು ಸ್ವಾತಂತ್ರ್ಯ ಪಡೆಯಲು ಅಷ್ಟೇ ಅಲ್ಲ ಸ್ವಾತಂತ್ರ್ಯದ ಲಾಭ ಪಡೆದು ಪ್ರಧಾನಿಯಾಗಲು ಅವಸರ ಮಾಡಿದ್ದರು. ಜವಾಹರಲಾಲ್ ನೆಹರು ಹೊಂದಾಣಿಕೆಯ ಶಿಲ್ಪಿ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

### ಬಿಜೆಪಿ ರಾಜಕೀಯ ಬಣ್ಣ: ಕೈ

ಲೋಕಸಭೆಯಲ್ಲಿ ವಂದೇ ಮಾತರಂ ಗೀತೆ ಕುರಿತ ಚರ್ಚೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಭಾಷಣವು ಇತಿಹಾಸವನ್ನು ಪುನಃ ಬರೆಯುವ ಮತ್ತು ಅದಕ್ಕೆ ರಾಜಕೀಯ ಬಣ್ಣ ಬಳಿಯುವ ಉದ್ದೇಶವನ್ನು ಹೊಂದಿತ್ತು. ವಂದೇ ಮಾತರಂಗೆ ರಾಷ್ಟ್ರೀಯ ಗೀತೆಯ ಸ್ಥಾನಮಾನವನ್ನು ನೀಡಿದ್ದು ಕಾಂಗ್ರೆಸ್ ಎಂದಿದೆ.

**ಶಿವಮೊಗ್ಗ ಜಿಲ್ಲೆಯ ತಾಗರ್ತಿ ಶಾಸನವು ಕರ್ನಾಟಕ ದ ಮೊಟ್ಟಮೊದಲ ಉಪಲಬ್ಧ ಶಾಸನವಾಗಿದೆ: ಸಂಶೋದಕ ಶೆಟ್ಟರ್**

### ಬಡವರರೋಗಿಗಳ ಸೇವೆಯಲ್ಲಿದೇವರನ್ನುಕಾಣಬೇಕು ;ನಾಡೋಜಡಾ.ಬಸವಲಿಂಗಪಟ್ಟದೇವರು

# ಕಾನೂನು ಅರಿವು ಎಲ್ಲರಿಗೂ ಅಗತ್ಯ : ಹಿರಿಯ ನ್ಯಾಯಧೀಶ ಯಾದವಾಡ




ಮಲ್ಲಮ್ಮನುಡಿವಾರ್ತೆಔರಾದ : ಇಂದಿನ ಕಾಲದಲ್ಲಿಎಲ್ಲರಿಗೂ ಕಾನೂನಿನ ಬಗ್ಗೆ ತಿಳುವಳಿಕೆ ಪಡೆಯುವುದುಬಹಳಅವಶ್ಯಕವಾಗಿದೆ ಈ ಹಿನ್ನಲೆಯಲ್ಲಿಸರ್ಕಾರವು ಕಾನೂನು ಅರಿವು ಮತ್ತು ನೆರವುಕಾರ್ಯಕ್ರಮವುಎಲ್ಲಾಕಡೆ ಹಮ್ಮಿಕೊಳ್ಳಲಾಗುತ್ತಿದೆಎಂದುಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರಾದ ಹಾಜಿ ಹುಸೇನಸಾಬ ಯಾದವಾಡಜೆಎಂಎಫಸಿ ನ್ಯಾಯಾಲಯಔರಾದರವರು ತಿಳಿಸಿದರು.

ತಾಲೂಕಿನ ಸಂತಪೂರದಲ್ಲಿಹ ಮ್ಮಿಕೊಂಡಿರುವಕರಸೇ ಮಕ್ಕಳ ಆಸ್ಪತ್ರೆಉದ್ಘಾಟಣೆ ಹಾಗೂ ಕಾನೂನು ಅರಿವು ಮತ್ತು ನೆರವ ು ಕಾರ್ಯಕ್ರಮದಅಧ್ಯಕ್ಷತೆ ವಹಿಸಿ ಮಾತನಾಡಿದಅವರುಬಹಳಷ್ಟು ಬಡವರಿಗೆತಮ್ಮ ಮೇಲೆ ಆದಅನ್ಯಾಯವನ್ನುಕೋರ್ಟನಲ್ಲಿದಾವೆ ಹೂಡಿನ್ಯಾಯ ಪಡೆಯಲು ಆಗುವುದಿಲ್ಲ ಇಂತಹಜನರಿಗಾಗಿ ಸರ್ಕಾರವುಎಲ್ಲರಿಗೂ ಕಾನೂನಿನ ಜ್ಞಾನಒದಗಿಸುವುದುಹಾಗೂಅವರಿಗೆ ಬೇಕಾದಂತಹ ಕಾನೂನಿನ ಸಹಾಯ ಮಾಡುವದಕ್ಕಾಗಿ ಸರ್ಕಾರ ವಿಶೇಷ ಯೋಜನೆ ರೂಪಿಸಿದೆ ಬಡವರುಇದರ ಲಾಭವನ್ನು ಪಡೆದುಕೊಂಡುತಮ್ಮ ಮೇಲಾದಅನ್ಯಾಯದ ವಿರುದ್ಧ ಹೋರಾಟ ಮಾಡಿಕೋರ್ಟನಲ್ಲಿ ನ್ಯಾಯಪಡೆಯಬೇಕೆಂದುಹೇಳಿದರು.

ಜೆಎಂಎಫಸಿ ಇನ್ನೊರ್ವ ನ್ಯಾಯಮೂರ್ತಿವಿನಾಯಕ ವಾನಖಂಡೆಇವರುಮಾತನಾಡಿನಮ್ಮ ಕೋರ್ಟಗಳಲ್ಲಿ ಬಡವರ ಪರ ವಾದ ಮಂಡಿಸಲು ಸರ್ಕಾರಿ ವಕೀಲರುಗಳು ಇರುತ್ತಾರೆಅವರಿಂದ ಸಹಾಯ ಪಡೆಯಬಹುದು ಮತ್ತು ಕಾನೂನಿನ ತಿಳುವಳಿಕೆಗಾಗಿ ಕಾನೂನು ಅರಿವು ನೆರವು ಕಾರ್ಯಕ್ರಮಗಳುಜರಗುತ್ತವೆಅದರಲ್ಲಿ ಭಾಗವಹಿಸಿ ಪ್ರತಿಯೊಬ್ಬರು ಕಾನೂನಿನ ಸಾಮಾನ್ಯಜ್ಞಾನ ಪಡೆಯುವುದರಿಂದಅನೇಕ ಲಾಗಳನ್ನುಪಡೆಯಬಹದುಎಂದರು.

ಸಾನಿಧ್ಯವಹಿಸಿದಡಾ.ಬಸವಲಿಂಗ ಪಟ್ಟದೇವರು ಮಾತನಾಡಿಮನ ಷ್ಯನುತಮ್ಮಜೀವನದಲ್ಲಿಅಧ್ಯಾತ ್ಮವನ್ನು ಅಳವಡಿಸಿಕೊಳ್ಳಬೇಕು ಇದರಿಂದ ಶಾಂತಿ ನೆಮ್ಮದಿ ಸಿಗುತ್ತದೆ ಸಾಧ್ಯವಾದಷ್ಟುಇನ್ನೊ ಬ್ಬರಿಗೆ ಸಹಾಯಮಾಡ ಬೇಕು ಬಡವರ ಸೇವೆಯಲ್ಲಿ ಭಗವಂತನಿದ್ದಾನೆ ಸಮಾಜದಲ್ಲಿ ನ್ಯಾಯಧೀಶರಿಗೆ ಮತ್ತು ವೈದ್ಯರಿಗೆಜನರುದೇವರೆಂದು ಭಾವಿಸುತ್ತಾರೆ.ಆಸ್ಪತ್ರೆಗೆ ಬಂದ ರೋಗಿಗಳನ್ನುಒಳ್ಳೆಯರೀತಿಯಿಂದಆರೈಕ್ಯ ಮಾಡಿಕಳುಹಿಸಬೇಕು ವೈದ್ಯರು ಹಣಕ್ಕಾಗಿ ಸೇವೆ ಮಾಡದೆ ರೋಗಿಗಳನ್ನುದೇವರೆದು ತಿಳಿದು ಸೇವೆ ಮಾಡಬೇಕುಎಂದರು.

ಖ್ಯಾತನ್ಯಾಯವಾದಿಬಾಬಶೇಟೆಪ್ಪಕರಸೆ ಸ್ವಾಗತಕೋರಿದರು.ನಿರೂಪಣೆ ನವಲಿಂಗ ಪಾಟೀಲ ಮಾಡಿದರು.

ವೇದಿಕೆಯಲ್ಲಿಡಾ.ಸತ್ಯಕ್ಕಕರಸೆ, ಡಾ.ಚೆನ್ನವೀರಕರಸೆ,ಶಿವಕುಮಾರ ಪಂಚಾಳ, ಡಾ.ಗಂಗಾಂಬಿಕಾ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

ಸನ್ಮಾನ :ಇದೇ ಸಂಧರ್ಭದಲ್ಲಿ ಪ್ರೊ.ವಿಜಯಲಕ್ಷ್ಮೀಗಡ್ಡೆ,ಗುರುನಾಥಗಡ್ಡೆ ದಂಪತಿಗಳಿಗೆ ಡಾ.ಫ. ಗು ಹಳಕಟ್ಟಿ ಅಂತರಾಷ್ಟ್ರೀಯ ಪ್ರಶಸ್ತಿ ಲಭಿಸಿರುವುದಕ್ಕಾಗಿ ಸನ್ಮಾನಿಸಲಾಯಿತು.

# ಬ್ರಿಮ್ಸ್ ಆಸ್ಪತ್ರೆ ಅವ್ಯವಸ್ಥೆ ಕೂಡಲೆ ಸರಿಪಡಿಸಿ



ಮಲ್ಲಮ್ಮನುಡಿ ವಾರ್ತೆ ಬೀದರ್:

ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಬೋಧಕ ಆಸ್ಪತ್ರೆಯಲ್ಲಿ ಹಲವು ವರ್ಷಗಳಿಂದ ನೂರಾರು ಸಮಸ್ಯೆಗಳು ಕಾಡುತ್ತಿದ್ದು ಅವನ್ನು ತ್ವರಿತ ಗತಿಯಲ್ಲಿ ಬಗೆಹರಿಸುವಂತೆ ಮಾನವ ಹಕ್ಕುಗಳು ಹಾಗೂ ಭ್ರಷ್ಟಾಚಾರ ನಿಗ್ರಹ ಸಮಿತಿ ಮುಖಂಡರು ಮನವಿ ಮಾಡಿದರು

ಇತ್ತೀಚಿಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಗೆ ಈ ಕುರಿತು ಮನವಿ ಪತ್ರ ಸಲ್ಲಿಸಿದ ಸಮಿತಿಯ ವಿಭಾಗೀಯ ಅಧ್ಯಕ್ಷ ಸಂಗಮೇಶ ಭಾವಿದೊಡ್ಡಿ ಹಾಗೂ ಇತರರು, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಬೋಧಕ ಆಸ್ಪತ್ರೆಯಲ್ಲಿ ಕಂಡು ಬರುವ ಮೂಲ ಸೌಕರ್ಯಗಳ ಕೊರತೆ, ಆರೋಗ್ಯ ಸೇವೆಗಳ ದುರ್ಬಳಕೆ ಮತ್ತು ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳ ಕುರಿತು ಜಿಲ್ಲಾಡಳಿತದ ಗಮನ ಸೆಳೆದರು.

ಬ್ರಿಮ್ಸ್ ಆಸ್ಪತ್ರೆಯಲ್ಲಿ ಅಗತ್ಯ ತಜ್ಞ ವೈದ್ಯರ ಕೊರತೆ, ಔಷಧಿಗಳ ಲಭ್ಯತೆಯ ಸಮಸ್ಯೆ, ಶಸ್ತ್ರಚಿಕಿತ್ಸಾ ವಿಭಾಗ (ಆಪರೇಷನ್ ಥಿಯೇಟರ್) ಸಮರ್ಪಕವಾಗಿ ಕಾರ್ಯನಿರ್ವಹಿಸದೇ ಇರುವುದರಿಂದ ರೋಗಿಗಳು ತೀವ್ರ ಸಂಕಷ್ಟಅನುಭವಿಸುತ್ತಿದ್ದಾರೆ ಎಂದು ಜಿಲ್ಲಾಧಿಕಾರಿಗಳಿಗೆ ಬರೆದ ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

ಗಂಭೀರರೋಗಿಗಳಿಗೆಅಗತ್ಯವಿರುವ ಪರೀಕ್ಷೆಗಳು ಮತ್ತು ಸುಧಾರಿತ ಚಿಕಿತ್ಸೆ ದೊರೆಯದೆ, ಖಾಸಗಿ ಆಸ್ಪತ್ರೆಗಳತ್ತ ಮೊರೆ ಹೋಗುವಂತಾಗಿದೆ ಎಂಬ ಆರೋಪವ್ಯಕ್ತವಾಗಿದೆ. ಮುಖ್ಯವಾಗಿ ಮಕ್ಕಳ ವಿಭಾಗ, ಮಹಿಳಾ ಆರೋಗ್ಯ ವಿಭಾಗ,ಶಸ್ತ್ರಚಿಕಿತ್ಸಾ ವಿಭಾಗ ಸೇರಿದಂತೆ ಹಲವಾರು ಘಟಕಗಳಲ್ಲಿ ತಜ್ಞಸಿಬ್ಬಂದಿ ನಿಯೋಜನೆ ಇಲ್ಲದಿರುವುದು, ಅಗತ್ಯ ಯಂತ್ರೋಪಕರಣಗಳ ಕೊರತೆ ಹಾಗೂ ನಿರ್ಲಕ್ಷ್ಯದಿಂದ ಆರೋಗ್ಯ ಸೇವೆಗಳ ಗುಣಮಟ್ಟ ಕುಸಿದಿದೆ. ಇದರಿಂದ ಗ್ರಾಮೀಣ ಹಾಗೂ ಬಡ ವರ್ಗದ ಜನರು ಹೆಚ್ಚು ಬಾಧೆ ಅನುಭವಿಸುತ್ತಿದ್ದಾರೆ ಎಂಬುದನ್ನು ಮನವಿಯಲ್ಲಿ ವಿವರಿಸಿದ್ದಾರೆ.

ಜಿಲ್ಲಾಸ್ಪತ್ರೆಯಲ್ಲಿ ಖಾಲಿ ಇರುವ ವೈದ್ಯಕೀಯ ಹುದ್ದೆಗಳನ್ನು ತಕ್ಷಣ ಭರ್ತಿ ಮಾಡಬೇಕು, ಅಗತ್ಯ ಔಷಧಿ ಮತ್ತು ಚಿಕಿತ್ಸಾ ಸೌಲಭ್ಯಗಳನ್ನು ಒದಗಿಸಬೇಕು, ಆಪರೇಷನ್ ಥಿಯೇಟರ್‌ಗಳನ್ನು ಸಮರ್ಪಕವಾಗಿ ಕಾರ್ಯಗತಗೊಳಿಸಬೇಕು ಹಾಗೂ ರೋಗಿಗಳಿಗೆ ಗುಣ ಮಟ್ಟದ ಸೇವೆ ದೊರಕುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮೂಲಕ ಆಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ಸಮಿತಿಯ ಜಿಲ್ಲಾಧ್ಯಕ್ಷ ವಿಶಾಲ ದೊಡ್ಡಿ, ಪ್ರಧಾನ ಕಾರ್ಯದರ್ಶಿ ಮಿಲಿಂದ ರಾಜ–ಗೀರಾ, ಉಪಾಧ್ಯಕ್ಷ ಪ್ರಶಾಂತ ಮೋರೆ, ಸಂಘಟನಾ ಕಾರ್ಯದರ್ಶಿ ಸಾಹಿಲ್ ಬಹಿತ್, ಸಹ ಕಾರ್ಯದರ್ಶಿ ಸೂರ್ಯಕಾಂತ ಬಡಜಾರೆ ಹಾಗೂ ಇತರರು ಉಪಸ್ಥಿತರಿದ್ದರು.

# ಈರಮ್ಮ ಪಾಟೀಲ ನಿಧನ



ಮಲ್ಲಮ್ಮ ನುಡಿ ವಾರ್ತೆ

ಔರಾದ: ತಾಲ್ಲೂಕಿನ ಬಲ್ಲೂರ (ಜೆ) ಗ್ರಾಮದ ಈರಮ್ಮ ಬಸವಣಪ್ಪ ಪಾಟೀಲ (75) ಅವರು ವಯೋ ಸಹಜ ಕಾಯಿಲೆಯಿಂದ ಸೋಮವಾರ ದಿನಾಂಕ 08.12.2025 ನಿಧನರಾಗಿದ್ದಾರೆ.

ಅವರು ಇಬ್ಬರು ಗಂಡು ಮಕ್ಕಳು ಒಬ್ಬರು ಹೆಣ್ಣು ಮಗಳು, ಮೊಮ್ಮಕ್ಕಳು ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ದಿನಾಂಕ 09–12–2025ರಂದು ಬೆಳಗ್ಗೆ 11.30 ಗಂಟೆಗೆ ಸ್ವ–ಗ್ರಾಮ ಬಲ್ಲೂರದಲ್ಲಿ ಜರುಗಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಕಿತ್ತೂರು ರಾಣಿ ಚೆನ್ನಮ್ ಪ್ರಶಸ್ತಿಗಳಿಗೆ ಅರ್ಜಿ ಅಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: 2025–26ನೇ ಸಾಲಿನ ಮಹಿಳಾ ಸರ್ವತೋಮುಖ ಅಭಿವೃದ್ಧಿ ಶ್ರಮಿಸುತ್ತಿರುವ ಅರ್ಹ ಸಂಸ್ಥೆಗಳಿಗೆ ಮತ್ತು ಅರ್ಹ ವ್ಯಕ್ತಿಗಳನ್ನೊಳಗೊಂಡಂತೆ ಕ್ರೀಡೆ, ಕಲೆ, ಸಾಹಿತ್ಯ, ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಮಹಿಳೆಯರು ಹಾಗೂ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಆತ್ಮಸ್ಥೈರ್ಯದಿಂದ ಹೋರಾಡಿ ಜೀವಪಾಯದಿಂದ ಪಾರು ಮಾಡದಂತಹ ಮಹಿಳೆಯರನ್ನು ಗುರುತಿಸಿ, ವೀರ ಮಹಿಳೆ ಕಿತ್ತೂರು ರಾಣಿ ಚೆನ್ನಮ್ ಪ್ರಶಸ್ತಿಗಳನ್ನು ನೀಡಿ ಗೌರವಿಸುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

ಪ್ರಶಸ್ತಿಗಾಗಿ ಸ್ವೀಕೃತಗೊಂಡ ಅರ್ಹವಿರುವ ಪ್ರಸ್ತಾವನೆಗಳನ್ನು ಪ್ರಧಾನ ಕಚೇರಿಗೆ ಸಲ್ಲಿಸಲು ಜನವರಿ 10 ರೊಳಗಾಗಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದೆ ಎಂದು ಹೇಳಿದರು.

ಮಹಿಳಾ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಅರ್ಹಸ್ವಯಂ ಸೇವೆ ಸಂಸ್ಥೆಗಳು ಹಾಗೂ ಇತರೆ ವಿವಿಧ 5 ಕ್ಷೇತ್ರಗಳಾದ ಕ್ರೀಡೆ, ಕಲೆ, ಸಾಹಿತ್ಯ, ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ಹಾಗೂ ವೀರ ಮಹಿಳೆ ಪ್ರಶಸ್ತಿಗೆ ಅರ್ಹವಿರುವ ಮಹಿಳೆಯರಿಂದ ನಿಗಧಿತ ನಮೂನೆಗಳನ್ನು ಉಪನಿರ್ದೇಶಕ ಕಚೇರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಧಡೇದ್ ಹಾಸ್ಪಟಲ್ ಹತ್ತಿರ ರೇಲ್ವೆ ಸ್ಟೇಶನ್ (ಐವಾನ ಇ ಶಾಹಿ ) ರೋಡ ಕಲಬುರಗಿ 585102 ಈ ಕಚೇರಿಯಿಂದ ಪಡೆದು ದಿನಾಂಕ: 23–12–2025ರಂದು ಸಾಯಂಕಾಲ 5.30 ಗಂಟೆಯೊಳಗೆ ಸಲ್ಲಿಸಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವಶಾಂತಿಗಾಗಿ ದತ್ತ ಜಯಂತಿ ಆಚರಣೆ : ಗೋರಖನಾಥ ಕುಂಬಾರ



ಮಲ್ಲಮ್ಮನುಡಿವಾರ್ತೆಬೀದರ: ಜಿಲ್ಲೆಯಾದ್ಯಂತ ದತ್ತಾತ್ರೇಯ ಜಯಂತಿಯನ್ನು ಸಡಗರದಿಂದ ಆಚರಿಸಿದ್ದು ನಗರದ ಹೊರವಲಯದ ಗುನ್ನಳ್ಳಿಬಳಿಯಿರುವ ದತ್ತಾತ್ರೇಯ ದೇವಸ್ಥಾನದಲ್ಲಿ ಸದ್ಗುರು ಶಂಕರದತ್ತ ಮಹಾರಾಜ ಅವರ ನೇತೃತ್ವದಲ್ಲಿ ವಿಶ್ವಶಾಂತಿಗಾಗಿ ದತ್ತ ಜಯಂತಿ ಆಚರಿಸಿ ವಿಶೇಷ ಪ್ರಾರ್ಥನೆಸಲ್ಲಿಸಲಾಯಿತು ಎಂದು ದೇವಸ್ಥಾನದ ಅಧ್ಯಕ್ಷರಾದ ಗೋರಖನಾಥ ಕುಂಬಾರ ತಿಳಿಸಿದರು.

ಈ ವೇಳೆ ಸದ್ಗುರು ಶಂಕರದತ್ತ ಮಹಾರಾಜ ಅವರು ಮಾತನಾಡಿ ದತ್ತಾತ್ರೇಯ ಮಹಿಮೆ ಹಾಗೂ ಪುರಾಣಗಳಲ್ಲಿ ದತ್ತನ ಇರುವಿಕೆಯ ಬಗ್ಗೆ ತಿಳಿಸಿ ದತ್ತಾತ್ರೇಯ ಮಹಾವಿಷ್ಣುವಿನ ಆರನೇ ಅವತಾರ ಅತ್ರಿ ಮತ್ತು ಅನುಸೂಯೆಯರಿಗೆ ಮಗನಾಗಿ ಬಂದವನು. ಆ ಕಾಲದ ರಾಜರುಗಳಿಗೆ ಮತ್ತು ಜನಸಾಮಾನ್ಯರಿಗೆ ಅದ್ಭುತ ಬೋಧನೆ ಮಾಡಿದ ಜ್ಞಾನಸಾಗರ ಈ ದತ್ತಾತ್ರೇಯ ಎಂದು ಬಣ್ಣಿಸಿದರು.

ಪ್ರಮುಖರಾದ ಬಸವರಾಜ ಧನ್ನೂರ ಹಾಗೂ ಗುರುನಾಥ ರಾಜಗೀರಾ ಅವರು ಮಾತನಾಡಿ ದತ್ತಜಯಂತಿ ಪ್ರಯುಕ್ತ ದೇವಸ್ಥಾನದ ಆವರಣದಲ್ಲಿ ಹೋಮಹವನ, ವಿಶೇಷ ಪೂಜೆ, ಅಭಿಷೇಕ, ದತ್ತಾತ್ರೇಯ ತೊಟ್ಟಿಲೊತ್ಸವ ಸಂಪ್ರದಾಯದಂತೆ ಅದ್ದೂರಿಯಾಗಿ ಜರುಗಿತು. ವಿಶೇಷ ಅಲಂಕಾರಗಳಿಂದ ಮಂದಿರ ಸಿದ್ದಗೊಳಿಸಿದ್ದರು ದಿನವಿಡಿ ಗುರುಚರಿತ್ರೆ ಪಾರಾಯಣ, ವಿವಿಧ ಭಜನಾ ತಂಡಗಳಿಂದ ಕಾರ್ಯಕ್ರಮಗಳು ನಡದವು ಕೊನೆಗೆ ಸರೆಗಮಪ ತಂಡದ ಮಹೇಶಕುಮಾರ ಕುಂಬಾರ ಅವರ ನೇತೃತ್ವದಲ್ಲಿ ನಡೆದ ಸಂಗೀತ ದರ್ಬಾರ ಎಲ್ಲರನ್ನು ಭಕ್ತಿಯ ರಸದಲ್ಲಿ ತೇಲುವಂತೆ ಮಾಡಿತು.

ಜಯಂತಿ ನಿಮಿತ್ತ ದಿನವಿಡಿ ಭಕ್ತರಿಗೆ ಮಹಾಪ್ರಸಾದ ವ್ಯವಸ್ಥೆ ಮಾಡಲಾಗಿತ್ತು ಬೀದರ ನಗರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಂದ ಭಕ್ತರು ಆಗಮಿಸಿ ದತ್ತಾತ್ರೇಯನ ದರ್ಶನ ಪಡೆದು–ಕೊಂಡರು.

ಈಸಂದರ್ಭದಲ್ಲಿಪ್ರಮುಖರಾದ ಶ್ರೀನಿವಾಸ ಕುಂಬಾರ, ದಿಗಂಬರ ಕುಂಬಾರ, ನಾರಾಣ ಕುಂಬಾರ, ಆನಂದರೆಡ್ಡಿ, ಸಚಿನ, ಸೋಮನಾಥ ಮನ್ನಳ್ಳಿ, ಚಂದ್ರಕಾಂತ ಗುನ್ನಳ್ಳಿ, ಸೋಪನರಾವ ಸೇರಿದಂತೆ ಇತರರಿದ್ದರು.

# ಮೈಲಾರ ಮಲ್ಲಣ್ಣ ದೇವರ ದರ್ಶನಕ್ಕೆ ಭಕ್ತರ ದಂಡು



ಮಲ್ಲಮ್ಮ ನುಡಿ ವಾರ್ತೆ ಬೀದರ:

ಜಿಲ್ಲೆಯ ಭಾಲ್ಕಿ ತಾಲೂಕಿನ ಮೈಲಾರ ಗ್ರಾಮದಲ್ಲಿ ಛಟ್ಟಿ ಅಮವಾಸೆದಿಂದ ನಡೆಯುತ್ತಿರುವ ಮೈಲಾರ ಮಲ್ಲಣ್ಣ ದೇವರ ಜಾತ್ರಾ ಮಹತ್ಸವ ಎರಡನೇಯ ರವಿವಾರ ದಿನಾಂಕ ಡಿ. 7ರಂದು ಮಹಾರಾಷ್ಟ್ರ, ಆಂಧ್ರ, ತೆಲಂಗಾಣ ಹಾಗೂ ರಾಜ್ಯದ ವಿವಿಧೆಡೆಯಿಂದ ಆಗಮಿಸಿದ ಸಾವಿರಾರು ಭಕ್ತರ ದಂಡು ರವಿವಾರ ಭಕ್ತರು ಕುಂಡದಲ್ಲಿ ಸ್ನಾನ ಮಾಡಿ ಸರತಿ–ಸಾಲಿನಲ್ಲಿ ನಿಂತು ಶ್ರದ್ಧ –ಭಕ್ತಿಯಿಂದ ದೇವರ ದರ್ಶನ ಪಡೆದು ಪುನೀತರಾದರು.

ಈ ಮುನ್ನ ರವಿವಾರ ಮಧ್ಯರಾತ್ರಿ ದೇವಸ್ಥಾನದ ಗರ್ಭ ಗುಡಿಯಲ್ಲಿ ವಿಶೇಷ ಪೂಜೆ ಆರತಿಗೈದಿ ಭಕ್ತರಿಗೆ ದೇವರ ದರ್ಶನಕ್ಕೆ ಅನುವು ಮಾಡಿಕೊಡಲಾಯಿತು.

ಈ ಸಂದರ್ಭದಲ್ಲಿ ಮಂದಿರದ ಪರಿಸರದಲ್ಲಿ ನೆರೆದಿದ್ದ ಭಕ್ತರು ದೇವರ ಜಯಘೋಷ ಮೊಳಗಿಸಿ ಸಂಭ್ರಮಿಸಿದ್ದರು.

ಎರಡನೇ ರವಿವಾರೆಂದು ವಿವಿಧ ಕಡೆಯಿಂದ ಬಂದ ಮಹಿಳೆಯರು–ಪುರುಷರು, ಯುವಕರು–ಯುವತಿಯರು ಹಾಗೂ ಮಕ್ಕಳು ವೃದ್ದರು ಸೇರಿದಂತೆ ಸಾವಿರಾರು ಭಕ್ತರು ಕೊಬ್ಬರಿ–ಅರಶಿಣಿ (ಭಂಡಾರ) ಹಾರಿಸುವ ಮೂಲಕ ಭಂಡಾರದಲ್ಲಿ ಮಿಂದೆದ್ದರು. ನಂತರ ಪ್ರಸಾದ ಸ್ವೀಕರಿಸಿದರು.

# ಸಹ ವಿದ್ಯಾರ್ಥಿಗಳನ್ನು ಕುಟುಂಬದ ಸದಸ್ಯರಂತೆ ಕಾಣಿ: ನ್ಯಾಯವಾದಿ ಗುರುನಾಥ ರಾಜಗೀರಾ




ಮಲ್ಲಮ್ಮನುಡಿವಾರ್ತೆಬೀದರ: ಯಾಗಿಂಗ್ ಒಂದು ಪಿಡುಗಾಗಿದ್ದು ಉನ್ನತ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳಿಂದಲೆ ಹೆಚ್ಚು ನಡೆಯುವ ಅಪವಾದಗಳಿವೆ, ಯಾಗಿಂಗ್‌ಗೆಕಿರಿಯವಿದ್ಯಾರ್ಥಿಗಳು ಬಲಿಯಾಗುತ್ತಿರುವುದು ಬೇಸರದ ಸಂಗತಿ ಎಂದು ನ್ಯಾಯವಾದಿ ಗುರುನಾಥ ರಾಜಗೀರಾ ಹೇಳಿದರು.

ನಗರದ ನೌಬಾದನ ಎಸ್.ಬಿ ಪಾಟೀಲ ದಂತವೈದ್ಯಕೀಯ ಮಹಾವಿದ್ಯಾಲಯದ ಅನುಭವ ಮಂಟಪದ ಸಭಾಂಗಣದಲ್ಲಿ ಂಟಿಯಾಗಿಂಗ್ ಕುರಿತು ಜಾಗೃತಿ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮದಲ್ಲಿಮುಖ್ಯವಕ್ತಾರರಾಗಿ ಅವರು ಮಾತನಾಡಿದರು.

ಹಿರಿಯ ವಿದ್ಯಾರ್ಥಿಗಳು ತಮ್ಮ ಸಹಪಾಠಿಗಳು ಕಾಲೇಜಿಗೆ ಅಥವಾ ಹಾಸ್ಟೆಲ್‌ಗೆ ಹೊಸದಾಗಿ ಸೇರ್ಪಡೆಯಾದಾಗತಮ್ಮಕುಟುಂಬದ ಸದಸ್ಯರಂತೆ ಕಾಣಬೇಕು ಎಂದು ಕಿವಿಮಾತು ಹೇಳಿದರು.

ವಿದ್ಯಾಭ್ಯಾಸದ ಜೊತೆಗೆನೆ ವಿದ್ಯಾರ್ಥಿಗಳು ದೇಶ, ಸಂಸ್ಕೃತಿ ಹಾಗೂ ತಮ್ಮ ವೃತ್ತಿ ಬಗ್ಗೆ ಗೌರವ ಪ್ರೀತಿ ಬೆಳೆಸಿಕೊಂಡಾಗ ಯಾಗಿಂಗ್‌ನಂತಹ ಕ್ರೌರ್ಯವನ್ನು ತಡೆಗಟ್ಟಬಹುದು ಯಾಗಿಂಗ್ ತಡೆಯುವಲ್ಲಿ ಶಿಕ್ಷಣ ಸಂಸ್ಥೆಗಳ ಜವಾಬ್ದಾರಿಯೂ ಮಹತ್ವದ್ದಾಗಿದೆ ಯಾಗಿಂಗ್ ಮಾಡಿದರೆ ಕಾನೂನು ಕ್ರಮ ಕೈಗೊಳ್ಳಲು ಅವಕಾಶವಿದೆ ಎಂದರು.

ಡೆಂಟಲ್ ಕೌನ್ಸಿಲ್ ಆಫ್ ಇಂಡಿಯಾ ಸದಸ್ಯರಾದ ಡಾ.ಶಿವಶರಣ್ ಶೆಟ್ಟಿ ಮಾತನಾಡಿ ವಿದ್ಯಾರ್ಥಿಗಳು ಜೀವನದಲ್ಲಿ ಗುರಿ ಇಟ್ಟುಕೊಂಡು ಅದನ್ನು ತಲುಪಲು ಶ್ರಮಿಸಬೇಕು, ಉತ್ತಮ ಪ್ರಜೆಗಳಾಗಿ ಸರ್ಕಾರದ ಉನ್ನತ ಹುದ್ದೆಗಳನ್ನು ಅಲಂಕರಿಸಿ ಮತ್ತು ಸಮಾಜದಲ್ಲಿ ಶ್ರೇಷ್ಠ ವ್ಯಕ್ತಿತ್ವದೊಂದಿಗೆ ಬಾಳಿ ಬದುಕಬೇಕು,

ಕಾಲೇಜಿನಲ್ಲಿ ಅಥವಾ ವಿದ್ಯಾರ್ಥಿನಿಲಯದಲ್ಲಿ ಎಲ್ಲ ರೀತಿಯವರೂ ಇರುತ್ತಾ–ರೆ ಆದರೆ ತಪ್ಪನ್ನು ತಿದ್ದುವ ಒಳ್ಳೆಯ ಸ್ನೇಹಿತರನ್ನು ಆಯ್ಕೆ ಮಾಡಿಕೊಂಡು ಉತ್ತಮ ದಾರಿಯಲ್ಲಿ ಸಾಗಬೇಕು ಗುರಿ ತಲುಪಲು ಎದುರಾಗುವ ಸಮಸ್ಯೆಗಳನ್ನು ಸಮರ್ಥವಾಗಿ ಎದುರಿಸಬೇಕು ಎಂದು ಹೇಳಿದರು.

ನೂತನ ಠಾಣೆಯ ಇನ್ಸಪೆಕ್ಟರ್ ವಿಜಯಕುಮಾರಬಾವಗಿ ಮಾತನಾಡಿ ದೇಶದಲ್ಲಿ ಯುವಸಮೂಹ ವ್ಯಾಪಕವಾಗಿ ಯಾಗಿಂಗ್ ಸಮಸ್ಯೆ ಎದುರಿಸುತ್ತಿತ್ತು ಯಾಗಿಂಗ್ ಕುರಿತು ಕಠಿಣ ಕಾನೂನುಗಳಿರುವುದರಿಂದ ಮತ್ತು ಎಲ್ಲರಲ್ಲಿ ಜಾಗೃತಿ ಮೂಡಿರುವುದರಿಂದ ಯಾಗಿಂಗ್ ಪ್ರಕರಣಗಳು ಹೆಚ್ಚು ಕಾಣಿಸುತಿಲ್ಲ ಆದರು ಈ ತರಹದ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದರು.

ಈ ಸಂದರ್ಭದಲ್ಲಿ ಕಾಲೇಜಿನ ಅಧ್ಯಕ್ಷರಾದ ಸೂರ್ಯಕಾಂತ್ ಪಾಟೀಲ್, ಪ್ರಾಂಶುಪಾಲರಾದ ಡಾ.ಚಂದ್ರಶೇಖರ ಗೌಡ ಪಾಟೀಲ್, ಪ್ರಮುಖರಾದ ಡಾ. ಶರತ್ಚಂದ್ರ ಪಾಟೀಲ್, ಡಾ.ಸಿದ್ದಣ್ಣ ಗೌಡ, ಡಾ.ಸುನಂದಾ ಗ, ಡಾ.ಸಿದ್ಧಾರ್ಥ, ಡಾ.ಅಮರನಾಥ್ ಪಾಶಾಪುರೆ, ಡಾ. ಪೂಜಾ ಮಡಕಿ, ಡಾ.ಪ್ರಸನ್ನ ಕುಮಾರಿ, ಸುರೇಶ್ ಶಿಗ್ಗಿ, ಸೇರಿದಂತೆ ಇತರರಿದ್ದರು.

# ಮಂದಕನಳ್ಳಿ ಗ್ರಾಮ ಪಂಚಾಯಿತ ವತಿಯಿಂದ ಅಂಗವಿಕಲ ಸ್ನೇಹಿ ಶೌಚಾಲಯ ನಿರ್ಮಾಣ



ಮಲ್ಲಮ್ಮನುಡಿವಾರ್ತೆಬೀದರ್:

ಬೀದರ್ ತಾಲ್ಲೂಕಿನ ಮಂದಕನಳ್ಳಿ ಹಾಗೂ ವಿವಿಧ ಗ್ರಾಮಗಳಲ್ಲಿ ವೈಯಕ್ತಿಕ, ಪುರುಷ, ಮಹಿಳಾ ಸಾಮೂಹಿಕ ಶೌಚಾಲಯಗಳು ಇವೆ. ಮಂದಕನಳ್ಳಿ ಗ್ರಾಮ ಪಂಚಾಯಿತಿ ಇನ್ನೂ ಒಂದು ಹೆಜ್ಜೆ ಮುಂದೆ ಹೋಗಿ ಅಂಗವಿಕಲರಿಗಾಗಿಯೇ ಪ್ರತ್ಯೇಕ ಸಾಮೂಹಿಕ ಶೌಚಾಲಯ ನಿರ್ಮಿಸಿ ಗಮನ ಸೆಳೆದಿದೆ.

15ನೇ ಹಣಕಾಸು ನಿಧಿಯ ಅಂಗವಿಕಲರ ಕಲ್ಯಾಣದ ಅನುದಾನ ಬಳಸಿ ಮಂದಕನಳ್ಳಿ ಗ್ರಾಮದಲ್ಲಿ ಅತ್ಯಾಧುನಿಕ ಸೌಕರ್ಯದ ಅಂಗವಿಕಲ ಸ್ನೇಹಿ ಶೌಚಾಲಯ ಕಟ್ಟಿಸಿದೆ. ಅಂತರರಾಷ್ಟ್ರೀಯ ಅಂಗವಿಕಲರ ದಿನವಾದ ಡಿ.3ರಂದು ಅಂಗವಿಕಲರ ಬಳಕೆಗೆ ಮುಕ್ತಗೊಳಿಸಿದೆ.

15ನೇ ಹಣಕಾಸು ನಿಧಿಯ 2023–24 ಹಾಗೂ 2024–25ನೇ ಸಾಲಿನ ಅಂಗವಿಕಲರ ಕಲ್ಯಾಣದ 3.80 ಲಕ್ಷ ಅನುದಾನದಲ್ಲಿ ಶೌಚಾಲಯ ಕಟ್ಟಲಾಗಿದೆ. ಮೂರು ತಿಂಗಳಲ್ಲಿ ನಿರ್ಮಾಣ ಕಾರ್ಯ ಪೂರ್ಣಗೊಂಡಿದೆ. ಶೌಚಾಲಯ ಸಮೀಪದಲ್ಲೇ ದರ್ಗಾ ಇದೆ. ವಿವಿಧ ಗ್ರಾಮಗಳ ಜನರು ಇಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿ ಭಾಗಿಯಾಗುತ್ತಾರೆ. ಅಂಗವಿಕಲರಿಗೆ ಈ ಶೌಚಾಲಯ ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ.

ಅಂಗವಿಕಲರ ಬಳಕೆಗೆ ಗ್ರಾಮದಲ್ಲಿ ಅಂಗವಿಕಲ ಸ್ನೇಹಿ ಶೌಚಾಲಯ ಕಟ್ಟಿಸಿರುವುದು ಉತ್ತಮ ಬೆಳವಣಿಗೆ. ಅಂಗವಿಕಲರು ಸುಲಭವಾಗಿ ಬಳಸಿಕೊಳ್ಳುವಂತೆ ಶೌಚಾಲಯ ವಿನ್ಯಾಸಗೊಳಿಸಲಾಗಿದೆ ಎಂದು ಗ್ರಾಮದ ಅಂಗವಿಕಲರೊಬ್ಬರು ಹೇಳುತ್ತಾರೆ. ದೇವಪ್ಪ ಚಾಂಬೋಳೆ, ಮಂದಕನಳ್ಳಿ ಪಿಡಿಒ ಅಂಗವಿಕಲ ಸ್ನೇಹಿ ಮಾದರಿ ಶೌಚಾಲಯ ನಿರ್ಮಾಣ ಮಾಡಲಾಗಿದೆ. ಅಂಗವಿಕಲರು ಇದರ ಪ್ರಯೋಜನ ಪಡೆಯಬೇಕು,

## ಗುಲಬರ್ಗಾ ವಿಶ್ವವಿದ್ಯಾಲಯದ 44 ನೇ ಅಂತ್ ಮಹಾವಿದ್ಯಾಲಯ ಕ್ರೀಡಾಕೂಟ

ಕಲಬುರಗಿ: ಡಿಸೆಂಬರ್ 08 (ಕರ್ನಾಟಕ ವಾರ್ತೆ) ಗುಲಬರ್ಗಾ ವಿಶ್ವಯಯದಲ್ಲಿ 44 ನೇ ಅಂತರ ಮಹಾವಿದ್ಯಾಲಯಗಳ ಕ್ರೀಡಾಕೂಟಗಳು ಡಿಸೆಂಬರ್ 10 ಮತ್ತು ಡಿಸೆಂಬರ್ 2025 ರಂದು ವಿಶ್ವವಿದ್ಯಾಲಯದ ಕ್ರೀಡಾಂಗಣ, ಕಲಬುರಗಿಯಲ್ಲಿ ಏರ್ಪಡಿಸಲಾಗುತ್ತಿದೆ. ಎಂದು ದೈಹಿಕ ಶಿಕ್ಷಣ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೀಡ್ ಬ್ಯಾಂಕ್ ಸಭೆ

ಮಲ್ಲಮ್ಮ ನುಡಿ ವಾರ್ತೆ ಕಾರವಾರ: ಜಿಲ್ಲಾ ಲೀಡ್ ಬ್ಯಾಂಕ್ ಪ್ರಗತಿ ಪರಿಶೀಲನಾ ಸಭೆ ಹಾಗೂ ಜಿಲ್ಲಾ ಸಮಲೋಚನ ಸಮಿತಿ ಸಭೆಯು ಡಿ.16 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಅವರ ಅಧ್ಯಕ್ಷತೆಯಲ್ಲಿ, ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

## ಜಿಲ್ಲೆಯಲ್ಲಿ ಕನ್ನಡ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ ಕಾರವಾರ: – ಕನ್ನಡ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಅವರು ಉತ್ತರ ಕನ್ನಡ ಜಿಲ್ಲೆಯಲ್ಲಿ ಡಿ.15 ಮತ್ತು 16 ರಂದು ಪ್ರವಾಸಕೈಗೊಂಡಿದ್ದು, ಅಂದು ಬೆಳಗ್ಗೆ 10 ಗಂಟೆಗೆ ದಾಂಡೇಲಿಯಲ್ಲಿ ನಡೆಯುವ ಉತ್ತರ ಕನ್ನಡ ಜಿಲ್ಲಾ 25ನೇ ಕನ್ನಡ ಸಾಹಿತ್ಯ ಸಮ್ಮೇಳನದ ವಿಶೇಷ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 3.30 ಗಂಟೆಗೆ ಜೋಯಿಡಾ ತಾಲ್ಲೂಕಿನ ಹಳ್ಳಿಗಳಲ್ಲಿ ವಾಸಿಸುತ್ತಿರುವ ಕುಣಬಿ ಬುಡಕಟ್ಟು ಸಮುದಾಯಗಳ ಭೇಟಿ ಮತ್ತು ಸಂವಾದ ನಡೆಸಲಿದ್ದಾರೆ.

ಡಿ.16 ರಂದು ಬೆಳಗ್ಗೆ 11 ಗಂಟೆಗೆ ದಾಂಡೇಲಿಯ ಅಂಬೇವಾಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆಯುವ ಪ್ರಧಾನ ಮಂತ್ರಿ ಉಚ್ಚತರ ಶಿಕ್ಷಣ ಅಭಿಯಾನ ಯೋಜನೆಯಡಿ 'ನಮ್ಮ ಸಂವಿಧಾನ, ಸಮಾನತೆಯ ನೆಲೆಗಳು' ಎಂಬ ವಿಷಯದಡಿ ಒಂದು ದಿನದ ರಾಜ್ಯ ಮಟ್ಟದ ವಿಚಾರ ಸಂಕಿರಣದಲ್ಲಿ ಭಾಗವಹಿಸಲಿದ್ದಾರೆ ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೊನ್ನಾವರ: ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ ಕಾರವಾರ: ಹೊನ್ನಾವರ ತಾಲೂಕಿನ ಪಟ್ಟಣ ಶಾಖೆ ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿ ಪಕ್ಕದ ಹೊಸ ವಿದ್ಯುತ್ ಮಾರ್ಗದ ನಿರ್ಮಾಣದ ನಿಮ್ಮಿತ್ತ ಎಲ್.ಐ.ಸಿ ಫೀಡರ್ ವ್ಯಾಪ್ತಿಯಲ್ಲಿ ಹಾಗೂ ಗೇರುಸೊಪ್ಪ 33/11ಕೆ.ವಿ ವಿದ್ಯುತ್ ವಿತರಣಾ ಕೇಂದ್ರದ ನಿರ್ವಹಣಾ ಕೆಲಸದ ನಿಮ್ಮಿತ್ತ ಮಾಗೋಡ, ಉಪ್ಪೋಣಿ, ರೈಟ್, ಲೆಫ್ಟ್ ಹಾಗೂ ಕಾಲೋನಿ ಫೀಡರುಗಳ ವ್ಯಾಪ್ತಿಯಲ್ಲಿ ಡಿ.10 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸುವಂತೆ ಹೊನ್ನಾವರ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂವಿಧಾನದ ಮೂಲಕ ಸಮಾನತೆ ಕೊಟ್ಟ ಮಹಾ ಮೇಧಾವಿ



ಮಲ್ಲಮ್ಮ ನುಡಿ ವಾರ್ತೆ ಮುದಗಲ್: ಸಂವಿಧಾನ ಶಿಲ್ಪಿಡಾ. ಬಾಬಾ ಸಾಹೇಬ್ ಅಂಬೇಡ್ಕರ ಅವರು ಸಂವಿಧಾನದ ಮೂಲಕ ಸಮಾನತೆ ಕೊಟ್ಟ ಮಹಾ ಮೇಧಾವಿ ಎಂದು ಮುದಗಲ್ ಬ್ಲಾಕ ಕಾಂಗ್ರೇಸ್ ಅಧ್ಯಕ್ಷ ಶಿವ ಶಂಕರಗೌಡ ಪಾಟೀಲ್ ಶನಿವಾರ ಸಂಜೆ ತಿಳಿಸಿದರು. ಪಟ್ಟಣದ ಡಾ. ಬಾಬಾ ಸಾಹೇಬ್ ಅಂಬೇಡ್ಕರ ವೃತ್ತದಲ್ಲಿ ಅಂಬೇಡ್ಕರ ಅವರ ಪುಣ್ಯಸ್ಮರಣೆ ಆಚರಣೆಯಲ್ಲಿ ಭಾವ ಚಿತ್ರಕ್ಕೆ ಮಾಲಾರ್ಪಣೆ ಮಾಡಿ ಹಾಗೂ ಮೇಣದ ಭತ್ತಿ ಹಚ್ಚಿ , ಮಾತನಾಡಿದ ಅವರು ಸಮಾನತೆ ಹಾಗೂ ಮಾನವೀಯ ಮೌಲ್ಯಗಳನ್ನು ಕಲ್ಪಿಸಿಕೊಟ್ಟ ಡಾ. ಬಾಬಾ ಸಾಹೇಬ್ ಅಂಬೇಡ್ಕರ ಅವರು ವಿಶ್ವಕ್ಕೆ ಮಾದರಿಯಾಗಿದ್ದು ಅವರ ಸೇವೆ ಪ್ರತಿಯೊಬ್ಬರು ಸ್ಮರಿಸಬೇಕು. ಭಾರತದ ಭವಿಷ್ಯಕ್ಕೆ ಸುಂದರ ಚೌಕಟ್ಟು ಹಾಕಿ ಇಡೀ ದೇಶದ ಶ್ರೇಯೋಭಿವೃದ್ಧಿಗೆ ಕಾರಣರಾದವರು. ಡಾ. ಬಾಬಾ ಸಾಹೇಬ್ ಅಂಬೇಡ್ಕರ ಒಬ್ಬ ಧಾರ್ಶನಿಕ ಮಹಾನ್ ವ್ಯಕ್ತಿ. ಮತ್ತು ಅವರ ಆದರ್ಶ ಗುಣಗಳನ್ನು ಸರ್ವರೂ ಅಳವಡಿಕೊಂಡು ನಡೆಯಬೇಕು ಎಂದು ಮಾತನಾಡಿದರು.ಸ್ಥಳಿಯ ಪೋಲಿಸ್ ಠಾಣಾ ಪಿಎಸೈ ವೆಂಕಟೇಶ ಮಾಡಗೇರಿ, ದಲಿತ ಮುಖಂಡ ಶರಣಪ್ಪ ಕಟ್ಟಿಮನಿ, ಬಸವರಾಜ ಬಂಕದಮನಿ, ಮೋಹನ್ ಭಂಡಾರಿ, ಹನುಮಂತ ಬಡಿಗೇರ, ಎಸ್ಸಿ ಸೆಲ್ ಅಧ್ಯಕ್ಷ ಕೃಷ್ಣ ಛಲವಾದಿ, ಬ್ಲಾಕ ಕಾಂಗ್ರೇಸ್ ಸಮಿತಿ ಅಧ್ಯಕ್ಷ ಅಬ್ದುಲ್ ಖದೀರ, ಕಿಲ್ಲಾ ಕಾಂಗ್ರೇಸ್ ಸಮಿತಿ ಪ್ರಧಾನ ಕಾರ್ಯಧರ್ಶಿ ಬಸವರಾಜ ಜಲ್ಲಿ, ರಘುವೀರ ಛಲವಾದಿ, ಅಲ್ಪ ಸಂಖ್ಯಾತರ ಬ್ಲಾಕ ಸಮಿತಿ ಅಧ್ಯಕ್ಷ ಗಫರಖಾನ್, ಪದವಿಧರ ವಿಭಾಗ ಅಧ್ಯಕ್ಷ ಮೊಹ್ಮದ್ ಕೋರಿ, ಕೆಡಿಪಿ ಸದಸ್ಯ ರಾಘವೇಂದ್ರ ಕುದುರಿ, ಅಮೀರಬೇಗ ಉಸ್ತಾದ, ದುರಗಪ್ಪ ಕಟ್ಟಿಮನಿ, ನ್ಯಾಮತ್ ಖಾದ್ರಿ, ಮಂಜುನಾಥ ಬನ್ನಿಗೋಳ್ಕರ, ಮೌನೇಶ ಛಲವಾದಿ, ಚಾಂದಪಾಷ ಜಮಾದರ, ಎಝೂಜ ಜಮೀನದಾರ, ಪಿಸಿ ರಾಮಪ್ಪ, ಎಎಸ್ಸೈ ವೆಂಕಟಪ್ಪ ನಾಯಕ, ಗಯಾಸುದ್ದಿನ್ ಕಿಲ್ಲಾ ಸೇರಿದಂತೆ ಇತರರಿದ್ದರು.

## ಬೀದಿ ನಾಯಿಗಳನ್ನು ಪರಿಶೀಲಿಸಿ ಕೂಡಲೇ ಆರೋಗ್ಯ ಇಲಾಖೆ ಕ್ರಮವಹಿಸಲು ಸೂಚನೆ.

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಸರ್ವೋಚ್ಚ ನ್ಯಾಯಾಲಯವು ಸ್ವಯಂ ಪ್ರೇರಿತ ರಿಟ್ ಅರ್ಜಿ ಸಂಖ್ಯೆ 5/2025 ರಲ್ಲಿ ನೀಡಿರುವ ನಿರ್ದೇಶನದಂತೆ ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅವುಗಳನ್ನು ಪರಿಶೀಲಿಸ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಪತ್ರದ ಮೂಲಕ ಆರೋಗ್ಯ ಶಾಲೆ ಮಾಹಿತಿ ನೀಡುವುದು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ಕ್ರಮವಹಿಸಲು ಮಹಾನಗರ ಪಾಲಿಕೆಯ ಆಯುಕ್ತರಾದ ಅವಿನಾಶ ಶಿಂಧೆ ಅವರು ತಿಳಿಸಿದ್ದಾರೆ.

ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರಿಗೆ ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಪತ್ರದ ಮೂಲಕ ಆರೋಗ್ಯ ಶಾಖೆಗೆ ತಿಳಿಸಬೇಕೆಂದು ಆಯುಕ್ತರು ಮಹಾನಗರ ಪಾಲಿಕೆ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೀದಿ ನಾಯಿಗಳ ದತ್ತು ತೆಗೆದುಕೊಳ್ಳಲು/ಸಾಕುವ ಆಸಕ್ತಿಯುಳ್ಳ ನಾಗರಿಕರು/ಸಂಘ ಸಂಸ್ಥೆಯವರು ಪಾಲಿಕೆಗೆ ಸಂಪರ್ಕಿಸಬಹುದು, ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, (ಸರ್ಕಾರಿ ಖಾಸಗಿ), ಆಸ್ಪತ್ರೆಗಳು, ಕ್ರೀಡೆ ಸಂಸ್ಥೆಗಳು, ಬಸ್ ನಿಲ್ದಾಣಗಳು ಮತ್ತು ರೈಲ್ವೆ ನಿಲ್ದಾಣದಲ್ಲಿ ಇರುವ ಬೀದಿ ನಾಯಿಗಳನ್ನು ಸ್ಥಳಾಂತರಿಸುವ ಸಲುವಾಗಿ ಪಾಲಿಕೆಯ ಕಚೇರಿಗೆ ಸಂಪರ್ಕಿಸಲು ಸೂಚಿಸಲಾಗಿದೆ.ಬೀದಿ ನಾಯಿಗಳ ಕುರಿತು ಮಾಹಿತಿಯ ಬೇಕಾದಲ್ಲಿ ಪಾಲಿಕೆಯ ಹೆಲ್ಪ್‌ಲೈನ್ 6363544601 ಗೆ ಸಂಪರ್ಕಿಸಲು ಕೋರಿದೆ.

## ಡಿ.10ರಂದು ರಾಮತ್ನಾಳ ಅನ್ನದಾನೇಶ್ವರ ಜಾತ್ರ ಮಹೋತ್ಸವ



ಮಲ್ಲಮ್ಮ ನುಡಿ ವಾರ್ತೆ ಮುದಗಲ್ :ಸಮೀಪದ ರಾಮತ್ನಾಳ ಗ್ರಾಮದಲ್ಲಿ ಪೂಜ್ಯ ಕಾಯಕಯೋಗಿ, ತ್ರಿವಿಧ ದಾಸೋಹಿ ಶ್ರೀ ಮ.ನಿ.ಪ್ರ ಜಗದ್ಗುರು ಲಿಂ. ಡಾ.ಅಭಿನವ ಮಹಾಶಿವಯೋಗಿಗಳ ದಿವ್ಯ ಪ್ರಕಾಶನದಲ್ಲಿ

ಶ್ರಿ ಅನ್ನದಾನೇಶ್ವರ ಜಾತ್ರ ಮುಹೋತ್ಸವ ಹಾಗೂ ಪ್ರವಚನ ಮಹಾಮಂಲ ಕಾರ್ಯಕ್ರಮ ಬುಧುವಾರದಂದು ಜರುಗಲಿದೆ.

ಬೆಳಿಗ್ಗೆ ಅನ್ನದಾನೇಶ್ವರ ಶಿವಯೋಗಿಗಳ ಕರ್ತೃ ಗದ್ದಗೆಗೆ ರುದ್ರಾಭಿಷೇಕ, ಬಿಲ್ವಾರ್ಚನೆ, ಮಹಾಮಂಗಲ, ಪುರಾಣಗಳು, ವಿವಿಧ ದಾರ್ಮಿಕ ಆಚರಣೆಗಳು ಸೇರಿದಂತೆ ಸಂಜೆ ಧಾರ್ಮಿಕ ಸಭೆ ಜರುಗಲಿವೆ.

ಅದೇ ದಿನ ರಾತ್ರಿ 9;30ಕ್ಕೆ ಉತ್ತರ ಕರ್ನಾಟಕದ ಹೆಸರಾಂತ ವಾಧ್ಯಗೋಷ್ಠಿ ಅಪ್ಪು ಮೇಲೋಡಿಸ್, ಅಗೋಲಿಯವರಿಂದ ರಸಮಂಜರಿ ಕಾರ್ಯಕ್ರಮ ಜರುಗುತ್ತದೆ.

ಸಕಲ ಭಕ್ತಾಧಿಗಳು ಜಾತ್ರ ಮಹೋತ್ಸವದಲ್ಲಿ ಭಾಗವಹಿಸಿ ಶ್ರಿಗಳ ಕೃಪೆಗೆ ಪಾತ್ರರಾಗಿಬೇಕು ಎಂದು ರಾಮತ್ನಾಳ ಗ್ರಾಮಸ್ಥರ ಆಶಯವಾಗಿದೆ. ಹಾಗೂ ಗುರುವಾರದಂದು ಬೆಂಚಮಟ್ಟಿ ಗ್ರಾಮದಲ್ಲಿ ಪೂಜ್ಯ ಶ್ರೀ ಜಗದ್ಗುರು ಮುಪ್ಪಿನ ಬಸವಲಿಂಗ ಮಹಾಸ್ವಾಮಿಜೀ ಪಾದ ಪೂಜೆ ಹಾಗೂ ಗಣಾರಾಧನೆ, ಕಬಡ್ಡಿ ಪಂದ್ಯಾವಳಿ ಕಾರ್ಯಕ್ರಮ ಜರುಗುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಕಾರ್ಯಕ್ರಮದಲ್ಲಿ ವಿವಿಧ ಭಾಗದ ಹಲವು ಶ್ರೀಗಳು ಸೇರಿದಂತೆ ರಾಜಕೀಯ ಗಣ್ಯರು, ಮುಖಂಡರು ಸೇರಿದಂತೆ ಹಲವು ಭಕ್ತಾಧಿಗಳು ಉಪಸ್ಥಿತರಿರುತ್ತಾರೆ.

## ಕೇಂದ್ರ್ರದ ಜಾತಿಗಣತಿಯಲ್ಲಿ ವಿಶ್ವಕರ್ಮ ಎಂದು ಜಾತಿ ನೋಂದಾಯಿಸಲು ಕರೆ

ಮಲ್ಲಮ್ಮ ನುಡಿ ವಾರ್ತೆ ಅಫಜಲಪುರ: ರಾಜ್ಯದಲ್ಲಿ 40 ಲಕ್ಷ ಜನಸಂಖ್ಯೆ ಹೊಂದಿರುವ ವಿಶ್ವಕರ್ಮ ಸಮುದಾಯದವರು ಉಪಜಾತಿ ಹಾಗೂ ವಿಶ್ವಕರ್ಮ ಲಿಂಗಾಯತ ಎಂದು ಜಾತಿಗಣತಿಯಲ್ಲಿ ನೋಂದಣಿ ಮಾಡಿರುವುದರಿಂದ ಈಗ 8 ಲಕ್ಷಕ್ಕೆ ಇಳಿಕೆ ಕಂಡಿದೆ. ಇದರಿಂದಾಗಿ ಸಮಾಜದ ಮೇಲೆ ದುಷ್ಪರಿಣಾಮ ಬೀರಲಿದೆ. ಹೀಗಾಗಿ ಮುಂಬರುವ ಕೇಂದ್ರ ಸರ್ಕಾರದ ಜಾತಿಗಣತಿಯಲ್ಲಿ ಕೇವಲ ವಿಶ್ವಕರ್ಮ ಎಂದು ನೋಂದಾಯಿಸಿ ಎಂದು ವಿಶ್ವಕರ್ಮ ಮಹಾಸಭಾದ ರಾಜ್ಯಾಧ್ಯಕ್ಷ ಹಾಗೂ ವಿಧಾನ ಪರಿಷತ್ ಮಾಜಿ ಸದಸ್ಯ ಕೆ.ಪಿ. ನಂಜುಂಡಿ ಕರೆ ನೀಡಿದರು.ಪಟ್ಟಣದ ನ್ಯಾಷನಲ್ ಫಂಕ್ಷನ್ ಹಾಲ್ ನಲ್ಲಿ ನಡೆದ ಶ್ರೀ ಮೂರುಝಾವಧೀಶ್ವರ ಮಠದ ಶ್ರೀ ಚಿಕ್ಕೇಶ್ವರ ಮಹಾಸ್ವಾಮಿಗಳ ಪುಣ್ಯಾರಾಧನೆ ಕಾರ್ಯಕ್ರದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇಡೀ ದೇಶದಲ್ಲೇ ಐದು ಕುಲಕಸುಬು ಮಾಡುವ ಏಕೈಕ ವಿಶ್ವಕರ್ಮ ಸಮುದಾಯವಾಗಿದೆ. ದೇಶದ ಸಂಸ್ಕೃತಿಯನ್ನು ಉಳಿಸುವಲ್ಲಿ ವಿಶ್ವಕರ್ಮ ಸಮುದಾಯದ ಕೊಡುಗೆ ಅಪಾರವಾಗಿದೆ. ಸಂಘಟನೆಯಲ್ಲಿ ವ್ಯಾಪಾರಿಕರಣ ಆದಾಗ ಸಮುದಾಯ ಅಭಿವೃದ್ಧಿಗೊಂದಲು ಸಾಧ್ಯವಿಲ್ಲ. ರಾಜಕೀಯ, ಶೈಕ್ಷಣಿಕ, ಆರ್ಥಿಕವಾಗಿ ಸಧೃಡರಾಗಲು ಜಾತಿ ಸಂಘಟನೆ ಅತ್ಯಂತ ಮಹತ್ವವಾಗಿದೆ. ಹೀಗಾಗಿ ನಾವೆಲ್ಲರೂ ಮೊದಲು ಸಂಘಟಿತರಾಗಬೇಕಾಗಿದೆ,

ದೇವಸ್ಥಾನ ನಿರ್ಮಿಸುವವರು ನಾವು ನಂತರ ದೇವಸ್ಥಾನದಿಂದ ಹೊರಗೆ ನಿಲ್ಲುವವವರು ನಾವು, ಹುಟ್ಟಿನಿಂದ ಹಿಡಿದು ಸತ್ತ ವ್ಯಕ್ತಿ ಶವಸಂಸ್ಕಾರಕ್ಕೆ ಬೇಕಾಗುವ ಸಲಕರಣೆಗಳು ಮಾಡಿ ಕೊಡುವ ನಾವು ಎಲ್ಲರಿಂದ ದೂರವಾಗಿದ್ದೇವೆ. ಯಾವುದೇ ಕುಲಕಸಬು ಇಲ್ಲದ ಸಮುದಾಯದಗಳು ಇಂದು ರಾಜಕೀಯದಲ್ಲಿ ಬಲಾಡ್ಯರಾಗಿದ್ದಾರೆ. ಎಲ್ಲವನ್ನು ಬಲ್ಲವರು ನಾವು ಇಂದು ಕಟ್ಟಕಡೆಯಲ್ಲಿ ಇದ್ದೇವೆ ಎಂದು ಬೇಸರದ ಮಾತುಗಳನ್ನಾಡಿದರು.

ಅಲ್ಲದೇ ಸಮುದಾಯದ ಸ್ವಾಮೀಜಿಗಳು ಕೂಡ ಒಂದಾಗಿ ನಡೆದಾಗ ಮಾತ್ರ ಸಮಾಜದ ಗುರಿ ತಲುಪಲು ಸಾಧ್ಯವಾಗುತ್ತದೆ. 9 ವರ್ಷಗಳ ನಿರಂತರ ಹೋರಾಟದಿಂದ ಫಲವಾಗಿ ಸರ್ಕಾರ ವಿಶ್ವಕರ್ಮ ಹಾಗೂ ಜಕಣಾಚಾರ್ಯರ ಜಯಂತಿಯನ್ನು ಆಚರಿಸಲು ಮುಂದಾಗಿದೆ. ರಾಜ ಮಹಾರಾಜರ ಕಾಲದಲ್ಲೂ ನಮ್ಮ ಸಮುದಾಯಕ್ಕೆ ಅನ್ಯಾಯವಾಗುತ್ತಿತ್ತು, ಈಗಲೂ ನಮ್ಮ ಸಮುದಾಯಕ್ಕೆ ನಿರಂತರವಾಗಿ ಅನ್ಯಾಯ ನಡೆಯುತ್ತಾ ಬರುತ್ತಿದೆ. ನಮ್ಮ ಸಮುದಾಯಕ್ಕೆ ಅನ್ಯಾಯವಾದರೆ ಯಾವುದೇ ಕಾರಣಕ್ಕೂ ಸುಮ್ನೆ ಕೂಡುವ ವ್ಯಕ್ತಿ ನಾನಲ್ಲ, ಸಮಾಜಕ್ಕಾಗಿ ಜೀವ ಕೂಡ ಕೊಡಲು ಸಿದ್ದನಿದ್ದೇನೆ. ಆದರೆ ಮೊದಲು ನೀವು ನನ್ನನ್ನು ನಂಬಿ ನಾನು ಯಾವತ್ತೂ ಕೂಡ ಸಮಾಜಕ್ಕೆ ದ್ರೋಹ ಮಾಡುವುದಿಲ್ಲ. ಸರ್ಕಾರದಿಂದ 32 ಜಿಲ್ಲೆಯಲ್ಲಿ ಸಮುದಾಯ ಭವನ, ವಸತಿ ನಿಲಯ ನಿರ್ಮಾಣಕ್ಕೆ ಸಂಕಲ್ಪ ಮಾಡಿದ್ದೇನೆ .ಹೀಗಾಗಿ ನನ್ನ ಜತೆ ಗಟ್ಟಿಯಾಗಿ ನಿಲ್ಲಿ ಸಾಕು, ಮುಂದಿನದು ನಾನು ನೋಡಿಕೊಳ್ಳುತ್ತೇನೆ ಎಂದು ತಿಳಿಸಿದ ಅವರು ಕಲಬುರಗಿ ಜಿಲ್ಲೆಯಲ್ಲಿ ವಿಶ್ವಕರ್ಮ ಸಮುದಾಯವನ್ನು ಸಂಘಟಿಸುವಲ್ಲಿ ಈರಣ್ಣ ಪಂಚಾಳ್ ನಿರಂತರವಾಗಿ ಶ್ರಮವಹಿಸಿದ್ದಾರೆ. ಅವರ ಶ್ರಮ ಸಮಾಜ ಯಾವತ್ತೂ ಕೂಡ ಮರೆಯುವುದಿಲ್ಲ ಎಂದರು.

ವಿಶ್ವಕರ್ಮ ಸಮುದಾಯದ ಹಿರಿಯ ಮುಖಂಡ ಈರಣ್ಣ ಪಂಚಾಳ್ ಪ್ರಾಸಾವಿಕವಾಗಿ ಮಾತನಾಡಿ, ರಾಜ್ಯದಲ್ಲಿ ವಿಶ್ವಕರ್ಮ ಸಮುದಾಯ 40 ಲಕ್ಷ ಜನಸಂಖ್ಯೆ ಹೊಂದಿದ್ದರೂ ಸಹ ಬೆಳಕಿಗೆ ಮಾತ್ರ ಇನ್ನೂ ಬಂದಿರಲಿಲ್ಲ, ಆದರೆ ಕೆ.ಪಿ.ನಂಜುಂಡಿ ಈ ಸಮುದಾಯವನ್ನು ಬೆಳಕಿಗೆ ತರುವ ಕೆಲಸ ಮಾಡಿದ್ದಾರೆ. ನಿರಂತರವಾಗಿ ಸಂಘಟನೆ ಮತ್ತು ಹೋರಾಟ ಮಾಡುವ ಮೂಲಕ ವಿಶ್ವಕರ್ಮ ಅಭಿವೃದ್ಧಿ ನಿಗಮ ಮಂಡಳಿ, ಜಕಣಾಚಾರ್ಯ, ವಿಶ್ವಕರ್ಮ ಜಯಂತಿಯನ್ನು ಸರ್ಕಾರದಿಂದ ಆಚರಣೆ ಮಾಡುವಂತೆ ಮಾಡಿದ್ದಾರೆ. ಅಲ್ಲದೇ ಮೂರುಝಾವಧೀಶ್ವರ ಮಠದ ಬ್ರಹ್ಮನಂದ ಮಹಾಸ್ವಾಮಿಗಳ ವಯಸ್ಸು ಚಿಕ್ಕದಾದರೂ ಸಮಾಜದ ಮೇಲೆ ಅತ್ಯಂತ ಕಾಳಜಿಯಿಂದ ಇಂತಹ ಅನೇಕ ಕಾರ್ಯಕ್ರಮಗಳನ್ನು ಮಾಡುವ ಮೂಲಕ ಸಮುದಾಯದ ಸಂಘಟನೆಗೆ ಶ್ರಮಿಸುತ್ತಿರುವುದು ಶ್ಲಾಘನೀಯವಾಗಿದೆ ಎಂದರು.

## ಉಮ್ಮಾಪೂರ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮ ಸಭೆ



ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ: ಮಕ್ಕಳ ಗ್ರಾಮ ಸಭೆಯಲ್ಲಿ ಸಂಬಧಿಸಿದ ಇಲಾಖಾ ಅಧಿಕಾರಿಗಳು ಮತ್ತು ಇಲಾಖೇತರರು, ಮಕ್ಕಳಿಗೆ ವಿಷಯಗಳ ಕುರಿತು ಅವರಿಗೆ ತಿಳಿಯುವ ಹಾಗೆ ಕೆಲಸ ಮಾಡಬೇಕು ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಮೇಶ ಸುಲ್ಫಿ ಹೇಳಿದರು.

ತಾಲ್ಲೂಕಿನ ಚಂಡಕಾಪೂರ ಗ್ರಾಮ ಪಂಚಾಯತ್ ವ್ಯಾಪ್ತಿಯ ಉಮ್ಮಾಪೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ಹಮ್ಮಿಕೊಂಡ ಮಕ್ಕಳ ಹಕ್ಕುಗಳ ಗ್ರಾಮ ಸಭೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ, ಮಕ್ಕಳ ಹಕ್ಕುಗಳು ಉಲ್ಲಘನೆ ಆಗದಂತೆ ನೋಡಿಕೊಂಡಾಗ ಮಾತ್ರ ಸಭೆ ಮಾಡಿದಕ್ಕೂ ಸಾರ್ಥಕವಾಗುತ್ತಿದೆ. ಹೀಗಾಗಿ ಮಕ್ಕಳ ಬದುಕುವ ಹಕ್ಕು, ರಕ್ಷಣೆ ಹಕ್ಕು, ವಿಕಾಸ ಹೊಂದುವ ಹಕ್ಕು ಹಾಗೂ ಮಕ್ಕಳ ಆರೋಗ್ಯ ಮತ್ತು ಪೌಷ್ಠಿಕತೆಗೆ ಸಂಬಂಧಿಸಿದಂತೆ ಇರುವ ಸೇವೆಗಳ ಹಕ್ಕು, ಸರ್ಕಾರ ದಿಂದ ಮಕ್ಕಳಿಗೆ ಲಭ್ಯ ಇರುವ ಉಚಿತ ಶಿಕ್ಷಣ ಪಠ್ಯಪುಸ್ತಕ, ಸಮವಸ್ತ್ರ ಮತ್ತು ಶೂಗಳ ವಿತರಣೆ ಮಧ್ಯಾಹ್ನದ ಬಿಸಿಯೂಟ, ಗ್ರಂಥಾಲಯ ಸೌಕರ್ಯ, ಕ್ರೀಡಾ ಚಟುವಟಿಕೆ, ವಸತಿ ನೀಲಯ ಸೇರಿದಂತೆ ಅವರ ಸಮಗ್ರ ಅಭಿವೃದ್ಧಿಗಾಗಿ ಬೇಕಾಗುವ ಮಾಹಿತಿ ನೀಡಬೇಕು ಎಂದರು.

ಆರ್.ಎಲ್.ಎಚ್.ಪಿ.ಸಂಯೋಜಕ ನಾಗರಾಜ ಶೀಲವಂತ ಮಕ್ಕಳ ನಂತರ ಮಕ್ಕಳು ತಮ್ಮ ಸಮಸ್ಯೆ ಕುರಿತು ಮುಕ್ತವಾಗಿ ಹಂಚಿಕೊಂಡು ಮನವಿ ಸಲ್ಲಿಸಿದರು.

ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮಲ್ಲನ ಗೌಡ ಅವರು ಮಾತನಾಡಿ, ಸಭೆಯಲ್ಲಿ ತಿಳಿಸಿದಾಗ ನೀವು ನೀಡಿದ ಮನೆಯಲ್ಲಿನ ಪ್ರತಿಯೊಂದು ಸಮಸ್ಯೆಗಳನ್ನು ಬಗೆ ಹರಿಸಲಾಗುವುದು ಎಂದು ಭರವಸೆ ನೀಡಿದರು.

ಹಕ್ಕುಗಳ ಬಗ್ಗೆ ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ಗ್ರಾಮ ಪಂಚಾಯತ್ ಅಧ್ಯಕ್ಷೆ ಕೇಂಚವ್ವಾ ಮಾರುತಿ ಅಧ್ಯಕ್ಷತೆ ವಹಿಸಿದರು.

ಈಸಂದರ್ಭದಲ್ಲಿಎಸ್.ಡಿ.ಎಂ.ಸಿ.ಅಧ್ಯಕ್ಷ ದಿಲೀಪಗಾಯಕವಾಡ, ಗ್ರಾ.ಪಂ.ಸದಸ್ಯ ಬಬ್ಲುಶೇಟ, ಮುಖ್ಯಗುರು ದೇವೇಂದ್ರ ಮೇಹಕರೇ, ಗ್ರಾ.ಪಂ.ಕಾ..ದ.ಸುನೀಲ ಝಿಳ್ಳೆ ಸೇರಿದಂತೆ ಸಂಬಂಧ ಇಲಾಖೆ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

## ಡಿ. 10 ರಂದು ಮಾನವ ಹಕ್ಕುಗಳ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಪ್ರತಿ ವರ್ಷದಂತೆ ಈ ವರ್ಷವು ಕೂಡ ಡಿಸೆಂಬರ್ 10 ರಂದು ಬೆಳಿಗ್ಗೆ 10–00 ಗಂಟೆಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಮಾನವ ಹಕ್ಕುಗಳ ದಿನಾಚರಣೆಯನ್ನು ಆಚರಿಸಲಾಗುತಿದೆ ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಸದರಿ ಕಾರ್ಯಕ್ರಮಕ್ಕೆ ತಾವು ಹಾಗೂ ತಮ್ಮ ಅಧೀನದಲ್ಲಿ ಬರುವ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರೊಂದಿಗೆ ಬೆಳಿಗ್ಗೆ 10.00 ಗಂಟೆಗೆ ಹಾಜರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಸೆಂಬರ್ ೦೯ ರಂದು ಮಹಾಯಾನ ಕಾದಂಬರಿ ಲೋಕಾರ್ಪಣೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಸಪ್ನ ಬುಕ್ ಹಾಸ್, ಬೆಂಗಳೂರು ಕುಟುಂಬ ಪ್ರಕಾಶನ ಕಲಬುರಗಿ ಪ್ರೊ. ಎಚ್.ಟಿ. ಪೋತೆ ಅವರ ಡಾ. ಬಿ.ಅರ್. ಅಂಬೇಡ್ಕರ್ ಜೀವನ ಕಥನ ಕುರಿತಾದ ಮಹಾಯಾನ ಕಾದಂದಬರಿ ಲೋಕಾರ್ಪಣೆ ಸಮಾರಂಭವನ್ನು ಬೆಳಿಗ್ಗೆ 10.30 ಗಂಟೆಗೆ ಮಹಾತ್ಮ ಗಾಂಧಿ ಸಭಾಂಗಣ ಕಾರ್ಯಸೌಧ, ಗುಲಬರ್ಗಾ ವಿದ್ಯಾಲಯ ಕಲಬುರಗಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಲೇಖಕರು, ಬೂಕರ್ ಪ್ರಶಸ್ತಿ ವಿಜೇತರು (ಅನುವಾದ ದೀಪಾ ಬಸ್ತಿ ಕೃತಿ ಲೋಕಾರ್ಪಣೆ ಮಾಡುವರು. ಗುಲಬರ್ಗಾ ವಿಶ್ವವಿದ್ಯಾಲಯ ಕುಲಪತಿಗಳು ಪ್ರೊ. ಶಶಿಕಾಂತ ಎಸ್. ಉಡಿಕೇರಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸುವರು. ವಿಮರ್ಶಕರು, ಸಾಹಿತಿಗಳು ಎಸ್. ಆರ್. ವಿಜಯಶಂಕರ್, ಕೃತಿ ಕುರಿತು ಪರಿಚಯಿಸುವರು.

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ ಡೀನರು, ಮಾನವಿಕ ಮತ್ತು ಭಾಷಾನಿಕಾಯ ಪ್ರೊ. ವಿಕ್ರಮ ವಿಸಾಜಿ, ಡೀನರು, ಅತಿಥಗಳಾಗಿ ಭಾಗವಹಿಸುವರು. ಡೀನರು, ಕಲಾನಿಕಾಯ ಹಾಗೂ ನಿರ್ದೇಶಕರು, ಕನ್ನಡ ಅಧ್ಯಯನ ಸಂಸ್ಥೆ ಗುಲಬರ್ಗಾ ವಿಶ್ವಿದ್ಯಾಲಯ ಪ್ರೊ. ಎಚ್.ಟಿ. ಪೋತೆ ಉಪಸ್ಥಿತರಿರುವರು.

## ಗು ವಿ ಕಲಬುರಗಿ ಪ್ರಸಾರಾಂಗ, ಕರ್ನಾಟಕ ರಾಜ್ಯೋತ್ಸ ಪ್ರಶಸ್ತಿ ಪ್ರದಾನ ಸಮಾರಂಭ.

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಗುಲಬರ್ಗಾ ವಿಶ್ವವಿದ್ಯಾಲಯ ಕಲಬುರಗಿ ಪ್ರಸಾರಂಗ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಸಮಾರಂಭವು ಇದೇ ಡಿಸೆಂಬರ್ 10 ರಂದು ಗುಲಬರ್ಗಾ ವಿಶ್ವವಿದ್ಯಾಲಯ ಮಹಾತ್ಮ ಗಾಂಧಿ ಸಭಾಂಗಣದಲ್ಲಿ ಬೆಳಿಗ್ಗೆ 10.30 ಗಂಟೆಗೆ ಚಿನ್ನದ ಪದಕ ಪ್ರದಾನ ಸಮಾರಂಭ ಏರ್ಪಡಿಸಲಾಗಿದೆ.

ಗುಲಬರ್ಗಾ ವಿಶ್ವವಿದ್ಯಾಲಯೊ ಕುಲಪತಿಗಳಾದ ಪ್ರೊ. ಶಶಿಕಾಂತ ಎಸ್. ಉಡಿಕೇರಿ ಅಧ್ಯಕ್ಷತೆ ವಹಿಸುವರು. ಬೂಕರ ಪ್ರಶಸ್ತಿ ವಿಜೇತ ಲೇಖಕರು ದೀಪಾ ಬಸ್ತಿ ಯವರು ಪ್ರಶಸ್ತಿಗಳನ್ನು ಪ್ರಧಾನ ಮಾಡುವರು, ಮುಖ್ಯ ಅತಿಥಿಗಳಾಗಿ ವಿಮರ್ಶಕರು ಮತ್ತು ಸಾಹಿತಿಗಳಾದ ಎಸ್.ಆರ್. ವಿಜಯಶಂಕರ, ಕರಾದಸಂಸ, ಬೆಂಗಳೂರು ರಾಜ್ಯ ಸಂಚಾಲಕರಾದ ಡಾ. ಡಿ.ಜಿ. ಸಾಗರ, ಭಾಗಹಿಸುವರು.

ಗುಲಬರ್ಗಾ ವಿಶ್ವವಿದ್ಯಾಲಯ ಸಿಂಡಿಕೇಟ್ ಸದಸ್ಯರಾದ ಡಾ. ಶ್ರೀದೇವಿ ಎಸ್. ಕಟ್ಟಿಮನಿ, ಗುಲಬರ್ಗಾ ವಿಶ್ವವಿದ್ಯಾಲಯ ವಿದ್ಯಾವಿಷಯಕ ಪರಿಷತ್ ಸದಸ್ಯರಾದ ಪ್ರೊ. ಸಿ. ಸುಲೋಚನಾ, ಗೌರವ ಉಪಸ್ಥಿತಿ ಗುಲಬರ್ಗಾ ವಿಶ್ವವಿದ್ಯಾಲಯ ಕುಲಸಚಿವರು (ಮೌಲ್ಯಮಾಪನ) ಡಾ. ಎನ್.ಜಿ. ಕಣ್ಣೂರ, ಹಣಕಾಸು ಅಧಿಕಾರಿಗಳಾದ ಜಯಾಂಬಿಕ ಗುಲಬರ್ಗಾ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಸಂಸ್ಥೆಯ ಡೀನರು, ಕಲಾ ನಿಕಾಯ ಹಾಗೂ ನಿರ್ದೇಶಕರಾದ ಪ್ರೋ. ಎಚ್.ಟಿ.ಪೋತೆ ಮತ್ತು ಕುಲಸಚಿವ ಪ್ರೋ.ರಮೇಶ ಲಂಡನಕರ್ ಭಾಗವಹಿಸುವರು

## ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ : ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಕಲಬುರಗಿ ಜಿಲ್ಲೆಯ ಗ್ರಾಮೀಣ ಪ್ರದೇಶದವರಿಗೆ ನಗರದಲ್ಲಿರುವ ಎಸ್.ಬಿ.ಐ ಸ್ವಯಂ ಉದ್ಯೋಗ ಸಂಸ್ಥೆಯಲ್ಲಿ ತರಬೇತಿಗಾಗಿ ಅರ್ಜಿಯನ್ನು ಆಹ್ವಾನಿಸಲಾಗಿದೆ ಎಂದು ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ, ರಾಮಮಂದಿರ ರಸ್ತೆ ಆರ್ಯನ್ ಸ್ಕೂಲ್ ಎದುರಗಡೆ, ಮಹಾದೇವಪ್ಪ ರಾಂಪೂರೆ ಬಡಾವಣೆ ಜಿ.ಡಿ.ಎ. ಲೇಔಟ್ ದರಿಯಾಪುರ, ಎಸ್.ಬಿ.ಐ. ಆರ್‌ಸೆಟಿ ನಿದೇಶಕರು ಅವರು ತಿಳಿಸಿದ್ದಾರೆ.

ತರಬೇತಿ ಹೆಸರು ಇಂತಿವೆ. ಕೃಷಿ ಉದ್ಯಮಿ (ಕುರಿ ಮತ್ತು ಆಡು ಸಾಕಾಣಿಕೆ. ಹೈನುಗಾರಿಕೆ ಮತ್ತು ಎರಡಹುಳು ಗೊಬ್ಬರ ತಯಾರಿಕೆ, ಕೃಷಿ ಉದ್ಯಮಿ (ಕುರಿ ಮತ್ತು ಆಡು ಸಾಕಣಿಕೆ, ಹೈನುಗಾರಿಕೆ ಮತ್ತು ಎರೆಹುಳ ಗೊಬ್ಬರ ತಯಾರಿಕೆ, ಸಿಸಿಟಿವಿ ಕ್ಯಾಮರಾ.ಸೆಕ್ಯುರಿಟಿ ಅಲಾರ್ಮ್ ಮತ್ತು ಸ್ಮೋಕ ಡಿಟೆಕ್ಟರ್ ಅಳವಡಿಕೆ ಮತ್ತು ಸೇವೆ ತರಬೇತಿಯ ತಯಾರಿಕೆ 13 ದಿನಗಳ ತರಬೇತಿ ಇದ್ದು, ಕೊನೆಯ ದಿನಾಂಕ: ಡಿಸೆಂಬರ್ 14 ಇರುತ್ತದೆ.

ಪಾಸ್ಟ್ ಪುಡ್ ಸ್ಟಾಲ್ ಉಧ್ಯಮ 12 ದಿನಗಳ ತರಬೇತಿ. ಹೊಲಿಗೆ ತರಬೇತಿ (ಮಹಿಳೆಯರಿಗಾಗಿ) 31 ದಿನಗಳ ತರಬೇತಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ:ಡಿಸೆಂಬರ್ 17 ಇರುತ್ತದೆ.

ಈ ತರಬೇತಿ ಸಮಯದಲ್ಲಿ ಉಚಿತ ಊಟ. ಮತ್ತು ವಸತಿ ಒದಗಿಸಲಾಗುವುದು , ತರಬೇತಿ ಪಡೆಯಲು ಬಯಸುವ ಕಲಬುರಗಿ ಜಿಲ್ಲೆಯ ಗ್ರಾಮೀಣ ಭಾಗದ ಕನಿಷ್ಟ ಕನ್ನಡ ಓದಲು ಮತ್ತು ಬರೆಯಲು ಬರಬೇಕು 18 ರಿಂದ 45 ವರ್ಷದ ವಯೋಮಿತಿ ಇರಬೇಕೆಂದು ಅವರು ತಿಳಿಸಿದರು.

ಬಿ,ಪಿ.ಎಲ್/ಅಂತ್ರೋದಯ. ರೇಷನ್/ಒಉಓಖಇಉಂ ಕಾರ್ಡ್. ಹೊಂದಿದ ಕುಟುಂಬದ ನಿರುದ್ಯೋಗಿಗಳು ಅರ್ಜಿ ಸಲ್ಲಿಸಬಹುದು ಅರ್ಜಿ ಸಲ್ಲಿಸಲು ನಮ್ಮ ಕಚೇರಿಗೆ ಭೇಟಿ ನೀಡಿ ಅಥವಾ ಈ ಕೆಳಗಿನ ದೂರವಾಣಿಗಳ ಸಂಖ್ಯೆಗಳಿಗೆ ಸಂಪರ್ಕಿಸಿ ಅರ್ಜಿಯೊಂದಿಗೆ 4 ಆಧಾರ ಕಾರ್ಡ ಪ್ರತಿ 4.ಇತ್ತಿಚಿನ ಭಾವಚಿತ್ರಗಳು 4, ಬಿ.ಪಿ.ಎಲ್./ ಅಂತ್ಯೋದಯ ರೇಷನ್ ಕಾರ್ಡ್ ಮತ್ತು 4 ಬ್ಯಾಂಕ್ ಅಕೌಂಟ್ ಪಾಸಬುಕ್, ಪ್ರತಿಗಳೊಂದಿಗೆ ಲಗತ್ತಿಸಬೇಕು.

ಬೆಳಿಗ್ಗೆ 9.30ರಿಂದ 5.30ರವರಗೆ ಕುಟುಂಬದ ನಿರುದ್ಯೋಗಿಗಳು ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಮ್ಮ ಕಛೇರಿಗೆ ಭೇಟಿ ನೀಡಿ ಅಥವಾ ಈ ಕೆಳಗಿನ ಸಂಖ್ಯೆಗಳಿಗೆ ಸಂಪರ್ಕಿಸಿ. 9901694389,9900135705,7019939996, 9901091823 ಸಂಪರ್ಕಿಸಬಹುದು.



ಬಾಗಲಕೋಟೆ : ಸಮಗ್ರ ಶಿಕ್ಷಣ ಅಭಿಯಾನದ ಜಿಲ್ಲಾ ಉಪ ಸಮನ್ವಯಾಧಿಕಾರಿಯಾಗಿ ನಿವೃತ್ತಿ ಹೊಂದಿದ ಸಿ.ಆರ್.ಓಣಿ ಅವರಿಗೆ ಇಲಾಖೆಯಿಂದ ಆತ್ಮೀಯವಾಗಿ ಬೀಳ್ಕೊಡಲಾಯಿತು. ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ ಸೇರಿದಂತೆ ಇಲಾಖೆಯ ಇತರೆ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಇದ್ದಾರೆ.

## ಬೆಳೆ ವಿಮೆ; ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಕಾರವಾರ: ಜಿಲ್ಲೆಯಲ್ಲಿ 2025–26 ನೇ ಸಾಲಿನ ಹಿಂಗಾರು ಮತ್ತು ಬೇಸಿಗೆ ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬೀಮಾ (ವಿಮಾ) ಯೋಜನೆಯಡಿಯಲ್ಲಿ ನೀರಾವರಿ ಭತ್ತ, ಮಳೆಯಾಶ್ರಿತ ಹೆಸರು, ಹುರಳಿ ಮತ್ತು ಶೇಂಗಾ ಬೆಳೆಗಳನ್ನು ರೈತರು ವಿಮೆಗೊಳಪಡಿಸಬಹುದು.

ಹಿಂಗಾರು ಹಂಗಾಮಿನ ಶೇಂಗಾ ಬೆಳೆಗೆ ಅಂಕೋಲಾ ತಾಲೂಕಿನಲ್ಲಿ ಬೆಲೇಕೆರೆ, ಬಳಲೆ, ಬಾಸಗೋಡ ಹೋಬಳಿ ಹಾಗೂ ಕುಮಟಾ ತಾಲೂಕಿನ ಗೋಕರ್ಣ ಹೋಬಳಿ ವ್ಯಾಪ್ತಿಗೆ ಒಳಪಟ್ಟಿವೆ. ನೀರಾವರಿ ಭತ್ತದ ಬೆಳೆಗೆ ಹೊನ್ನಾವರ ತಾಲೂಕಿನ ಹೊನ್ನಾವರ ಹೋಬಳಿ ಹಾಗೂ ಕುಮಟಾ ತಾಲೂಕಿನ ಕೂಜಳ್ಳಿ ಹೋಬಳಿ ವ್ಯಾಪ್ತಿಗೆ ಒಳಪಟ್ಟಿದೆ. ಮಳೆಯಾಶ್ರಿತ ಹೆಸರು ಹಾಗೂ ಹುರಳಿ ಬೆಳೆಗಳಿಗೆ ಹಳಿಯಾಳ ತಾಲೂಕಿನ ಮುರ್ಕವಾಡ, ಹಳಿಯಾಳ ಹೋಬಳಿ ಹಾಗೂ ಮುಂಡಗೋಡ ತಾಲೂಕಿನ ಮುಂಡಗೋಡ ಹೋಬಳಿ ವ್ಯಾಪ್ತಿಗೆ ಒಳಪಟ್ಟಿವೆ. ಹಿಂಗಾರು ಹಂಗಾಮಿನ ವಿಮಾ ಕಂತು ಪಾವತಿಸಲು ಡಿ.31 ಕೊನೆಯ ದಿನವಾಗಿದೆ.

ಬೇಸಿಗೆ ಹಂಗಾಮಿನ ನೀರಾವರಿ ಭತ್ತದ ಬೆಳೆಗೆ ಹೊನ್ನಾವರ ತಾಲೂಕಿನ ಕುದ್ರಿಗಿ ಗ್ರಾಮ ಪಂಚಾಯತ್ ಹಾಗೂ ಮುಂಡಗೊಡ ತಾಲೂಕಿನ ಹುನಗುಂದ, ಇಂದೂರು ಮತ್ತು ಚಿಗಳ್ಳಿ ಗ್ರಾಮ ಪಂಚಾಯತ ವ್ಯಾಪ್ತಿಗೆ ಒಳಪಟ್ಟಿವೆ. ಬೇಸಿಗೆ ಹಂಗಾಮಿನ ವಿಮಾ ಕಂತು ಪಾವತಿಸಲು ಫೆಬ್ರವರಿ 27 ಕೊನೆಯದಿನವಾಗಿದೆ.

ರೈತರು ಹೆಚ್ಚಿನ ಮಾಹಿತಿಗಾಗಿ (ಂರಡಿಥಿಣಾಟಣಡಿಜ ಖಟಿಣಡಿಚಿಟಿಛಿಜ ಅಔಟಔಚಿಟಿಥಿ ಐಣಜ. ಅನುಷಾ ಎ.ಆರ್. ದೂ: 7411292116), ಬ್ಯಾಂಕುಗಳು, ವ್ಯವಸಾಯ ಸೇವಾ ಸಹಕಾರಿ ಬ್ಯಾಂಕ್ ಹಾಗೂ ಹತ್ತಿರದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸುವಂತೆ ಜಂಟಿ

### ಭವ್ಯವಾಗಿ ಅಂಬೇಡ್ಕರ್ ಮಹಾಪರಿನಿರ್ವಾಣ ದಿನ ಆಚರಣೆ ಸಚಿವ ಖಂಡ್ರೆ ಪ್ರತಿಪಾದನೆ

# ಡಾ.ಅಂಬೇಡ್ಕರ್ ನೊಂದವರ ಬಾಳಿನಲ್ಲಿ ಬೆಳಕು ಚೆಲ್ಲಿದರು : ಸಚಿವ ಖಂಡ್ರೆ



**ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**
ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರು ತಮ್ಮ ಸಂಪೂರ್ಣ ಜೀವನ ನೊಂದವರ ,ದಿನದಲಿತರ ಬಾಳಿನಲ್ಲಿ ಬೆಳಕು ಚೆಲ್ಲವುದಕ್ಕಾಗಿ ಮೀಸಲಿಟ್ಟಿದ್ದರು ಎಂದು ಅರಣ್ಯ,ಜೀವಿಶಾಸ್ತ್ರ,ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಪ್ರತಿಪಾದಿಸಿದರು.

ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ದಲಿತ ಪರ ಸಂಘಟನೆಗಳ ಒಕ್ಕೂಟ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಭಜನ ಮಂಡಳಿ ಸಹಯೋಗದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರ 69ನೇ ಮಹಾಪರಿನಿರ್ವಾಣ ದಿನದ ಅಂಗವಾಗಿ ಆಯೋಜಿಸಿದ ಶ್ರದ್ಧಾ ಸುಮನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನದ ಆಶಯದಂತೆ ನಾನು ಶಾಸಕನಾಗಿ,ಜಿಲ್ಲಾ ಉಸ್ತುವಾರಿ ಸಚಿವನಾಗಿ ಭಾಲ್ಕಿ ಸೇರಿದಂತೆ ಬೀದರ ಜಿಲ್ಲೆಯ ಸಮಗ್ರವಿಕಾಸಕ್ಕಾಗಿ ಶ್ರಮಿಸುತ್ತಿದ್ದೇನೆ.ಕೊಟ್ಟಮಾತಿನಂತೆ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿ

ಕಾರ್ಯಗತಗೊಳಿಸಲಾಗಿದೆ.ಕೆಕೆಆರ್‌ಡಿಬಿಯಿಂದ ಬೃಹತ ಅನುದಾನ ಮಂಜೂರು ಮಾಡಿಸಿ ಅಭಿವೃದ್ಧಿ ಕಾರ್ಯಗಳು ಹಮ್ಮಿಕೊಳ್ಳಲಾಗಿದೆ.ಯುವಕರಿಗಾಗಿ ಪಟ್ಟಣದ ಹೊರಭಾಗದಲ್ಲಿ ರೂ.16 ಕೋ.ವೆಚ್ಚದಲ್ಲಿ ರಾಜ್ಯಮಟ್ಟದ ಕ್ರೀಡಾಂಗಣ,ರೂ.5 ಕೋ.ವೆಚ್ಚದಲ್ಲಿ ಉದ್ಯಾನವನ,ಅಲ್ಲದೆಸಾರ್ವಜನಿಕಆಸ್ಪತ್ರೆ,ಕೋರ್ಟ್,ವಸತಿ ನಿಲಯಗಳು ನಿರ್ಮಿಸಿ ಜಾತ್ಯಾತೀತ ಶಕ್ತಿಗಳನ್ನು ಬಲಪಡಿಸಲಾಗುತ್ತಿದೆ ಎಂದರು.

ಸಾನಿಧ್ಯ ವಹಿಸಿದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಆಶೀರ್ವಚನ ನೀಡಿ,ಅಂಬೇಡ್ಕರ್ ಅವರು ವಿಶ್ವಗುರು ಬಸವಣ್ಣನವರ ವಚನ ಸಾಹಿತ್ಯದ ಪ್ರಭಾವಕ್ಕೊಳಗಾಗಿ

ಸಂವಿಧಾನ ರಚಿಸಿ ಸ್ವಾತಂತ್ರ ,ಸಮಾನತೆ,ಭ್ರಾತೃತ್ವದ ಭಾಗ್ಯ ಕಲ್ಪಿಸಿದರು.ಸಂಘಟನೆಗಳು ಜನ ಕಲ್ಯಾಣಕ್ಕಾಗಿ ಶ್ರಮಿಸುವುದು ಅಗತ್ಯ ಎಂದರು.

ಆಣದೂರಿನ ಭಂತ್ಯ ಜ್ಞಾನ ಸಾಗರ ಥೆರೋ ಸಾನಿಧ್ಯವಹಿಸಿದ್ದರು.ಅಧ್ಯಕ್ಷತೆವಹಿಸಿದ ದಲಿತ ಪರ ಒಕ್ಕೂಟ ಅಧ್ಯಕ್ಷ ವಿಲಾಸ ಮೋರೆ ಮಾತನಾಡಿ,ಅಂಬೇಡ್ಕರ್ ಚಿಂತನೆಗಳು ವಿಶ್ವವ್ಯಾಪಿಯಾಗಿವೆ.ಅವರ ಆದರ್ಶ ತತ್ವಗಳು ಸರ್ವ ಸಮುದಾಯ ಅನುಸರಿಸಿ ನೈಜ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಮಹಿಳಾ ಜನಜಾಗೃತಿ ರಾಜೇಶ್ವರಿ ಮೋರೆ ಮಾತನಾಡಿದರು. ನಾಗಪೂರದ ಧಮ್ಮ ದಿಕ್ಷಾ ಗಾಯಕಿ ಮತ್ತು ವಿಕಾಸರಾಜ ಗೋಸಾಯಿ ತಂಡದವರ ಸಂಗೀತಕ್ಕೆ ಜನ ಫಿದಾ ಆದರು.ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ

ಹಣಮಂತರಾವ ಚವ್ಹಾಣ ,ಪ್ರಥಮ ದರ್ಜೆ ಗುತ್ತಿಗೆದಾರ ಶಿವು ಬಂಗಾರೆ,ಹಾಗೂ ಪ್ರಮುಖರಾದ ಬಸವರಾಜ ವಂಕೆ,

ವಿಜಯಕುಮಾರರಾಜಭವನ,ಓಂಕಾರಪ್ಪಿ.ಮೋರೆ,ಅಶೋಕ ರಾಜೋಳೆ, ವಿಜಯಕುಮಾರ ಗಾಯಕವಾಡ, ಮಹೇಂದ್ರಮೋರೆ, ಸಂತೋಷ ಬೀರಿಕರ್, ಶಶಿಕಲಾ ಅಶೋಕ, ಪ್ರಕಾಶ ಭಾವಿಕಟ್ಟೆ, ಓಂಕಾರ ಮೋರೆ, ಸಂಜುಕುಮಾರ ಭಾವಿಕಟ್ಟೆ, ಮಾರುತಿ ಭಂಗಾರೆ, ಕೀರ್ತಿರತನ ಸೋನಾಳೆ, ಜೈಪಾಲ ಭೋರಾಳೆ, ಶಿವಕುಮಾರ ಮೇತ್ರೆ, ಧನರಾಜ ಕುಂದೆ, ಪ್ರಶಾಂತ ಕೋಟಗೇರಾ, ಪ್ರದೀಪ ಮೋರೆ, ಶಾಂತಕುಮಾರ ನಾಟೇಕರ್, ಅನೀಲ ಮೋರೆ, ವಿನೋದ ವಾನಖೇಡೆ, ಅರ್ಜುನ ಉಬ್ಬಾ, ಉದಯಕುಮಾರ ಶಿಂಧೆ, ಅನಿಲ ಸೂರ್ಯವಂಶಿ, ಶ್ರೀಮಂತ ಕಣಜಿ, ಪ್ರದೀಪ ಗುಪ್ತಾ, ಯುವರಾಜ ಕುಂದೆ, ಕಿಶನ ವಾಘಮೋರೆ, ಗೋಪಾಲ ಮೋರೆ, ಸುರೇಶ ಸುತಾರ್, ಅಶೋಕ ಸಾನೆ, ಲಕ್ಷ್ಮಣ ಸುರ್ಯಾವಂಶಿ, ಬುದ್ಧಾನಂದ ಶಿಂಧೆ, ಸಂಜುಕುಮಾರ ಲಾಮಲೆ, ಸುನೀಲ ನಾಟೇಕರ್,

ಮನೋಜ ಪ್ರಭು ವಾಲಿ, ಸುಶೀಲ ಬರೂರೆ, ಉಮಾಕಾಂತ ಕಾಂಬಳೆ, ರಾಜಕುಮಾರ ಭಾಟಸಾಂಗವಿ, ದೀಪಕ ನಾಟೇಕರ, ಸುಕೇಶ ಕಾಂಬಳೆ, ನಾಗೇಶ ವಾಘಮೋರೆ, ಸುನೀಲ ವಾಂಜ್ರೆ, ಸಂತೋಷ ಬೇಲೂರೆ, ಸುನೀಲ ಸಂಗೋಳ್ಳಿಕರ್, ರವಿಂದ್ರ ಗೌಂಡೆ, ಸಂಜುಮಾರ ಮೋಮ್ಮದಾಪೂರೆ, ಗಗನ ಮೋರೆ, ವಿಶಾಲ ಕಾಂಬಳೆ, ಸಂತೋಷ ಬೇಧೆ, ವಿನೋದ ಕರಂಜೆ, ಪಾಂಡುರಂಗ ವಾಘಮಾರೆ, ಆಕಾಶ ಪ್ಯಾಗೆ, ಪುಟ್ಟು ಮೋರೆ,ಪ್ರದೀಪ ಗುಪ್ತಾ, ಸತೀಶ ಗಾಯಕವಾಡ್ ಸೇರಿದಂತೆ ಅನೇಕರು ಭಾಗವಹಿಸಿದ್ದರು.ಮುಖಂಡ ಮಾರುತಿ ಭಾವಿಕಟ್ಟೆ ಸ್ವಾಗತಿಸಿದರು.ದಲಿತ ಪ್ಯಾಂಥರ ಅಧ್ಯಕ್ಷ ಕೈಲಾಸ ಬಾವಿಕಟ್ಟೆ ನಿರೂಪಿಸಿದರು.ನಾರಾಯಣ ಮೋರೆ ವಂದಿಸಿದರು.

## ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:ಪ್ರಸ್ತಕ ಸಾಲಿನಲ್ಲಿ ಪ್ರಧಾನಮಂತ್ರಿ ಮತ್ಸ ಸಂಪದ ಯೋಜನೆಯ ಧರ್ತಿ ಆಭಾ ಜನಜಾತೀಯ ಗ್ರಾಮ ಉತ್ಕರ್ಷ ಅಭಿಯಾನ ಯೋಜನೆಯಡಿ ಫಲಾನುಭವಿ ಆಧಾರಿತ ವಿವಿಧ ಘಟಕಗಳಿಗೆ ಸಹಾಯಧನ ನೀಡಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.ಅರ್ಹ ತಾಲ್ಲೂಕುಗಳ ಗ್ರಾಮಗಳು:ಕಂಪ್ಲಿ: ತಾಲ್ಲೂಕಿನ ಉಪ್ಪಾರಹಳ್ಳಿ, ಬೆಳುಗೋಡುಹಾಳು, ಸಣಾಪುರ, ಮುದ್ದಾಪುರ–02, ಮುದ್ದಾಪುರ–10, ರಾಮಸಾಗರ, ಕಣವಿ ತಿಮ್ಮಲಾಪುರ, ದೇವಸಮುದ್ರ, ಚಿಕ್ಕ ಜಾಯಿಗನೂರು, ಹಿರೇ ಜಾಗನೂರು, ಹಂಪದೇವನಹಳ್ಳಿ, ಜವುಕು, ಮೆಟ್ರಿ, ದೇವಲಾಪುರ, ಸುಗ್ಗೇನಹಳ್ಳಿ, ಸೋಮಲಾಪುರ, ಮಾವಿನಹಳ್ಳಿ, ಹೊನ್ನಳ್ಳಿ, ನೆಲ್ಲುಡಿ, ಕೊಟ್ಟಾಲ್ ಕ್ಯಾಂಪ್, ಎಮ್ಮಿಗನೂರು.ಬಳ್ಳಾರಿ: ತಾಲ್ಲೂಕಿನ ಹಿರೇಹಡ್ಲಿಗಿ, ಬಸರಕೋಡು, ಸಿಂಧುವಾಳ, ಎರ್ರಿಗುಡಿ, ತಂಬ್ರಹಳ್ಳಿ, ಬ್ಯಾಲಚಿಂತೆ, ಮೀನಹಳ್ಳಿ, ಪರಮದೇವನಹಳ್ಳಿ, ಕುಂಟನಹಾಳು, ಬುರನಾಯಕನಹಳ್ಳಿ. ಕುರುಗೋಡು: ತಾಲ್ಲೂಕಿನ ಮುಷ್ಟಗಟ್ಟ, ಕೆರೆಕೆರೆ, ಸೋಮಲಾಪುರ ಮತ್ತು ಸಿರುಗುಪ್ಪ ತಾಲ್ಲೂಕಿನ ಹಳೆಕೋಟೆ, ಕರ್ಚಿಗನೂರು, ಸಾಲಿಗನೂರು, ಅಕ್ಕತಂಗಿರಹಾಳು, ಮಿಟ್ಟೆಸುಗೂರು.ಸಂಡೂರು: ತಾಲ್ಲೂಕಿನ ಮಲ್ಲಾಪುರ–72, ಹುಲಿಕುಂಟ–73, ಹಿರೇಕೇರಿಯಗಿನಹಳ್ಳಿ, ಅಂಕಮ್ಮನಹಾಳ್, ತೋಣಸಿಗೆರೆ, ಕನಕಪುರ –ಬಿ.ಸಿ, ಯರ್ರಯ್ಯನಹಳ್ಳಿ, ಅಗ್ರಹಾರ, ಎಸ್.ಹೆಚ್.ಆರ್.ಓ. ಓಬಳಾಪುರ, ದೇವರ ಬೂದೇನಹಳ್ಳಿ, ಸಿದ್ದಾಪುರ, ಮುರಾರಿಪುರ, ನರಸಿಂಗಪುರ, ವಿಠ್ಠಲನಗರ, ಲಿಂಗದಹಳ್ಳಿ, ಮಾಲಾಪುರ, ತುಮಟಿ, ರಾಜಪುರ, ರಾಮಸಾಗರ, ಲಕ್ಕಲಹಳ್ಳಿ, ಗ್ರಾಮಗಳಿಂದ ಪರಿಶಿಷ್ಟ ಪಂಗಡದ ಫಲಾನುಭವಿಗಳಿಂದ ದ್ವಿಚಕ್ರ ವಾಹನ, ತ್ರಿಚಕ್ರ ವಾಹನ ಮತ್ತು ಜೀವಂತ ಮೀನು ಮಾರಾಟ ಕೇಂದ್ರ ಸ್ಥಾಪನೆಗೆ ಅರ್ಜಿ ಆಹ್ವಾನಿಸಲಾಗಿದೆ.ಈ ಯೋಜನೆಯಡಿ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇ.90 ರಷ್ಟು ಸಹಾಯಧನ ನೀಡಲಾಗುತ್ತದೆ. ಅರ್ಜಿ ಸಲ್ಲಿಸಲು ಡಿ.20 ಕೊನೆಯ ದಿನವಾಗಿದ್ದು, ಸಂಬಂಧಿಸಿದ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೂ ಸಲ್ಲಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ, ಸಿರುಗುಪ್ಪ, ಕಂಪ್ಲಿ, ಮತ್ತು ಕುರುಗೋಡು ತಾಲ್ಲೂಕುಗಳಿಗೆ ಸಂಬಂಧಿಸಿದಂತೆ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ (ಮೊ.7406508971), ಸಂಡೂರು ತಾಲ್ಲೂಕಿಗೆ ಸಂಬಂಧಿಸಿದಂತೆ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ ಸಂಡೂರು (ಮೊ.7204911897) ಮತ್ತು ಮೀನುಗಾರಿಕೆ ಉಪನಿರ್ದೇಶಕರ ಕಚೇರಿ (ಮೊ.9449593156) ಗೆ ಸಂಪರ್ಕಿಸಬಹುದು ಎಂದು ಮೀನುಗಾರಿಕೆ ಉಪನಿರ್ದೇಶಕ ಶಿವಣ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾರ್ಖಾನೆ ವಿರೋಧಿ ಧರಣಿ 39ನೇ ದಿನ ಕಾರ್ಖಾನೆಗಳ ಮಣ್ಣು ತಿನ್ನುತ್ತಿದ್ದೇವೆ: ಗ್ರಾಮಸ್ಥರು




**ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :**
ಈಗಿರುವ ಬಲ್ಡೋಟಾ ಎಂ.ಎಸ್.ಪಿ.ಎಲ್. ಘಟಕ ನಮ್ಮ ಗ್ರಾಮದ ಪಕ್ಕದಲ್ಲಿದ್ದು, ಶಾಲೆಗೂ ಸೇರಿ ಮನೆಗಳಲ್ಲಿ ದೊಡ್ಡ ಪ್ರಮಾಣದ ದೂಳು ಬಂದುಬೀಳುತ್ತದೆ. ಈ ದೂಳು ತಿಂದ ಮನುಷ್ಯರು, ದನ ಕರುಗಳು ರೋಗಪೀಡಿತರಾಗಿ ಸಾಯುತ್ತಿದ್ದೇವೆ. ಕೆರೆಯ ನೀರು ಸಹಿತ ಕುಡಿಯಲು ಆಗುತ್ತಿಲ್ಲ ಎಂದು ಹಾಲವರ್ತಿ ಗ್ರಾಮದ ಬಾಧಿತ ಮಹಿಳೆಯರು ಅಳಲು ತೋಡಿಕೊಂಡರು.

ಅವರು ಕೊಪ್ಪಳ ನಗರಸಭೆ ಮುಂದೆ ಬಲ್ಡೋಟ ಬಿಎಸ್ಪಿಎಲ್ ಕಲ್ಯಾಣಿ ಸ್ಟೀಲ್ ಮುಕುಂದ ಸುಮಿ, ಎಕ್ಸ್ ಇಂಡಿಯಾ ಮುಂತಾದ ಕಾರ್ಖಾನೆಗಳ ವಿಸ್ತರಣೆ ವಿರೋಧಿಸಿ ಬಸಾಪುರ ಕೆರೆ ಸಾರ್ವಜನಿಕರಿಗೆ ಆಗ್ರಹಿಸಿ ಕೊಪ್ಪಳ ಜಿಲ್ಲಾ ಬಚಾವಂದೋಲನ ಸಮಿತಿ ಹಾಗೂ ಪರಿಸರ ವೇದಿಕೆ ಇದರ ಜಂಟಿ ಕ್ರಿಯಾ ವೇದಿಕೆ ಹಮ್ಮಿಕೊಂಡಿರುವ ಧರಣಿಯಲ್ಲಿ ಭಾಗವಹಿಸಿ ಮಾತನಾಡಿದರು.

ಇಲ್ಲಿನ ರೋಗರುಜಿನ ಕ್ಯಾನ್ಸರ್ ವರೆಗೂ ಹೋಗಿದೆ. ನಾವು ಇಲ್ಲಿ ಬದುಕಲಂತೂ ಆಗುತ್ತಿಲ್ಲ. ಪರಿಸ್ಥಿತಿ ಹೀಗಿದ್ದಾಗ ನಮ್ಮ ಮಕ್ಕಳು ಹೇಗೆ ಬದುಕಬೇಕು? ಅವರ ಭವಿಷ್ಯ ಏನಾಗುತ್ತದೊ ಎಂದು ಭಯವಾಗುತ್ತಿದೆ. ಎಂ.ಎಸ್.ಪಿ.ಎಲ್. ಕಾರ್ಖಾನೆಇಲ್ಲಿಂದ ತೊಲಗಬೇಕು. ಆಗ ಮಾತ್ರ ನಾವು ನಮ್ಮೂರಿನಲ್ಲಿ ಇರಲು ಸಾಧ್ಯವಾಗುತ್ತದೆ ಎಂದು ಗ್ರಾಮದ ಶಾರದಮ್ಮ ಹೊಸಮನಿ, ನಿಂಗಮ್ಮ 39ನೇ ದಿನದಿಂದ ನಡೆದಿರುವ ಧರಣಿಗೆ ಬೆಂಬಲಿಸಿ ಗೋಳು ತೋಡಿಕೊಂಡರು. ಬಾಧಿತ ಗ್ರಾಮದ ಮಹಿಳೆಯರು ಮತ್ತು ಯುವಕರು ಬಂದು ಬೆಂಬಲಿಸಿದರು.

ಕ.ರ.ವೇ. ಕನ್ನಡ ಸೇನೆ ರಾಜ್ಯ ಕಾರ್ಯಾಧ್ಯಕ್ಷರಾ ಉಮೇಶಗೌಡ ಅರಳಹಳ್ಳಿ ಬೆಂಬಲ ಸೂಚಿಸಿ ಮಾತನಾಡಿ, ತುಂಗಭದ್ರಾ ಜಲಾಶಯಕ್ಕೆ ಬಾಧನೆ ಉಂಟು ಮಾಡಿರುವ ಈ ಕಾರ್ಖಾನೆಗಳನ್ನು ನಾವು ಸಹಿಸಿಕೊಳ್ಳುವುದಿಲ್ಲ. ಗಂಗಾವತಿ, ಸಿಂಧನೂರು, ರಾಯಚೂರು ಮತ್ತು ಬಲಭಾಗದಲ್ಲಿ ವಿಜಯನಗರ, ಬಳ್ಳಾರಿ ಜಿಲ್ಲೆಗಳ ಜನರಿಗೆ ಕಾರ್ಖಾನೆಗಳ ಕಾರಣಕ್ಕೆ ಒಂದು ಬೆಳೆಗೆ ನೀರು ಸಿಗುವಂತೆ ಆಗಿದೆ. ಈ ಕಾರ್ಖಾನೆಗಳನ್ನು ಬಂದ್ ಮಾಡುವವರೆಗೆ ನಾವು ಹೋರಾಟವನ್ನು ನಿಲ್ಲಿಸುವುದಿಲ್ಲ ಎಂದರು.

ಧರಣಿಯಲ್ಲಿ ಕ.ರ.ವೇ. ಕನ್ನಡ ಸೇನೆ ರಾಜ್ಯ ಉಪಾಧ್ಯಕ್ಷ ಬಿಟಿ ಮಂಜುನಾಥ, ಅಮರೇಶ್ ಹೇರೂರು, ಹೋರಾಟ ವೇದಿಕೆಯ ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು, ಸಂಚಾಲಕ ಮಲ್ಲಿಕಾರ್ಜುನ ಗೋನಾಳ, ಖಾಜಾಸಾಬ್, ರಫಿ ಕುನ್ನಟಗಿ, ಈರಪ್ಪ ಹೊಸಮನಿ, ಮಂಜಪ್ಪ ನಡಲಮನಿ, ಬಸವರಾಜ ಹಾಲವರ್ತಿ, ಗವಿಸಿದ್ದಪ್ಪ ಹಲಿಗಿ, ಡಿ.ಎಚ್. ಪೂಜಾರ, ಎಲ್ಲಮ್ಮ, ಹುಲಿಗೆಮ್ಮ, ಗುಂಡಮ್ಮ, ಗಾಳಮ್ಮ, ಜಗದೀಶ ಎಸ್ ವಿ ರಾಜೂರ ಚೆಂಬುಲಿಂಗಪ್ಪ ಹಲಗೇರಿ, ಎ.ಎಂ. ಮದರಿ, ಜಂಬಣ್ಣ, ಎಸ್ ಮಹದೇವಪ್ಪ, ಮಹಾದೇವಪ್ಪ ಸೋಂಪುರ, ಗಾಳೆಪ್ಪ ಮುಂಗೋಲಿ, ಬಿ.ಸಿ. ಕರಿಗಾರ್, ಮಹಾಂತೇಶ ಕೊತಬಾಳ, ಮಂಜುನಾಥ ಜಿ. ಗೊಂಡಬಾಳ, ಬಸವರಾಜ ಶೀಲವಂತರ ಇದ್ದರು.

### ಭಾಲ್ಕಿಯ ತಾಪಂನಲ್ಲಿ ಅಧಿಕಾರಗಳ ಸಭೆಯಲ್ಲಿ ಸಚಿವ ಖಂಡ್ರೆ ಸೂಚನೆ

# ಡಿ.18ರೊಳಗೆ ಕ್ರಿಯಾ ಯೋಜನೆ ಸಲ್ಲಿಸಿ



ಭಾಲ್ಕಿ: ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಶಾಸಕರ ನಿಧಿ ಮತ್ತು ಸಂಸದರ ನಿಧಿಯನ್ನು ಸಮರ್ಪಕವಾಗಿ ಬಳಕೆ ಮಾಡಿಕೊಂಡು ಬರುವ ಡಿ.18ರೊಳಗೆ ಕ್ರಿಯಾ ಯೋಜನೆ ಸಲ್ಲಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ಭಾನುವಾರ ಆಯೋಜಿಸಿದ್ದ ವಿವಿಧ ಇಲಾಖೆಯ ಅಧಿಕಾರಿಗಳ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.ಪ್ರಸಕ್ತ ಆರ್ಥಿಕ ವರ್ಷದಲ್ಲಿ ಆದ್ಯತೆ ಮೇರೆಗೆ ಕಾಮಗಾರಿ ಕೈಗೊಳ್ಳಲು ಶೇ.50 ರಷ್ಟು ಶಾಸಕರ ಮತ್ತು ಸಂಸದರ ಅನುದಾನ ಬಳಕೆ ಮಾಡಿಕೊಳ್ಳಬೇಕು.

ಅಗತ್ಯ ಇರುವ ಕಡೆಗಳಲ್ಲಿ ಶಾಲಾ ಕೋಣೆ, ಶೌಚಾಲಯ, ಅಂಗನವಾಡಿ ನವೀಕರಣ, ಸುತ್ತುಗೋಡೆ ನಿರ್ಮಾಣ ಸೇರಿದಂತೆ ಮುಂತಾದ ಕಾಮಗಾರಿಗಳಿಗೆ ಕ್ರಿಯಾ ಯೋಜನೆ ಸಿದ್ಧಪಡಿಸಿ ಅನಮೋದನೆ ಪಡೆದು ಹೊಸ ವರ್ಷ ಆರಂಭದ ಜನವರಿ ತಿಂಗಳಲ್ಲಿ ಎಲ್ಲ ಕಾಮಗಾರಿ ಪೂರ್ಣಗೊಳಿಸಿಬೇಕು.

ಗುತ್ತಿಗೆದಾರರನ್ನು ನೇಮಿಸಿ ಕಾಮಗಾರಿ ಹಂಚಿಕೆ ಮಾಡಬೇಕು. ಕಾಮಗಾರಿಯಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದು. ಬೋಗಸ್ ಕಾಮಗಾರಿ ಕಂಡುಬಂದರೆ ಮತ್ತು ಬಿಡುಗೆಯಾದ ಅನುದಾನ ಬಳಕೆಯಲ್ಲಿ ವಿಫಲರಾದರೇ ಸಂಬಂಧಿತ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಬಸವಕಲ್ಯಾಣ ಸಹಾಯಕ ಆಯುಕ್ತ ಪ್ರಕಾಶ ಕುದರೆ, ಯೋಜನಾಧಿಕಾರಿ ಸೂರ್ಯಕಾಂತ ಬಿರಾದಾರ್, ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ, ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

**ಮನೆಯಲ್ಲಿ ಕೂತರೇ ಟಿಸಿ ರಿಪೇರಿ ಆಗುತ್ತಾ ?**

ಮಳೆಯಿಂದ ಎಷ್ಟು ವಿದ್ಯುತ್ ಕಂಬಗಳು ನೆಲಕ್ಕುರುಳಿವೆ. ಕಂಡಕ್ಟರ್ ಮತ್ತು ಟ್ರಾನ್ಸಾರ್ಮರ್ ಸ್ಥಿತಿಗತಿ ಬಗ್ಗೆ ಸಚಿವ ಖಂಡ್ರೆ ಮಾಹಿತಿ ಕೇಳಿದರು. ಜೆಸ್ಕಾಂ ಅಧಿಕಾರಿ ಮಾತನಾಡಿ ವಿದ್ಯುತ್ ಕಂಬಗಳ ಜೋಡಣೆ ಕಾರ್ಯ ನಡೆಯುತ್ತಿದೆ. ಕೆಲ ಟ್ರಾನ್ಸಾರ್ಮರ್ ದುರಸ್ತಿ ಆಗಬೇಕಿವೆ ಎಂದರು.

ಇದಕ್ಕೆ ಸಚಿವರು ಪ್ರತಿಕ್ರಿಯಿಸಿ ಟ್ರಾನ್ಸಾರ್ಮರ್ ಕೆಟ್ಟು ಇಷ್ಟು ದಿವಸಗಳಾಗಿವೆ. ಇನ್ನೂ ದುರಸ್ತಿ ಆಗಲಿಲ್ಲ ಅಂದರೆ ಹೇಗೆ ? ಮನೆಯಲ್ಲಿ ಕೂತರೇ ಟ್ರಾನ್ಸ್‌ಫಾರ್ಮರ್ ರಿಪೇರಿ ಆಗುತ್ತಾ ಫಾಲೋಪ್ ಮಾಡಿ ಕೆಲಸ ಮಾಡಿ ಜನರಿಗೆ ಉತ್ತಮ ಸೇವೆ ಒದಗಿಸಬೇಕು ಎಂದು ಕಿವಿಮಾತು ಹೇಳಿದರು.

**ಅನಧಿಕೃತ ಲೇಔಟ್ ತಡೆಯಿರಿ**

ಜಿಲ್ಲೆಯ ವಿವಿಧಯೆಡೆ ಅನಧಿಕೃತ ಲೇಔಟ್ ತಲೆಯೆತ್ತುತ್ತಿವೆ. ಸರಕಾರಿ ನಿವೇಶನ, ಫುಟ್ ಪಾತ್ ಒತ್ತುವರಿ ಆಗುತ್ತಿವೆ. ರಸ್ತೆಗಳ ಮಧ್ಯದಲ್ಲಿ ಮಹಾತ್ಮರ ಪುತ್ಥಳಿ ಸ್ಥಾಪನೆ ನೆಪದಲ್ಲಿ ಗೊಂದಲ ಸೃಷ್ಟಿಮಾಡಲಾಗುತ್ತಿದೆ. ಅಧಿಕಾರಿಗಳು ಇವುಗಳ ಮೇಲೆ ನಿಗಾ ಇಟ್ಟು ಅಂಥದ್ದು ಕಂಡು ಬಂದರೆ ಸಂಬಂಧಿತರ ವಿರುದ್ಧ ದೂರು ದಾಖಲಿಸಿ ಸರಕಾರದ ಆಸ್ತಿಪಾಸ್ತಿ ರಕ್ಷಣೆ ಮಾಡಬೇಕು ಎಂದು ಸಚಿವರು ತಿಳಿಸಿದರು.

> **ಬೀದರ್ ಸಂಪೂರ್ಣವಾಗಿ ಪ್ಲಾಸ್ಟಿಕ್ ಮುಕ್ತ ಜಿಲ್ಲೆಯನ್ನಾಗಿಸುವ ಸಂಕಲ್ಪ ನನ್ನದಿದ್ದು ಮುಂಬರುವ ದಿನಗಳಲ್ಲಿ ಬೃಹತ್ ಪ್ರಾಮಾಣದಲ್ಲಿ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದ್ದು, ಎಲ್ಲ ಅಧಿಕಾರಿಗಳು ಸಾಥ್ ನೀಡಬೇಕು.**
>
> **ಈಶ್ವರ ಖಂಡ್ರೆ ಜಿಲ್ಲಾ ಉಸ್ತುವಾರಿ ಸಚಿವರು ಬೀದರ್**

**ಗ್ರಾಪಂಗಳಿಂದ 5 ಲಕ್ಷ ಸಸಿ ತಯಾರಿಸಿ**

ಜಿಲ್ಲೆಯಲ್ಲಿ ಹಸಿರೀಕರಣ ಹೆಚ್ಚಿಸುವ ಉದ್ದೇಶದಿಂದ ಹೆಚ್ಚುವರಿಯಾಗಿ 5 ಲಕ್ಷ ಸಸಿ ನೆಡುವ ಗುರಿ ಹೊಂದಲಾಗಿದೆ. ಹಾಗಾಗಿ ಜಿಲ್ಲೆಯಲ್ಲಿ 183 ಗ್ರಾಮ ಪಂಚಾಯತಿಗಳಿದ್ದು ತಲಾ ಒಂದು ಗ್ರಾಮ ಪಂಚಾಯತಿ ವತಿಯಿಂದ ಕನಿಷ್ಠ ಮೂರು ಸಾವಿರ ಸಸಿಗಳನ್ನು ತಯಾರಿಸಬೇಕು ಎಂದು ಸಚಿವ ಖಂಡ್ರೆ ತಿಳಿಸಿದರು.

ನರೇಗಾ ಯೋಜನೆಯ ಸಹಾಯ ಪಡೆದು ಈಗಿನಿಂದಲೇ ಸಸಿಗಳನ್ನು ತಯಾರಿಸಲು ಸಿದ್ಧತೆ ಮಾಡಿಕೊಳ್ಳಬೇಕು. ಬರುವ ಜೂನ್‌ನಲ್ಲಿ ಜಿಲ್ಲೆಯಾದ್ಯಂತ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು ಎಂದು ತಿಳಿಸಿದರು.

**ಬಹಿರ್ದೆಸೆ ಜೀವಂತ ಪಿಡಿಓ ವಿರುದ್ಧ ಕಿಡಿ**

ತಾಲೂಕಿನ ಬಹುತೇಕ ಗ್ರಾಮೀಣ ಭಾಗದ ಗ್ರಾಮಗಳನ್ನು ಬಯಲು ಬಹಿರ್ದೆಸೆ ಮುಕ್ತ ಗ್ರಾಮಗಳೆಂದು ಘೋಷಣೆ ಮಾಡಲಾಗಿದೆ ಆದರೆ ಇಂದಿಗೂ ಜೀವಂತವಾಗಿವೆ. ಅಭಿವೃದ್ಧಿ ಅಧಿಕಾರಿಗಳು ಏನು ಮಾಡುತ್ತಿದ್ದಾರೆ ಎಂದು ಸಚಿವ ಖಂಡ್ರೆ ಕಿಡಿಕಾರಿದರು.

ಕೋನಮೇಳಕುಂದಾ, ನೀಲಮನಳ್ಳಿ, ಜೋಳದಾಪಕಾ ಸೇರಿದಂತೆ ಮುಂತಾದ ಗ್ರಾಮಗಳಲ್ಲಿ ಇಂದಿಗೂ ಬಯಲು ಬಹಿರ್ದೆಸೆಗೆ ಹೋಗುತ್ತಿರುವುದು ಕಂಡು ಬರುತ್ತಿದೆ. ಇದಕ್ಕೆ ಕಡಿವಾಣ ಹಾಕಲು ಕಾರ್ಯನಿರ್ವಾಹಕ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ತಾಕೀತು ಮಾಡಿದರು.

### ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ಸಭೆ 27 ಪ್ರಕರಣ ದಾಖಲು

# ಪಡಿತರಧಾನ್ಯ ದುರುಪಯೋಗವಾದಲ್ಲಿ ಕ್ರಮ : ಡಿಸಿ ಸಂಗಪ್ಪ

**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:** ಸರಕಾರ ನೀಡುವ ಆಹಾರಧಾನ್ಯವನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿದಲ್ಲಿ ನಿರ್ಧಾಕ್ಷಣ್ಯವಾಗಿ ಕ್ರಮಕೈಗೊಳ್ಳಲಾಗುವುದೆಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.



ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸೋಮವಾರ ಜರುಗಿದ ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಜಿಲ್ಲೆಯಲ್ಲಿ ಆಹಾರಧಾನ್ಯ ಕಾಳಸಂತೆ ಮಾರಾಟವನ್ನು ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಸೇರಿದಂತೆ ಕೃಷಿ ಮಾರುಕಟ್ಟೆ, ಕಾನೂನು ಮಾಪನ ಶಾಸ್ತ್ರ, ಕಂದಾಯ ಹಾಗೂ ಇತರೆ ಇಲಾಖೆ ಸೇರಿದಂತೆ ತಂಡವನ್ನು ರಚಿಸಲಾಗಿದೆ. ಇದರಂತೆ ತಾಲೂಕಾ ಮಟ್ಟದಲ್ಲಿ ತಂಡ ರಚಿಸಿದ್ದು, ಸಮಿತಿಯವರು ಪ್ರತಿ ತಿಂಗಳ ಕಾಳಸಂತೆಯಲ್ಲಿ ಆಹಾರಧಾನ್ಯ ಮಾರಾಟವಾಗದಂತೆ ನಿಗಾವಹಿಸುವ ಕೆಲಸವಾಗಬೇಕೆಂದು ಸೂಚಿಸಿದರು.

ತಾಲೂಕು ಮಟ್ಟದಲ್ಲಿ ಕಂದಾಯ, ಆಹಾರ, ಪೊಲೀಸ್, ಎಪಿಎಂಸಿ, ಕೃಷಿ ಹಾಗೂ ಕಾನೂನುಮಾಪನಶಾಸ್ತ್ರ ಇಲಾಖೆಯವರು ಜಂಟಿಯಾಗಿ ದಾಳಿ ಮಾಡಿ, ಪ್ರಕರಣ ದಾಖಲಿಸಲು ಮುಂದಾಗಬೇಕು. ಅಲ್ಲದೇ ಹೊಟೇಲ್‌ಗಳಿಗೆ ಭೇಟಿ ನೀಡಿ, ಆಹಾರದ ಗುಣಮಟ್ಟ ಹಾಗೂ ಗೃಹೋಪಯೋಗಿ ಸಿಲಿಂಡರ್‌ಗಳನ್ನು ಬಳಕೆ ಮಾಡುತ್ತಿರುವುದು ಕಂಡುಬಂದಲ್ಲಿ ಅದನ್ನು ಜಪ್ತಿ ಮಾಡಬೇಕು. ಅನಧಿಕೃತವಾಗಿ ಸರ್ಕಾರದ ಅಕ್ಕಿಯನ್ನು ಬಳಸುತ್ತಿದ್ದಲ್ಲಿ, ಕಾನೂನುರಿತ್ಯ ಕ್ರಮ ಜರುಗಿಸಬೇಕೆಂದು ಸೂಚನೆ ನೀಡಿದರು.

ಸಾರ್ವಜನಿಕ ಮಾಹಿತಿಗಾಗಿ ಸರ್ಕಾರದಿಂದ ನೀಡುವ ಉಚಿತ ಅಕ್ಕಿಯನ್ನು ತಮ್ಮ ಲಾಭಕ್ಕಾಗಿ ಕಾಳಸಂತೆಯಲ್ಲಿ ಮಾರಾಟ ಮಾಡಿದ್ದಲ್ಲಿ, ಸದರ ಪಡಿತರ ಚೀಟಿಯನ್ನು ರದ್ದುಪಡಿಸಲಾಗುವುದು ಮುಕ್ತ ಮಾರುಕಟ್ಟೆಯ ದರದಲ್ಲಿ ದಂಡ ವಿಧಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ 27 ಪ್ರಕರಣಗಳನ್ನು ದಾಖಲಿಸುವ ಮೂಲಕ 48 ಜನರನು ಬಂಧಿಸಿ, 15 ವಾಹನಗಳನ್ನು ಜಪ್ತ ಮಾಡಲಾಗಿದೆ. ಪ್ರಕರಣಗಳು ನ್ಯಾಯಾಲಯದಲ್ಲಿ ಯಾವ ಹಂತದಲ್ಲಿವೆ ಎಂಬ ಮಾಹಿತಿ ಸಂಗ್ರಹಿಸುವಂತೆ ಆಹಾರ ಇಲಾಖೆ ಜಂಟಿ ನಿರ್ದೇಶಕರು ಸೂಚಿಸಿದರು.

ಜಿಲ್ಲಾ ಪೊಲೀಸ್ ವರುಷ್ಠಾಧಿಕಾರಿ ಸಿದ್ದಾರ್ಥ ಗೋಯಲ್ ಮಾತನಾಡಿ ಪ್ರಕರಣ ದಾಖಲಿಸುವ ಸಮಯದಲ್ಲಿ ಪೊಲೀಸ್ ಅಗತ್ಯ ಸಹಕಾರ ನೀಡಲಾಗುತ್ತದೆ. ಆರೋಪಿಗಳ ವಿರುದ್ಧ ನಿಯಮಾನುಸಾರ ನ್ಯಾಯಾಲಯಕ್ಕೆ ದೋಷಾರೋಪನ ಪಟ್ಟಿಯನ್ನುಯ ಸಲ್ಲಿಸುವುದಾಗಿ ತಿಳಿಸಿದರು. ಜಂಟಿಯಾಗಿ ದಾಳಿ ಮಾಡುವ ಸಮಯದಲ್ಲಿ ಪೊಲೀಸ್‌ರಿಗೆ ಮಾಹಿತಿ ನೀಡಿದಲ್ಲಿ ಅಗತ್ಯ ಸಹಕಾರ ನೀಡಲಾಗುತ್ತದೆ ಎಂದು ತಿಳಿಸಿದರು.

ಜಿ.ಪಂ ಸಿಇಓ ಶಶಿಧರ ಕುರೇರ ಮಾತನಾಡಿ ಹೊಸದಾಗಿ

ನ್ಯಾಯಬೆಲೆ ಅಂಗಡಿ ಮಂಜೂರಾತಿ ನೀಡುವಲ್ಲಿ ಪರಿಶಿಷ್ಟ ಜಾತಿಗೆ ಶೇ.17 ಮತ್ತು ಪಂಗಡದ ಜನಾಂಗದವರಿಗೆ ಶೇ.7 ರಷ್ಟು ನಿಯಮಾನುಸಾರ ಆದ್ಯತೆ ನೀಡುವ ಕುರಿತು ಸರಕಾರದಿಂದ ಸಮಿತಿ ರಚನೆ ಮಾಡಲಾಗಿದ್ದು, ಇದರನ್ವಯ ಮಂಜೂರಾತಿಗೆ ಕ್ರಮಕೈಗೊಳ್ಳಬೇಕು. ಅಲ್ಲದೇ ಈಗಾಗಲೇ ಅರ್ಜಿ ಸಲ್ಲಿಸಿದ ಅರ್ಹ ಫಲಾನುಭವಿಗಳಿಗೆ ನಿಯಮಾನುಸಾರ ಪರಿಶೀಲಿಸಿ, ಪಡಿತರ ಚೀಟಿ ವಿತರಿಸುವ ಹಾಗೂ ಅನರ್ಹ ಪಡಿತರ ಚೀಟಿದಾರರನ್ನು ಪತ್ತೆ ಹಚ್ಚಿ ಕ್ರಮಕೈಗೊಳ್ಳಲು ತಿಳಿಸಿದರು.

ಸಭೆಯಲ್ಲಿ ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಕೃಷಿ ಜಂಟಿ ನಿರ್ದೇಶಕ ರುದ್ರೇಶಪ್ಪ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ, ನಗರಸಭೆ ಪೌರಾಯುಕ್ತ ವಾಸಣ್ಣ ಆರ್ ಸೇರಿದಂತೆ ಆಯಾ ತಾಲೂಕಿನ ಆಹಾರ ನಿರೀಕ್ಷಕರು ಉಪಸ್ಥಿತರಿದ್ದರು.

## ಹಣದ ಬೇಡಿಕೆ; ಕುಕನೂರ ಪ.ಪಂ ಮೇಲೆ ಲೋಕಾಯುಕ್ತ ದಾಳಿ, ದಾಖಲೆ ವಶ



**ಮಲ್ಲಮ್ಮ ನುಡಿ ವಾರ್ತೆಕೊಪ್ಪಳ:**
ಪಟ್ಟಣ ಪಂಚಾಯಿತಿ ಕಾರ್ಯಾಲಯದ ಸಿಬ್ಬಂದಿಗಳಿಂದ ಬಿ ಖಾತ ಮಾಡಿಕೊಡಲು ಹಣದ ಬೇಡಿಕೆ ಇಟ್ಟ ಆರೋಪದ ಮೇಲೆ ಲೋಕಾಯುಕ್ತ ದಾಳಿ ನಡೆದು ದಾಖಲೆ ವಶಪಡಿಸಿಕೊಂಡ ಘಟನೆಗೆ ಕುಕನೂರು ಪಟ್ಟಣ ಪಂಚಾಯಿತಿ ಕಾರ್ಯಾಲಯ ಸಾಕ್ಷಿಯಾಗಿದೆ.

ಜಿಲ್ಲೆಯ ಕುಕನೂರು ಪಟ್ಟಣ ಪಂಚಾಯತಿ ಕಾರ್ಯಾಲಯಕ್ಕೆ ಕೊಪ್ಪಳ ಲೋಕಾಯುಕ್ತ ಪೊಲೀಸರು ಶುಕ್ರವಾರ ಸಾಯಂಕಾಲ ದಿಡೀರ್ ದಾಳಿ ಮಾಡಿ ತಡರಾತ್ರಿ ತನಕ ಪರಿಶೀಲನೆ ಮಾಡಿ ನಂತರ ಪಟ್ಟಣ ಪಂಚಾಯಿತಿ ಕಾರ್ಯಾಲಯದ ಮುಖ್ಯ ಅಧಿಕಾರಿ ಮತ್ತು ಸಿಬ್ಬಂದಿಗಳ ಕೊಠಡಿಯಲ್ಲಿದ್ದ ಹಲವಾರು ದಾಖಲೆಗಳನ್ನು ವಶಪಡಿಸಿಕೊಂಡು ಕೊಪ್ಪಳ ಲೋಕಾಯುಕ್ತ ಕಚೇರಿಗೆ ತಮ್ಮ ವಾಹನಗಳಲ್ಲಿ ತೆಗೆದುಕೊಂಡು ಹೋಗಿರುವುದಾಗಿ ಮೂಲಗಳಿಂದ ತಿಳಿದು ಬಂದಿದೆ.

ಕಕನೂರು ಪಟ್ಟಣ ಪಂಚಾಯಿತಿ ಕಾರ್ಯಾಲಯದ ಮೇಲೆ ಲೋಕಾಯುಕ್ತ ಅಧಿಕಾರಿ ಸುನಿಲ್ ನೇತೃತ್ವದಲ್ಲಿ ದಾಳಿ ನಡೆದಿದ್ದು ಈ ವೇಳೆಯಲ್ಲಿ ಲೋಕಾಯುಕ್ತ ಅಧಿಕಾರಿ ವರದಿಗಾರರೊಂದಿಗೆ ಮಾತನಾಡುತ್ತಾ ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿ ಬಿ ಖಾತ ಮಾಡಿಕೊಡಲು ಹಣದ ಬೇಡಿಕೆ ಇಟ್ಟಿದ್ದರು ಎಂಬ ಆರೋಪದ ಮೇಲೆ ದಾಳಿ ಮಾಡಿದ್ದು ಅದಕ್ಕೆ ಸಂಬಂಧಪಟ್ಟಂತಹ ದಾಖಲಾತಿಗಳನ್ನು ತೆಗೆದು-ಕೊಂಡು ತನಿಖೆ ನಡೆಸುತ್ತಿದ್ದೇವೆ, ತನಿಖೆ ನಂತರ ಸ್ಪಷ್ಟ ಮಾಹಿತಿ ನೀಡುವುದಾಗಿ ತಿಳಿಸಿದರು.

ಲೋಕಾಯುಕ್ತ ಇಲಾಖೆಯ ಸಿಬ್ಬಂದಿಗಳು ಜೊತೆಯಲ್ಲಿದ್ದರು.

# ಬೀದಿ ಬದಿ ವ್ಯಾಪಾರಸ್ಥರ ತೆರವು ತಡೆದ ರಾಜ್ಯಾಧ್ಯಕ್ಷರ ಮೇಲೆ ಹಲ್ಲೆ ನಡೆಸಿದ ಕಿಡಿಗೇಡಿಗಳ ಬಂಧನಕ್ಕೆ ಒತ್ತಾಯ



**ಮಲ್ಲಮ್ಮ ನುಡಿ ವಾರ್ತೆ**

**ರಾಯಚೂರು:** ಬೆಂಗಳೂರಿನ ಮಹಾದೇವಪುರ ಕ್ಷೇತ್ರಕ್ಕೆ ವ್ಯಾಪ್ತಿಗೆ ಬರುವ ಐಟಿಪಿಎಲ್ ವೈಟಿಫಿಲ್ಡ್ ಸರ್ಕಲ್ ಐ–ಗೇಟ್ ಇರುವ ಬೀದಿ ಬದಿ ವ್ಯಾಪಾರಗಳನ್ನು ದೌರ್ಜನ್ಯದಿಂದ ತೆರವು ವಿಚಾರ ತಿಳಿದ ತಕ್ಷಣವೇ ಭಾರತೀಯ ಸೇವಾ ಸಮತಿ ಸಂಸ್ಥಾಪಕರಾಜ್ಯಾಧ್ಯಕ್ಷರಾದಡಾ.ರಾಮಚಂದ್ರ ಚಿನ್ನಿ ಹೂಡಿ ಅವರು ಸ್ಥಳಕ್ಕೆ ಆಗಮಿಸಿ ಇದನ್ನು ಪ್ರಶ್ನೆಸಿದ ಇವರ ಮೇಲೆ ಹಲ್ಲೆ ನಡೆಸಿದ ಕಿಡಿಗೇಡಿಗಳನ್ನು ಒಂದು ವಾರದಲ್ಲಿ ಬಂಧಿಸಬೇಕು ಇಲ್ಲದಿದ್ದರೆ ಹೋರಾಟ ನಡೆಸಲಾಗುವುದು ಎಂದು ಭಾರತೀಯ ಸೇವಾ ಸಮತಿ ದಲಿತ ಮುಖಂಡರಾದ ಹನುಮಂತಪ್ಪ ಮನ್ನಾಪೂರು ಅವರು ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ,ಬೀದಿ ಬದಿ ವ್ಯಾಪಾರಸ್ಥರು ಜೀವನೋಪಾಯಕ್ಕೆ ಸುಪ್ರೀಂ ಕೋರ್ಟ್ ಆದೇಶವಿದೆ. ಆದರೆ ಏಕಾಏಕಿ ಬೀದಿ ವ್ಯಾಪಾರಿಗಳ ತೆರವು ಕಾರ್ಯಾಚರಣೆ ನಡೆಸುತ್ತಿದೆ. ಇದರಿಂದ ಅವರ ಜೀವನೋಪಾಯ ಕಳೆದುಕೊಳ್ಳುವಂತೆ ಮಾಡಿರುವುದು ಖಂಡನೀಯ ಎಂದರು. ತೆರವು ಕಾರ್ಯಾಚರಣೆ ತಡೆಯಲು ಸ್ಥಳಕ್ಕೆ ಆಗಮಿಸಿದ ರಾಜ್ಯಾಧ್ಯಕ್ಷರಾದ ಡಾ.ರಾಮಚಂದ್ರ ಚಿನ್ನಿ ಹೂಡಿ ಅವರು ಯಾವ ನೈತಿಕತೆಯಿಂದ ಏಕಾಏಕಿ ತೆರವು ಕಾರ್ಯಾಚರಣೆ

ನಡೆಸಲಾಗಿದೆ ಎಂದು ಮಾತಿನ ಚಕಮುಕಿ ನಡೆದಾಗ ರಮೇಶರೆಡ್ಡಿ ತ್ರಿಶೋಧ ಇವರಿಬ್ಬರು ಸೇರಿ ಉಮಾಶಂಕರ ಇವರಿಗೆ ಪ್ರಚೋದನೆ ನೀಡಿ ರಾಮಚಂದ್ರ ಅವರನ್ನು ಹಲ್ಲೆ ನಡೆಸಿ ಅಲ್ಲಿಂದ ಹೊಡೆಸಿದ್ದಾರೆ ಎಂದು ಆರೋಪಿಸಿದರು. ಮಹದೇವಪುರ ಕ್ಷೇತ್ರದ ಶಾಸಕರಾದ ಅರವಿಂದ ಲಿಂಬಾವಳಿ ಅವರಿಗೆ ಘಟನೆಗೆ ಬಗ್ಗೆ ಗಮನಕ್ಕೆ ಬಂದರೂ ಮೌನವಹಿಸಿರುವುದು ಖಂಡನೀಯ ಎಂದರು.

ಒಬ್ಬ ಶಾಸಕರಾಗಿ ಬೀದಿ ವ್ಯಾಪಾರಿಗಳಿಗೆ ಈ ತರ ದೌರ್ಜನ್ಯ, ದಬ್ಬಾಳಿಕೆ, ನಡೆದಾಗ ನೀವು ಹೆಚ್ಚಿನ ಕಾಳಜಿ ವಹಿಸಿ ಅವರಿಗೆ ಬದುಕಲು ಅನುವು ಮಾಡಿಕೊಡಬೇಕು.

ಅದನ್ನು ಬಿಟ್ಟು ನೀವು ಏನು ಗೊತ್ತಿಲ್ಲದ ಸಮಂಜವಲ್ಲ. ಒಬ್ಬ ಬೀದಿ ವ್ಯಾಪಾರಿಗಳ ಸಂಘದ ರಾಷ್ಟ್ರೀಯ ಅಧ್ಯಕ್ಷರಿಗೆ ಈ ತರಹ ಮಾರಾಣಂತಿಕ ಹಲ್ಲೆ ಮಾಡಿದರೆ ಜನಸಮಾನ್ಯರ ಗತಿ ಏನು? ಎಂದು ಶಾಸಕರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರೂ. ಕಿಡಿಗೇಡಿಗಳು ರಾಜ್ಯಾಧ್ಯಕ್ಷರಿಗೆ ಜೀವ ಬೆದರಿಕೆ ಹಾಕಿದರು ಪೊಲೀಸರು ಯಾವುದೆ ಕ್ರಮ ಕೈಗೊಂಡಿಲ್ಲ ಎಂದು ಪೊಲೀಸರ ನಿರ್ಲಕ್ಷ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿತಿಮ್ಮಪ್ಪ,, ಕೃಷ್ಣ ಆಸ್ಕಿಹಾಳ, ರಂಜಿತ್, ವಿರೇಶ,

ಚಂದ್ರಶೇಖರ, ಸೇರಿದಂತೆ ಅನೇಕರೂ ಉಪಸ್ಥಿತರಿದ್ದರು.

# ಲೋಕಾಯುಕ್ತರ ಆದೇಶಕ್ಕೆ ಕಿಮ್ಮತ್ತು ನೀಡದ ಯೋಜನಾ ನಿರ್ದೇಶಕರ ಅಮಾನತಿಗೆ ಆಗ್ರಹ

**ಮಲ್ಲಮ್ಮ ನುಡಿ ವಾರ್ತೆ**

**ರಾಯಚೂರು:** ಲೋಕಾಯುಕ್ತರ ಆದೇಶಕ್ಕೆ ಕಿಮ್ಮತ್ತು ಕೊಡದ ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಈರಣ್ಣ ಬಿರಾದಾರ ಹಾಗೂ ಮುಖ್ಯ ಅಧಿಕಾರಿಯಾದ ಹಂಪಯ್ಯ ಇವರನ್ನು ಕೂಡಲೇ ಅಮಾನತು ಮಾಡಬೇಕು ಎಂದು ಸಾಮಾಜಿಕ ಕಾರ್ಯಕರ್ತರಾದ ಅಳ್ಳಪ್ಪ ಅವರು ರಾಜ್ಯ ಸರಕಾರ–ಕ್ಕೆ ಆಗ್ರಹಿಸಿದರು.ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ,ದೇವದುರ್ಗ ಪುರಸಭೆ ವ್ಯಾಪ್ತಿಯಲ್ಲಿ ಬರುವ ಅಮರೇಶ ಬಿಲ್ಲದವರ ಮನೆಯಿಂದ ಮಿನಿ ವಿಧಾನಸೌಧದ ವರಗೆ 25 ಅಡಿ ರಸ್ತೆ ಆಗಲಿಕರಣ ಮಾಡಲು ದಿ. ನ.20 2010 ರಲ್ಲಿ ಪುರಸಭೆ ಕಾರ್ಯಾಲಯದಲ್ಲಿ ಅಧ್ಯಕ್ಷರಾದ ಲೋಕಮ್ಮ ಅಮರಣ್ಣಗೌಡ ಅವರ ನೇತೃತ್ವದಲ್ಲಿ ಸಭೆಯಲ್ಲಿ ತೀರ್ಮಾನಿಸಲಾಗಿದೆ. ನಿರ್ಣಯ ತೆಗೆದುಕೊಂಡು 15 ವರ್ಷ ಕಳೆದರೂ ಇದುವರೆಗೂ ರಸ್ತೆ ಅಗಲೀಕರಣ ಕಾರ್ಯ ನಡೆದಿಲ್ಲ ಎಂದು ದೂರಿದರು. ಅಧಿಕಾರಗಳು ಸಂಪೂರ್ಣ ನಿರ್ಲಕ್ಷ ವಹಿಸಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.ಈ ಪ್ರಕರಣಕ್ಕೆ ಸಂಬಂಧಸಿ 2014 ರ ಸೆಪ್ಟೆಂಬರ್ 25 ರಂದು ಲೋಕಾಯುಕ್ತರಿಗೆ ದೂರು ಸಲ್ಲಿಸಿದರು ಇದುವರೆಗೂ ಯಾವುದೆ ಕ್ರಮ ಕೈಗೊಂಡಿಲ್ಲ ಎಂದು ದೂರಿದರು. ಇತ್ತೀಚಿಗೆ ಜಿಲ್ಲೆಗೆ ಆಗಮಿಸಿದ ಉಪಲೋಕಾಯುಕ್ತರಿಗೆ ರಸ್ತೆ ಅಗಲೀಕರಣ ಮಾಡುವಂತೆ ಮನವಿ ಸಲ್ಲಿಸಲಾಗಿತ್ತು. ನಮ್ಮ ಮನವಿಗೆ ಸ್ಪಂದಿಸಿದ ಲೋಕಾಯುಕ್ತರು 90 ದಿನ ಒಳಗಡೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಆದೇಶ ನೀಡಿದರು ಅಧಿಕಾರಿಗಳು ಆದೇಶವನ್ನು ಉಲ್ಲಂಘಿಸಿದ್ದಾರೆ



ಎಂದು ಆರೋಪಿಸಿದರು.

ಲೋಕಾಯುಕ್ತರು ಅಧಿಕಾರಿಗಳಿಗೆ ಅದೇಶಿಸಿ ವರ್ಷಗಳು ಕಳೆದರೂ ನಿರ್ಲಕ್ಷ ವಹಿಸಿದ ಅಧಿಕಾರಿಗಳ ವಿರುದ್ಧ ಲೋಕಾಯುಕ್ತರು ಯಾವುದೇ ಕ್ರಮ ಕೈಗೊಳ್ಳಲಿದೆ ಇರುವುದರ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಲೋಕಾಯುಕ್ತರು ಒತ್ತಡಕ್ಕೆ ಮಣಿದು ಅಧಿಕಾರಿಗಳ ಜೊತೆ ಹೊಂದಾಣಿಕೆಯಾದರೆ ಸಾರ್ವಜನಿಕ ಸಮಸ್ಯೆಗಳ ಬಗೆಹರಿಸಲು ಸಾಧ್ಯವೇ ಎಂದು ಪ್ರಶ್ನೆಸಿದರು.

# ಗೋಹತ್ಯೆ ನಿಷೇದ ಕಾಯ್ದೆ ಕೈ ಬಿಡಲು ಆಗ್ರಹಿಸಿ ಪ್ರತಿಭಟನೆ



**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಕರ್ನಾಟಕ ಗೋಹತ್ಯೆ ಮತ್ತು ಪ್ರತಿಬಂಧಕ 2020ರ ನಿಷೇಧ ಕಾಯ್ದೆಯನ್ನು ಬೆಳಗಾವಿಯಲ್ಲಿ ನಡೆಯುವ ಚಳಿಗಾಲದ ಅಧಿವೇಶನದಲ್ಲಿ ರಾಜ್ಯ ಸರಕಾರ ಕೈ ಬಿಡಬೇಕು ಎಂದು ಆಗ್ರಹಿಸಿ ವಿಶ್ವ ಹಿಂದೂ ಪರಿಷತ್ ಭಜರಂಗದಳ ಮುಖಂಡರು ನಗರದ ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ಕಾಂಗ್ರೆಸ್ ಸರಕಾರ ಗೋಕಳ್ಳರಿಗೆ ಸಹಕರಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಿಂದೂ ಸಮಾಜಕ್ಕೆ ಅತ್ಯಂತ ಪೂಜನೀಯವಾದ

ಗೋಮಾಂಸ ಹಿಂಸಾತ್ಮಕವಾಗಿ ಕಳ್ಳಸಾಗಾಟ ಮಾಡುವಾಗ ಪೊಲೀಸರು ವಶಪಡಿಸಿದ ಸಾಗಾಟ ವಾಹನಗಳನ್ನು ಸುಲಭದಲ್ಲಿ ಹಿಂತಿರುಗಿಸುವಂತೆ ಮಾಡಲು ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಹಾಗೂ ಸಂರಕ್ಷಣಾ ಕಾಯಿದೆ 2020ನ್ನು ಸಡಿಲುಗೊಳಿಸಿ ತಿದ್ದುಪಡಿ ತರಲು ಮುಂದಾಗಿರುವುದು ತಕ್ಷಣವೇ ಕೈ ಬಿಡಬೇಕು ಎಂದು ಆಗ್ರಹಿಸಲಾಯಿತು.

ಗೋವುಗಳಿಗೆ ಹಿಂಸೆ ಹೆಚ್ಚಾಗುವ ಸಾಧ್ಯತೆ ಇರುವ ಈ ತಿದ್ದುಪಡಿಯನ್ನು ತಕ್ಷಣ ಹಿಂದಕ್ಕೆ ಪಡೆಯ ಬೇಕೆಂದು ಸರಕಾರಕ್ಕೆ ಆಗ್ರಹಿಸಿದೆ.

ಈಗಿರುವ ಕಾಯಿದೆಯ ಸೆಕ್ಷನ್ 8ರ ಪ್ರಕಾರ ಪ್ರಸ್ತುತ ಅಕ್ರಮ ಗೋಸಾಗಾಟದ ವಾಹನವನ್ನು ಪೊಲೀಸರು ವಶಪಡಿಸಿದಾಗ ವಾಹನದ ಮೌಲ್ಯದಷ್ಟು ಬ್ಯಾಂಕ್ಗ್ಯಾರಂಟಿಯನ್ನು ಕೊಟ್ಟೇ ತಾತ್ಕಾಲಿಕವಾಗಿ ಹಿಂಪಡೆಯಲು ಅವಕಾಶವಿದೆ. ಬ್ಯಾಂಕ್ ಗ್ಯಾರಂಟಿಯನ್ನು ಪ್ರಸ್ತುತಪಡಿಸಿ ವಾಹನವನ್ನು ತಾತ್ಕಾಲಿಕವಾಗಿ ಬಿಡುಗಡೆಗೊಳಿಸಲು ಅವಕಾಶವಿದೆ. ಪ್ರಕರಣದ ಅಪರಾಧ ಸಾಬೀತಾದಲ್ಲಿ ವಾಹನವನ್ನು ವಾಪಸ್ ತಂದು ಸರಕಾರಕ್ಕೆ ಮುಟ್ಟುಗೋಲು ಹಾಕಬೇಕಾಗುತ್ತದೆ. ಇದಕ್ಕೆ ತಪ್ಪಿದಲ್ಲಿ ಬ್ಯಾಂಕ್ ಗ್ಯಾರಂಟಿಯ ಹಣವನ್ನು ಸರಕಾರಕ್ಕೆ ಮುಟ್ಟುಗೋಲು ಹಾಕಲಾಗುತ್ತದೆ. ಈಗ ಇರುವ ಕಾಯಿದೆ ಸಾಕಷ್ಟು ಪರಿಣಾಮಕಾರಿಯಾಗಿದ್ದು, ಬ್ಯಾಂಕ್ ಗ್ಯಾರಂಟಿ ತೆಗೆದು ಕೊಳ್ಳುವ ಶರತ್ತಿನಿಂದಾಗಿ ಸಾಕಷ್ಟು ಅಕ್ರಮ ಗೋ ಸಾಗಾಟ ಸ್ವಲ್ಪ ಮಟ್ಟಿಗೆ ಕಡಿಮೆಯಾಗಿದ್ದು, ಸಾವಿರಾರು ಗೋವಂಶಗಳ ರಕ್ಷಣೆಗೆ ಕಾರಣವಾಗಿದೆ, ಇದರಲ್ಲಿ ಗೋ ಕಳ್ಳ ಸಾಗಾಟಗಾರರಿಗೆ ಬ್ಯಾಂಕ್ಗಾರಂಟಿಯನ್ನು ಕೊಡಲು ಕಷ್ಟವಾಗುತ್ತದೆ ಎಂಬ ಅಸಂಭದ್ದ ನೆಪ ಒಡ್ಡಿ. ಅಂತಹ ಆರೋಪಿಗಳ ಮೇಲಿನ ಕನಿಕರದಿಂದ ಕಾಂಗ್ರೆಸ್ ಸರಕಾರವು ತಿದ್ದುಪಡಿಗೆ ಹೊರಟಿದೆ ಎಂದಿದ್ದಾರೆ

ಈ ತಿದ್ದುಪಡಿಯನ್ನು ತಕ್ಷಣ ಹಿಂದೆ ಪಡೆಯಲು ಒತ್ತಾಯಿಸಿ ಪ್ರತಿಭಟನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ರವಿಕುಮಾರ, ಡಿ. ರವಿ ಕೃಷ್ಣ,ನಿರಂಜನ್ ಮೂರ್ತಿ ಶ್ರೀನಿವಾಸ್ ಯಾದವ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಬೆಳಗಾವಿ ಅಧಿವೇಶನ ರೈತರ ಸಮಸ್ಯೆ ಪರಿಹಾರಕ್ಕೆ ಆಗ್ರಹಿಸಿ ಜೆಡಿಎಸ್ ಪ್ರತಿಭಟನೆ

**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಬೆಳಗಾವಿ ಅಧಿವೇಶನದಲ್ಲಿ ರೈತರ ಸಮಸ್ಯೆಗಳನ್ನು ಚರ್ಚಿಸಿ ಸೂಕ್ತ ಪರಿಹಾರ ನೀಡಬೇಕು

ಎಂದು ಆಗ್ರಹಿಸಿ ಜೆಡಿಎಸ್ ಕಾರ್ಯಕರ್ತರು ನಗರದ ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು. ಜೆಡಿಎಸ್ ತಾಲೂಕು ಘಟಕ ವತಿಯಿಂದ ಪರಾಜತ ಅಭಿವೃದ್ಧಿ ನರಸಿಂಹ ನಾಯಕ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಕಳೆದ ಒಂದು ವರ್ಷದಿಂದ ರೈತರ ಸಂಪೂರ್ಣವಾಗಿ ಸಂಕಷ್ಟದಲ್ಲಿದ್ದಾರೆ ಇದ್ದಾರೆ ಆದರೆ ರಾಜ್ಯ ಸರಕಾರ ಖುರ್ಚಿ ಗುದ್ದಾಟ ಬಿಟ್ಟು ರೈತರ ಸಮಸ್ಯೆಗಳ ಪರಿಹಾರ ನೀಡಿ ಎಂದು ಘೋಷಣೆಯೊಂದಿಗೆ ಪ್ರತಿಭಟನೆ ನಡೆಸಲಾಯಿತು. ಕಳೆದ ಬಾರಿ ಬಹಳಷ್ಟು ಮಳೆಯಿಂದ ಅತಿವೃಷ್ಟಿಯಾದಾಗ ಆಗ ಸರ್ಕಾರವು ಅವರಿಗೆ ಯಾವುದೇ ಸಹಾಯಕ್ಕೆ ಧಾವಿಸದೆ ಮತ್ತು ಪರಿಹಾರವನ್ನು ನೀಡಲಿಲ್ಲ ಇದರ ಇದರಿಂದ ರೈತರ ಜೀವನವು ದುಸ್ತರವಾಗಿದೆ ಸರ್ಕಾರದಿಂದ ಬೆಂಬಲ ಬೆಲೆ ಘೋಷಣೆ ಆಗದಿರುವ ಕಾರಣಕ್ಕೆ ಮುಕ್ತ ಮಾರುಕಟ್ಟೆಯಲ್ಲಿ ಬೇಕಾಬಿಟ್ಟಿ ಬೆಲೆಗೆ ಹತ್ತಿ ಖರೀದಿಸಲಾಗುತ್ತಿದೆ.



ಗುಣಮಟ್ಟದ ನೆಪವೊಡ್ಡಿ ಮನಬಂದ ದರಕ್ಕೆ ಖರೀದಿ ಮಾಡಲಾಗುತ್ತಿದೆ ಎಂದು ದೂರಿದರು. ರೈತರಿಗೆ ಆಗುವ ನಷ್ಟ ತಪ್ಪಿಸಬೇಕಾದರೆ ಸರ್ಕಾರವೇ ಬೆಂಬಲ ಬೆಲೆ ಹೆಚ್ಚಿಸಬೇಕು ಎಂಬುದು ರೈತರ ಒತ್ತಾಯವಾಗಿದೆ.ರೈತರ ಸ್ಪಂದಿಸಿ ನೆರವಿಗೆ ಬಾರದೆ, ಸಿಎಂ ಕುರ್ಚಿಗಾಗಿ ಕಾಂಗ್ರೆಸ್ಸಿನಲ್ಲೀಗ ಒಬ್ಬೊಬ್ಬ ಶಾಸಕರಿಗೆ ರೂ.50 ಕೋಟಿ ಹಣ ಕೊಟ್ಟು ಖರೀದಿಸುವಲ್ಲಿ ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ ಅವರು ಬ್ಯುಸಿಯಾಗಿದ್ದಾರೆ,ತುಂಗಭದ್ರಾ ನಾಲ್ಕು ಜಿಲ್ಲೆಗಳ ಜೀವನಾಡಿ. ಭೂಮಿ ತಾಯಿ ನಂಬಿ ರೈತರು ಬದುಕುತ್ತಿದ್ದಾರೆ. ಆದರೆ ರೈತರ ಬಗ್ಗೆ ಸರಕಾರಕ್ಕೆ ಕಾಳಜಿ ಇಲ್ಲದಂತಾಗಿದೆ.ರೈತರ ಬದುಕಿನ ಗ್ಯಾರಂಟಿಯ ಬಗ್ಗೆ ಕಾಂಗ್ರೆಸ್ ಸರಕಾರ ಮಾತನಾಡುತ್ತಿಲ್ಲ.

ತುಂಗಭದ್ರ ನಾಲೆಗೆ ಎರಡನೇ ಬೆಳೆಗೆ ನೀರು ಇಲ್ಲ. ಅದಕ್ಕೆ ಪ್ರತಿ ಎಕರೆಗೆ 25 ಸಾವಿರ ಪರಿಹಾರ ನೀಡಬೇಕು. ಇದು ಸಾಧ್ಯವಾಗದಿದ್ದರೆ ರೈತರ ಸಾಲ ಮನ್ನಾ ಮಾಡಬೇಕು. ಅತಿವೃಷ್ಟಿಯಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಪಾರ ಪ್ರಮಾಣದಲ್ಲಿ ಬೆಳೆ ಹಾನಿಯಾಗಿದೆ. ರೈತರ ಬದುಕು ಬೀದಿಪಾಲಾಗಿದೆ. ಆಡಳಿತ ಪಕ್ಷ–ಕ್ಕೆ ಮಾನ–ಮರ್ಯಾದೆ ಇಲ್ಲವಾಗಿದೆ. ಹತ್ತಿ ಖರೀದಿ ಕೇಂದ್ರಗಳಲ್ಲಿರುವ ಸಮಸ್ಯೆಗಳನ್ನು ತಕ್ಷಣವೇ ಸರಿಪಡಿಸುವುದು ಮತ್ತು ಸೂಕ್ತ ಬೆಂಬಲ ಬೆಲೆ ನೀಡಬೇಕು ಭತ್ತ ಖರೀದಿ ಕೇಂದ್ರವನ್ನು ಹೆಚ್ಚಿಗೆ ಮಾಡುವುದು ಆಂಧ್ರದ ಮಾದರಿಯಲ್ಲಿ 500 ಹೆಚ್ಚಿಗೆ ಪರಿಹಾರ,ತುಂಗಭದ್ರಾ ಎಡದಂಡೆ ಕಾಲುವೆಗೆ 2 ನೇಯ ಬೆಳೆಗೆ ನೀರಿಲ್ಲ ಆದ ಕಾರಣ ಪ್ರತಿ ಎಕರೆಗೆ 25,000 ಪರಿಹಾರ ನೀಡುವುದು ಮತ್ತು ಸಾಲ ಮನ್ನಾ ಹಾಗೂ ಈ ಭಾಗದ ಬಾಕಿ ಇದ್ದ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಬೇಕು ಎಂದು ಆಗ್ರಹಿಸಲಾಯಿತು. ಕಲ್ಯಾಣ ಕರ್ನಾಟಕ ಭಾಗದ ಸಮಸ್ಯೆಗಳನ್ನು ತಕ್ಷಣವೇ ಪರಿಹರಿಸುವುದು ಈ ಮೇಲಿನ ವಿಷಯಗಳನ್ನು ತಕ್ಷಣವೇ ಸದನದಲ್ಲಿ ಪ್ರಸ್ತಾಪಿಸಿ ಸರಕಾರವು ತಕ್ಷಣವೇ ರೈತರ ಸಹಾಯಕ್ಕೆ ಧಾವಿಸಬೇಕೆಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಎಂ.ವಿರೂಪಾಕ್ಷಿ, ಎಂ.ಶಿವಶಂಕರ ವಕೀಲರು, ರಾಮಕೃಷ್ಣ, ನರಸಪ್ಪ ಸೇರಿದಂತೆ ಉಪಸ್ಥಿತರಿದ್ದರು.

# ವಿಶ್ವಂ ಅಬಾಕಸ್ ಮತ್ತು ವೇದಿಕ್ ಮ್ಯಾಥ್ಸ್ ರಾಜ್ಯ ಮಟ್ಟದ ಸ್ಪರ್ಧೆ

# ವಿದ್ಯಾರ್ಥಿಗಳು ರಾಷ್ಟ್ರಮಟ್ಟಕ್ಕೆ ಆಯ್ಕೆ: ಎಂ. ಡಿ ಮುಬೀನ್ ಖಾನ್



ಮಲ್ಲಮ್ಮ ನುಡಿ ವಾರ್ತೆ ರಾಯಚೂರು :

ವಿಶ್ವಂ ಎಡ್ಯೂಟೆಕ್ ಅವರ ಆಶ್ರಯದಲ್ಲಿ ರಾಯಚೂರಿನ ಶ್ರೀ ಕೃಷ್ಣ ಗಾರ್ಡನ್ ಫಂಕ್ಷನ್ ಹಾಲ್‌ನಲ್ಲಿ ಅಬಾಕಸ್ ಮತ್ತು ವೇದಿಕ್ ಮ್ಯಾಥ್ಸ್ ರಾಜ್ಯ ಮಟ್ಟದ ಸ್ಪರ್ಧೆಗಳು ಯಶಸ್ವಿಯಾಗಿ ಆಯೋಜಿಸಲ್ಪಟ್ಟವು.

ರಾಜ್ಯದ 30 ಶಾಲೆಗಳ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಅಬಾಕಸ್ ಮತ್ತು ವೇದಿಕ್ ಮ್ಯಾಥ್ಸ್ ಪರೀಕ್ಷೆಗೆ ಭಾಗವಹಿಸಿದ್ದ 500 ಮಕ್ಕಳಲ್ಲಿ 50 ಮಕ್ಕಳನ್ನು ಪ್ರಥಮ ಮತ್ತು ದ್ವಿತೀಯ ಬಹುಮಾನಗಳ ವಿಜೇತರಾಗಿ ಆಯ್ಕೆ ಮಾಡಲಾಗಿದ್ದು,ಅವರು ಮಾರ್ಚ್‌ನಲ್ಲಿ ನಡೆಯಲಿರುವ ರಾಷ್ಟ್ರೀಯ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ.

ವಿಶ್ವಂ ಎಡ್ಯೂಟೆಕ್ ಸಿಇಒ ಹರಿಚರಣ್ ಸರ್, ಪ್ರಾದೇಶಿಕ ಮ್ಯಾನೇಜರ್ ಎಂ. ಡಿ ಮುಬೀನ್ ಖಾನ್ ಮತ್ತು ಏರಿಯಾ ಮ್ಯಾನೇಜರ್ ರಂಗಸ್ವಾಮಿ ಮುಖ್ಯ ಅತಿಥಿಗಳಾಗಿ ಈ ಕಾರ್ಯಕ್ರಮದಲ್ಲಿ ಭಾಗವಹಿಸಿದರು. ವಿಶ್ವಂ ಎಡ್ಯೂಟೆಕ್ ಸಿಇಒ ಹರಿಚರಣ್ ಸರ್ ಅವರು ಮಾತನಾಡಿ, "ಮಕ್ಕಳು ಗಣಿತವನ್ನು ತುಂಬಾ ಭಯಪಡುತ್ತಾರೆ. ಅಬಾಕಸ್ ಕಲಿಯುವ ಮೂಲಕ ಮಕ್ಕಳಲ್ಲಿ ಸೃಜನಶೀಲತೆ ಮತ್ತು ಸ್ಮರಣಾಶಕ್ತಿ ವೃದ್ಧಿಯಾಗುವುದಲ್ಲದೇ, ಗಣಿತದ ಭಯವನ್ನು ದೂರ ಮಾಡಿ ಆತ್ಮವಿಶ್ವಾಸ ಹೆಚ್ಚಿಸಲು ಸಹಾಯವಾಗುತ್ತದೆ," ಎಂದರು.ನಂತರ ರಾಯಚೂರು ಜಿಲ್ಲೆಯ ವಿಶ್ವಂ ಎಡ್ಯೂಟೆಕ್ ಕಂಪನಿಯ ಪ್ರಾದೇಶಿಕ ಮ್ಯಾನೇಜರ್ ಹಾಗೂ ಸೈಬರ್ ಒಮೆಗಾದ ಸಿ.ಇ.ಓ ಎಂ. ಡಿ ಮುಬೀನ್ ಖಾನ್ ಮಾತನಾಡಿ ಅಬಾಕಸ್ ಇದು ಕೇವಲ ಗಣಿತದ ಭಾಗವಲ್ಲ ಬದಲಾಗಿ ಮಗುವಿನ "360 ಡಿಗ್ರಿ ಬ್ರೈನ್ ಡೆವಲಪ್ಮೆಂಟ್ ಪ್ರೋಗ್ರಾಂ" ಆಗಿದ್ದು ಮಗುವಿನ ಸರ್ವೋತುಮೋಖ ಬೆಳವಣಿಗೆ ಸಹಕಾರಿಯಾಗಲಿದೆ ಎಂದರು.ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಶಿಕ್ಷಕರು, ಮುಖ್ಯ ಶಿಕ್ಷಕರು, ಪೋಷಕರು ಹಾಗೂ ವಿಶ್ವಂ ತಂಡದ ಸೇಲ್ಸ್ ಹೆಡ್ ಪವನ್, ಶಿವಾಂಜನೇಯಲು ಇತರರು ಭಾಗವಹಿಸಿದ್ದರು ಎಂದು ಮುಬೀನ್ ಖಾನ್ ಪ್ರಾದೇಶಿಕ ಮ್ಯಾನೇಜರ್ ವಿಶ್ವಂ ಎಡ್ಯೂಟೆಕ್ ಇವರು ಪತ್ರಿಕೆಗೆ ಮಾಹಿತಿ ನೀಡಿದರು.

# ಜಾನುವಾರು ಹತ್ಯೆ ತಿದ್ದುಪಡಿ ಕಾಯ್ದೆ ಮಂಡಿಸದಿರಲು ಒತ್ತಾಯಿಸಿ ಪ್ರತಿಭಟನೆ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:** ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಹಾಗೂ ಸಂರಕ್ಷಣಾ --2020 ಸರ್ಕಾರ ಉದ್ದೇಶ ಹೊಂದಿರುವ ತಿದ್ದುಪಡಿಯ ವಿರುದ್ಧ ವಿಶ್ವ ಹಿಂದೂ ಪರಿಷತ್ ಹಾಗೂ ಭಜರಂಗ ದಳದ ನೇತೃತ್ವದಲ್ಲಿ ನಗರದಲ್ಲಿ – ಇಂದು ಬೃಹತ್ ಪ್ರತಿಭಟನೆ ನಡೆಯಿತು.

ನಗರದ ನಾರಾಯಣರಾವ್ ಪಾರ್ಕ್‌ನಿಂದ ಪ್ರಾರಂಭವಾದ ಪ್ರತಿಭಟನಾ ಮೆರವಣಿಗೆ ಡಾ.ರಾಜ್‌ಕುಮಾರ್ ರಸ್ತೆ. ಗಡಿಗಿ ಚೆನ್ನಪ್ಪ ವೃತ್ತ, ಸ್ಟೇಷನ್ ರಸ್ತೆ ಮೂಲಕ ಜಿಲ್ಲಾಧಿಕಾರಿಗಳ ಕಚೇರಿಗೆ – ತಲುಪಿತು.

ಪ್ರತಿಭಟನಾ ಮೆರವಣಿಗೆಯಲ್ಲಿ ನೂರಾರು ಕಾರ್ಯಕರ್ತರು ಭಾಗವಹಿಸಿ ರಾಜ್ಯ ಸರ್ಕಾರದ ನಿರ್ಧಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ – ವ್ಯಕ್ತಪಡಿಸಿದರು. ಪ್ರತಿಭಟನಾಕಾರರು ಡಿಸಿ ಕಚೇರಿಗೆ ತಲುಪಿದ ನಂತರ ಜಿಲ್ಲಾಧಿಕಾರಿಗೆ ಮನವಿ ಪತ್ರವನ್ನು ಸಲ್ಲಿಸಿದರು.

ಮನವಿ ಪತ್ರದಲ್ಲಿ, ಜಾನುವಾರುಗಳನ್ನು ಕ್ರೂರವಾಗಿ ವಾಹನಗಳಲ್ಲಿ ತುಂಬಿ ಸಾಗಿಸುವ ಸಂದರ್ಭಗಳು ಕಡಿಮೆಯಾಗಲು ಪ್ರಸ್ತುತ ಕಾಯ್ದೆ ನೆರವಾಗುತ್ತಿತ್ತು; ಆದರೆ ಹೊಸ ತಿದ್ದುಪಡಿ ಕಳ್ಳಸಾಗಾಟಗಾರ–ರಿಗೆ ಮತ್ತು ಅಕ್ರಮ ಸಾಗಾಟಗಾರರಿಗೆ "ಮತ್ತಷ್ಟು ಧೈರ್ಯ" ನೀಡುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಹಾಗೆಯೇ, ವಾಹನಗಳನ್ನು ವಶಪಡಿಸಿಕೊಂಡ

ಹಿಂದಿರುಗಿಸಲು ಬ್ಯಾಂಕ್ ಗ್ಯಾರಂಟಿ ಸರ್ಕಾರ ಅಗತ್ಯವಿಲ್ಲ ಎಂಬ ತಿದ್ದುಪಡಿ ಜಾರಿಗೆ ಬಂದರೆ ಕಾನೂನು ದುರ್ಬಲಗೊಳ್ಳುವ ಸಂಭವವಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು. ರಾಜ್ಯ ತರಲು ಉದ್ದೇಶಿಸಿರುವ "ಈ ತಿದ್ದುಪಡಿ ಸಂವಿಧಾನದ ಆರ್ಟಿಕಲ್ 51ಎ ರಲ್ಲಿರುವ ಜೀವಿಗಳಿಗೆ ಕರುಣೆ ತೋರಬೇಕೆಂಬ ಮೂಲಭೂತ ಕರ್ತವ್ಯಕ್ಕೂ ವಿರುದ್ಧ" ಎಂದು ಪ್ರತಿಭಟನಾಕಾರರು ಟೀಕಿಸಿದ್ದಾರೆ. ಗೋ ಸಂರಕ್ಷಣೆಯ ಹೆಸರಿನಲ್ಲಿ ಜಾರಿಯಲ್ಲಿರುವ ಕಾನೂನನ್ನು ದುರ್ಬಲಗೊಳಿಸುವ ಮೂಲಕ ಸರ್ಕಾರವು ಹಿಂದೂ ಭಾವನೆಗಳಿಗೆ ಎಂದು ನೋವುಂಟುಮಾಡುತ್ತಿದೆ ಪ್ರತಿಭಟನಾಕಾರರು ಆರೋಪಿಸಿದರು.

**"ಸಂವಿಧಾನದ ಆತ್ಮ ಹಾಗೂ ರಾಜ್ಯದ ರಾಜ್ಯದಾದ್ಯಂತ ಬೃಹತ್ ಪ್ರತಿಭಟನೆ**

ಹಿತರಕ್ಷಣೆಗೆ ಈ ತಿದ್ದುಪಡಿಯನ್ನು ವಿಧಾನಸಭೆಯಲ್ಲಿ ಮಂಡಿಸಬಾರದು' ಎಂದು ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಪ್ರತಿಭಟನಾ ಮೆರವಣಿಗೆಯಲ್ಲಿ ಬಳ್ಳಾರಿ ನಗರದ ಮಾಜಿ ಶಾಸಕ ಸೋಮಶೇಖರ್ ರೆಡ್ಡಿ, ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ನಾಯ್ಡು ಮೋಕಾ, ಬಿಜೆಪಿ ಮುಖಂಡರಾದ ಕೆ.ಎ.ರಾಮಲಿಂಗಪ್ಪ, ಗಣಪಾಲ್ ಐನಾಥ–'ರೆಡ್ಡಿ. ಎಚ್ ಹನುಮಂತಪ್ಪ, ಗುರಂ ವೆಂಕಟರಮಣ, ಕೆ.ಆರ್.ಮಲ್ಲೇಶ್‌ಕುಮಾರ್. ಜನಾರ್ದನ್, ಊಳೂರು ಸಿದ್ದೇಶ್. ನಾಗೇಂದ್ರ, ಗೋವಿಂದ, ಸೇರಿದಂತೆ ವಿಶ್ವ ಹಿಂದೂ ಪರಿಷತ್, ಬಜರಂಗದಳದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಆರ್.ಬಿ.ತಿಮ್ಮಪೂರ ರವರಿಗೆ ಅಭಿಮಾನಿಗಳಿಂದ ಸನ್ಮಾನ.



**ಮಲ್ಲಮ್ಮ ನುಡಿ ವಾರ್ತೆ ಮಸ್ಕಿ:**

ಪಟ್ಟಣದ ಗಾಂಧಿ ನಗರದ ಕವಿತಾಳ ರಸ್ತೆಯಲ್ಲಿರುವ ಎಂ.ಎನ್.ಗುಂಡಳ್ಳಿ ಯವರ ಫಂಕ್ಷನ್ ಹಾಲ್ ನಲ್ಲಿ ಶ್ರೀಮತಿ ಶಶಿಕಲಾ ಮತ್ತು ಶ್ರೀ ಹನುಮೇಶ್ ವಕೀಲರ ಗುಂಡೂರು ಬಂಧುಗಳ

ಮಗನ ನಾಮಕರಣ

ಖಾಸಗಿ ಸಮಾರಂಭ ಕಾರ್ಯಕ್ರಮಕ್ಕೆ ಆಗಮಿಸಿದ್ದ ಕರ್ನಾಟಕ ರಾಜ್ಯ ಸರ್ಕಾರದ ಅಬಕಾರಿ ಸಚಿವರಾದ ಆರ್ ಬಿ ತಿಮ್ಮಾಪೂರ ರವರು ಗಾಂಧಿನಗರದಲ್ಲಿರುವ ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ರವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಸಚಿವರಿಗೆ ಮತ್ತು ಅವರ ಸುಪುತ್ರನಾದ ವಿನಯ್ ತಿಮ್ಮಾಪೂರ ರವರಿಗೆ ಕಾಂಗ್ರೆಸ್ ಕಾರ್ಯಕರ್ತರು,ಅಭಿಮಾನಿಗಳು,ಮತ್ತು ಮಾದಿಗ ಸಮುದಾಯದವರು ಸನ್ಮಾನಿಸಿ ಗೌರವಿಸಿದರು.

ಈ ವೇಳೆ ಮಲ್ಲಯ್ಯ ಬಳ್ಳಾ,ದುರ್ಗಾಪ್ರಸಾದ್ ತೋರಣದಿನ್ನಿ,ಅಮರೇಶ ಮಲ್ಕಾಪೂರು,ರಾಯಪ್ಪ ಮುರಾರಿ,ದುರುಗಪ್ಪ ಮುರಾರಿ,ಖಾಸಿಮಪ್ಪ ಡಿ ಮುರಾರಿ, ಅಶೋಕ ಮುರಾರಿ, ಕಿರಣ್ ಮುರಾರಿ, ಗಂಗಾಧರ್ ಮುರಾರಿ, ಪ್ರಶಾಂತ್ ಕೊಠಾರಿ,ಮಲ್ಲಿಕ್ ಕೊಠಾರಿ,ಸಿದ್ದು ಮುರಾರಿ,ರಂಜೀತ್ ಮುರಾರಿ,ಸಚಿನ್ ಮುರಾರಿ,ಮೌನೇಶ ಚಿಕ್ಕಕಡಬೂರು,ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬೀದಿನಾಯಿ ದತ್ತು ಪಡೆದು ಪೋಷಿಸಲು ಆಹಾರ ಪೂರೈಸುವವರಿದ್ದಲ್ಲಿ ಸಂಪರ್ಕಿಸಿ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಬೀದಿನಾಯಿಗಳನ್ನು ದತ್ತು ಪಡೆದು ಅವುಗಳನ್ನು ಪೋಷಣೆ ಮಾಡಲು ಇಚ್ಚಿಸುವವರು,

ಪ್ರಾಣಿಗಳ ಸಂರಕ್ಷಣೆ ಸಂಕಲ್ಪ ಹೊಂದಿರುವವರು, ಪ್ರಾಣಿಗಳ ಮೇಲೆ ದಯೆ ಇರುವವರು ಬೀದಿನಾಯಿಗಳನ್ನು ದತ್ತು ಪಡೆಯಲು ಅಥವಾ ಆಶ್ರಣ ತಾಣದಲ್ಲಿರುವ ಬೀದಿನಾಯಿಗಳಿಗೆ ಆಹಾರ ಪೂರೈಸಲು ಇಚ್ಚಿಸುವವರು ಇದ್ದಲ್ಲಿ ಕೂಡಲೇ ಮಹಾನಗರ ಪಾಲಿಕೆ ಕಾರ್ಯಾಲಯಕ್ಕೆ ಸಂಪರ್ಕಿಸಬಹುದಾಗಿದೆ.

ಬೀದಿನಾಯಿಗಳಿಂದ ಸಾರ್ವಜನಿಕರಿಗೆ ಹಾಗೂ ಸಂಚಾರಿಸುವ ವಾಹನದಾರರಿಗೆ ಆಗುವ ತೊಂದರೆಯನ್ನು ನಿಯಂತ್ರಿಸಲು ಮಹಾನಗರ ಪಾಲಿಕೆ ವತಿಯಿಂದ ಹಿಡಿದು ಅವುಗಳನ್ನು ಆಶ್ರಯ ತಾಣಕ್ಕೆ ಸಾಗಿಸಲಾಗುತ್ತಿದೆ.

ಹಾಗಾಗಿ ಎನ್.ಜಿ.ಓ ಸಂಘ ಸಂಸ್ಥೆಗಳು, ಪ್ರಾಣಿದಯಾ ಸಂಘಗಳು ಹಾಗೂ ಇತರೆ ಪ್ರಾಣಿ ಪ್ರಿಯರಿದ್ದಲ್ಲಿ

ಬಳ್ಳಾರಿ ಮಹಾನಗರ ಪಾಲಿಕೆ ಕಾರ್ಯಾಲಯಕ್ಕೆ ಸಂಪರ್ಕಿಸಬಹುದು ಎಂದು ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ: ಹಗರಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ವಿಶ್ವ ಮಣ್ಣು ದಿನಾಚರಣೆ

## ಮಣ್ಣು ರಕ್ಷಣೆಗೆ ಸಾವಯವ ಗೊಬ್ಬರ ಬಳಸಿ: ಡಾ.ರಮೇಶ್ ಬಿ.ಕೆ ಸಲಹೆ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:** ಪ್ರಸ್ತುತದಲ್ಲಿಮಣ್ಣುಮಲಿನವಾಗುತ್ತಿದ್ದು, ಇದರಸಂರಕ್ಷಣೆಗೆಸಾವಯವಗೊಬ್ಬರ ಮತ್ತು ಜೈವಿಕ ಗೊಬ್ಬರಗಳ ಬಳಕೆ ಮಾಡಬೇಕು. ಇದರಿಂದ ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳಬಹುದು ಎಂದು ಹಗರಿ ಐ.ಸಿ.ಎ.ಆರ್–ಕೃಷಿ ವಿಜ್ಞಾನ ಕೇಂದ್ರದ ಪ್ರಾಧ್ಯಾಪಕ ಡಾ.ರಮೇಶ್ ಬಿ.ಕೆ ಅವರು ಹೇಳಿದರು.

ಬಳ್ಳಾರಿ ತಾಲ್ಲೂಕಿನ ಹಗರಿ ಐ.ಸಿ.ಎ.ಆರ್–ಕೃಷಿ ವಿಜ್ಞಾನ ಕೇಂದ್ರದಲ್ಲಿ "ಆರೋಗ್ಯಕರ ನಗರಗಳಿಗೆ ಆರೋಗ್ಯಕರ ಮಣ್ಣು" ಎಂಬ ಧ್ಯೇಯವಾಕ್ಯದಡಿ ಶನಿವಾರ ಆಯೋಜಿಸಿದ್ದ ವಿಶ್ವಮಣ್ಣುದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

2014 ಡಿಸೆಂಬರ್ 5ರಂದು ಮೊದಲ ಬಾರಿಗೆ ವಿಶ್ವ ಮಣ್ಣು ದಿನವನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಆಚರಿಸಲಾಯಿತು. ಪ್ರಪಂಚದಾದ್ಯಂತ ಜನರಿಗೆ ಮಣ್ಣಿನ ಸಂರಕ್ಷಣೆ ಹಾಗೂ ಮಣ್ಣಿನ ಗುಣ–ಧರ್ಮಗಳ ಬಗ್ಗೆ ಜಾಗೃತಿ ಮೂಡಿಸುವುದು ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಪಾಲಯ್ಯ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಪರಿಸರದಲ್ಲಿ ಪ್ರತಿಶತ 60ರಷ್ಟು ಜೀವರಾಶಿಗಳ ಯೋಗಕ್ಷೇಮಕ್ಕೆ ಮಣ್ಣು ಪ್ರಮುಖ ಅಡಿಪಾಯವಾಗಿದೆ. ಮಣ್ಣಿನ ಅಮೂಲ್ಯವಾದ ಗುಣವನ್ನು ಗಮನದಲ್ಲಿಟ್ಟುಕೊಂಡು ಮಣ್ಣು ಹಾಗೂ ಮಣ್ಣಿನ ಆರೋಗ್ಯವನ್ನು ಸಂರಕ್ಷಿಸಲು ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಹೇಳಿದರು.

ಮಣ್ಣು ಒಂದು ಪ್ರಮುಖ ಸಂಪನ್ಮೂಲವಾಗಿದೆ. ಇದು ಆಹಾರ ಉತ್ಪಾದನೆ, ನೀರು ಶುದ್ಧೀಕರಣ ಮತ್ತು ಉಷ್ಣತೆಯನ್ನು ನಿಯಂತ್ರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಆರೋಗ್ಯಕರ ನಗರ ನಿರ್ಮಾಣಕ್ಕೆ ಮಣ್ಣಿನ ಸಂರಕ್ಷಣೆ ಬಹು ಮುಖ್ಯವಾಗಿದ್ದು, ಸುಸ್ಥಿರ ಭವಿಷ್ಯಕ್ಕಾಗಿ ಮಣ್ಣಿನ ಸಂರಕ್ಷಣೆ ಅಷ್ಟೇ ಮುಖ್ಯವಾಗಿದೆ ಎಂದರು.

ಕೃಷಿ ವಿಜ್ಞಾನ ಕೇಂದ್ರದ ಹಿರಿಯ ಮಣ್ಣು ವಿಜ್ಞಾನಿ ಡಾ.ರವಿ ಎಸ್ ಅವರು ಮಾತನಾಡಿ, ಆಹಾರ ಉತ್ಪಾದನೆ, ಉತ್ಪಾದಕತೆಗೆ ಮತ್ತು ಸುಸ್ಥಿರಭವಿಷ್ಯವನ್ನು ಕಾಪಾಡಿಕೊಳ್ಳಲು ಮಣ್ಣು ಮತ್ತು ಮಣ್ಣಿನ ಆರೋಗ್ಯ ಸುರಕ್ಷ ಮಾಡುವುದು ಅಗತ್ಯವಾಗಿದೆ ಎಂದು ಮಣ್ಣಿನ ಸಂರಕ್ಷಣೆಯ ಕುರಿತು ವಿವರವಾಗಿ ತಿಳಿಸಿದರು.

ಕೃಷಿಸಂಶೋಧನಾಕೇಂದ್ರದಮುಖ್ಯಸ್ಥ ಡಾ.ಗಿರೀಶ್ ಅವರು ಮಾತನಾಡಿ, ಮಿತಿ ಮೀರಿದ ರಾಸಾಯನಿಕಗಳ ಬಳಕೆಯಿಂದ ಮಣ್ಣಿನ ಫಲವತ್ತತೆ ಕುಂದುತ್ತಿದೆ. ರೈತರು ಸಾವಯವ ಕೃಷಿಯ ಕಡೆ ಒತ್ತು ನೀಡಿ ಮಣ್ಣಿನ ಆರೋಗ್ಯ ಕಾಪಾಡಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಹಗರಿ ಕೃಷಿ ಮಹಾವಿದ್ಯಾಲಯದ ಬೋಧಕ ಸಿಬ್ಬಂದಿಗಳಾದ ಡಾ.ಗೋವಿಂದಪ್ಪ ಎಂ.ಆರ್., ಡಾ.ಮಂಜುನಾಥ್, ಎನ್. ಡಾ.ಬಸವರಾಜ್, ಡಾ.ನಾಗೇಶ್ ಬಸಪ್ಪ, ಡಾ.ಆನಂದ್ ಹಾಗೂ ಡಾ.ಜಾನವಿ ಸೇರಿದಂತೆ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿನಿಯರು, ಇತರರು ಉಪಸ್ಥಿತರಿದ್ದರು.

ಕೃಷಿ ವಿಜ್ಞಾನ ಕೇಂದ್ರದ ಗೃಹ ವಿಜ್ಞಾನಿ ಡಾ.ರಾಜೇಶ್ವರಿ ಮತ್ತು ಕೃಷಿ ವಿಸ್ತರಣಾ ವಿಜ್ಞಾನಿ ಡಾ.ನವೀನ್ ಕುಮಾರ್.ಪಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಪಿ.ಸಿ & ಪಿ.ಎನ್.ಡಿ.ಟಿ ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಪಿ.ಸಿ ಮತ್ತು ಪಿ.ಎನ್.ಡಿ.ಟಿ ಕಾಯ್ದೆಯಡಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಫಾರಂ–ಎಫ್ ಸೇರಿದಂತೆ ಅಗತ್ಯ ದಾಖಲಾತಿಗಳ ನಿರ್ವಹಣೆ ಕಡ್ಡಾಯ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಟಿ.ಲಿಂಗರಾಜು ಹೇಳಿದರು.

ಅವರು ಶುಕ್ರವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯಲ್ಲಿ ಆಯೋಜಿಸಿದ್ದ ಪಿ.ಸಿ ಮತ್ತು ಪಿ.ಎನ್.ಡಿ.ಟಿ ಕಾಯ್ದೆ ಮತ್ತು ಎಂ.ಟಿ.ಪಿ ಕಾಯ್ದೆಯ ಅಡಿ ಬರುವ ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆಯಲ್ಲಿ ಅವರು ಮಾತನಾಡಿದರು.

ಎಲ್ಲಾ ಸ್ಕ್ಯಾನಿಂಗ್ ಸೆಂಟರ್‌ಗಳು ಪಿ.ಸಿ & ಪಿ.ಎನ್.ಡಿ.ಟಿ ಕಾಯ್ದೆಯಡಿ ನಿಯಮಾನುಸಾರ ನೋಂದಣಿ ಮಾಡಿಕೊಳ್ಳಬೇಕು ಹಾಗೂ ನೋಂದಣಿ ಅವಧಿ ಪೂರ್ಣಗೊಳ್ಳುವುದಕ್ಕಿಂತ ಮೂರು ತಿಂಗಳ ಮುಂಚೆ ಅರ್ಜಿ ಸಲ್ಲಿಸಿ ನವೀಕರಣ ಮಾಡಿಕೊಳ್ಳಬೇಕು. ಸ್ಕ್ಯಾನಿಂಗ್ ಕುರಿತಾದ ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಸಿ ನಿಗದಿತ ನಮೂನೆಗಳನ್ನು ನಿರ್ವಹಿಸಬೇಕು. ನೋಂದಣಿ, ಪರವಾನಗಿ ನವೀಕರಣವಿಲ್ಲದ ಆರೋಗ್ಯ ಸಂಸ್ಥೆಗಳ ಮೇಲೆ ಹಾಗೂ ನಿಗದಿತ ನಿಯಮ ಪಾಲನೆ ಮತ್ತು ದಾಖಲಾತಿಗಳನ್ನು ನಿರ್ವಹಿಸದ ಆರೋಗ್ಯ ಸಂಸ್ಥೆಗಳನ್ನು ಮುಚ್ಚಿಸಲು ಅಥವಾ ಸ್ಥಗಿತಗೊಳಿಸಲು ಕಾಯ್ದೆಯಡಿ ಅವಕಾಶವಿರುತ್ತದೆ. ಪಿ.ಸಿ & ಪಿ.ಎನ್.ಡಿ.ಟಿ ಕಾಯ್ದೆಯನ್ನು ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನಮಾಡಲಾಗುತ್ತಿದ್ದು, ಎಲ್ಲಾ ಸ್ಕ್ಯಾನಿಂಗ್ ಸೆಂಟರ್‌ಗಳು ಕಾಯ್ದೆ ಪಾಲನೆ ಜೊತೆಗೆ ನಿಯಮಾನುಸಾರ ನೋಂದಣಿ, ನವೀಕರಣಕ್ಕೆ ಕ್ರಮ ಕೈಗೊಳ್ಳಬೇಕು ಎಂದರು.

ಪಿ.ಸಿ & ಪಿ.ಎನ್.ಡಿ.ಟಿ ಕಾಯ್ದೆ–1994 ರಡಿಯಲ್ಲಿ ಭ್ರೂಣ ಲಿಂಗ ಪತ್ತೆ ಮತ್ತು ಭ್ರೂಣಲಿಂಗ ಆಯ್ಕೆಗೆ ಯಾವುದೇ ರೀತಿಯ ಅವಕಾಶವಿಲ್ಲ. ಆದಾಗ್ಯೂ ಇಂತಹ ಕಾನೂನು ಬಾಹಿರ ಕ್ರಮಗಳಲ್ಲಿ ಭಾಗಿಯಾದಲ್ಲಿ ಅಂತವರ ವಿರುದ್ಧ ಕಠಿಣವಾದ ಕಾನೂನು ಕ್ರಮ ಕೈಗೊಳ್ಳಲಾಗುವುದು. ಈ ಕಾಯ್ದೆಯಡಿ ಎಲ್ಲಾ ಸ್ಕ್ಯಾನಿಂಗ್ ಸೆಂಟರ್‌ಗಳು ಕಾರ್ಯನಿರ್ವಹಿಸಬೇಕು. ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ಕುರಿತಂತೆ ಯಾವುದೇ ರೀತಿಯ ಜಾಹೀರಾತು ನೀಡುವಂತಿಲ್ಲ. ಜಿಲ್ಲೆಯ ಸ್ಕ್ಯಾನಿಂಗ್ ಸೆಂಟರ್‌ಗಳ ತಪಾಸಣಾ ಮತ್ತು ಮೇಲ್ವಿಚಾರಣೆಗಾಗಿ ಜಿಲ್ಲಾ ಮಟ್ಟದ ಸಲಹಾ ಸಮಿತಿ ಹಾಗೂ ತಪಾಸಣಾ ಸಮಿತಿಯನ್ನು ಈ ಕಾಯ್ದೆಯಡಿ ರಚಿಸಲಾಗಿದೆ. ತಪಾಸಣಾ ಸಮಿತಿಯು ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಭೇಟಿ ನೀಡಿ, ಪರಿಶೀಲಿಸಿ, ಸಲಹಾ ಸಮಿತಿ ಸಭೆಯಲ್ಲಿ ವರದಿ ನೀಡುತ್ತದೆ ಎಂದು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಅನುಷ್ಠಾನಾಧಿಕಾರಿ ಡಾ.ರವೀಂದ್ರನಾಥ್ ಎಂ.ಎಚ್ ಅವರು ಮಾತನಾಡಿ, ಪಿ.ಸಿ & ಪಿ.ಎನ್.ಡಿ.ಟಿ ಕಾಯ್ದೆ ಅನುಸಾರ ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ನಿಷೇಧಿಸಲಾಗಿದ್ದು, ಸರ್ಕಾರಿ ಅಥವಾ ಖಾಸಗಿ ಯಾವುದೇ ವೈದ್ಯರು ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆಯಂತಹ ಕೃತ್ಯಗಳಲ್ಲಿ ಭಾಗಿಯಾದಲ್ಲಿ ಅವರಿಗೆ ಕಾರಾಗೃಹ ಶಿಕ್ಷೆ ಸಹಿತ ದಂಡವನ್ನು ವಿಧಿಸಲಾಗುವುದು. ಮೊದಲ ಅಪರಾಧಕ್ಕೆ 5 ವರ್ಷ ವೈದ್ಯಕೀಯ ಪರವಾನಿಗೆಯನ್ನು ರದ್ದುಪಡಿಸುವುದು. ನಂತರದ ಅಪರಾದಕ್ಕೆ ಸಂಬಂಧಿಸಿದ ವೈದ್ಯರ ವೈದ್ಯಕೀಯ ಪರವಾನಿಗೆಯನ್ನು ರಾಜ್ಯ ವೈದ್ಯಕೀಯ ಮಂಡಳಿಯಿಂದ ಶಾಶ್ವತವಾಗಿ ತೆಗೆದು ಹಾಕಿ, ವೈದ್ಯಕೀಯ ವೃತ್ತಿ ನಡೆಸಲು ಅಜೀವ ನಿಷೇಧ ಹೇರಲಾಗುವುದು. ಒಂದು ವೇಳೆ ಸ್ವತಃ ಮಹಿಳೆ, ಆಕೆಯ ಪತಿ ಅಥವಾ ಸಂಬಂಧಿಕರು ಭ್ರೂಣ ಲಿಂಗ ಪತ್ತೆಗೆ ಯತ್ನಿಸಿ, ವೈದ್ಯರಿಗೆ ಒತ್ತಡ ಹೇರಿದಲ್ಲಿ ಅವರಿಗೆ ಮೂರರಿಂದ ಐದು ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ ರೂ.50 ಸಾವಿರದಿಂದ 1 ಲಕ್ಷದವರೆಗೆ ದಂಡವನ್ನು ವಿಧಿಸಲು ಅವಕಾಶವಿದೆ ಎಂದು ಸಭೆಗೆ ತಿಳಿಸಿದರು.

ಜಿಲ್ಲೆಯ ವಿವಿಧ ಸರ್ಕಾರಿ ಹಾಗೂ ಖಾಸಗಿ ಆರೋಗ್ಯ ಸಂಸ್ಥೆಗಳ ನೋಂದಣಿ, ನವೀಕರಣ ಹಾಗೂ ಹೊಸ ಅರ್ಜಿಗಳಿಗೆ ಅನುಮತಿ ಕುರಿತಂತೆ ಚರ್ಚಿಸಲಾಯಿತು.

ಸಭೆಯಲ್ಲಿ ಸಿಎಸಿ ನೋಡಲ್ ಅಧಿಕಾರಿಗಳು ಹಾಗೂ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಪ್ರಕಾಶ ಮುನಿರಾಬಾದ್ ಸಮುದಾಯ ಆರೋಗ್ಯ ಕೇಂದ್ರದ ಪ್ರಸೂತಿ ತಜ್ಞರು ಹಾಗೂ ಪಿ.ಸಿ & ಪಿ.ಎನ್.ಡಿ.ಟಿ ಜಿಲ್ಲಾ ಮಟ್ಟದ ಸಲಹಾ ಸಮಿತಿಯ ಅಧ್ಯಕ್ಷರಾದ ಡಾ ಕೆ.ಹೆಚ್.ತೊಗರಿ, ಸಮಿತಿ ಸದಸ್ಯರುಗಳಾದ ಜಿಲ್ಲಾಸ್ಪತ್ರೆಯ ಮಕ್ಕಳ ವಿಭಾಗದ ಮುಖ್ಯಸ್ಥರು ಹಾಗೂ ಮಕ್ಕಳ ತಜ್ಞರಾದ ಡಾ.ಗಿರೀಶ, ಗಂಗಾವತಿ ಉಪವಿಭಾಗ ಆಸ್ಪತ್ರೆಯ ಸ್ತ್ರೀ ರೋಗ ತಜ್ಞರಾದ ಡಾ. ಸ್ಮಿತಾ ಜಿ. ಐಲಿ, ಎನ್.ಜಿ.ಓ.ಗಳ ಪ್ರತಿನಿಧಿಗಳಾದ ಡಾ ವಿಶ್ವನಾಥ ಬಸವರಾಜ ನಲ್ವಾಡ, ರೇಷ್ಮಾ ಸೇರಿದಂತೆ ಇತರ ಸದಸ್ಯರು ಮತ್ತು ಆರೋಗ್ಯ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.

# ಪ್ರಧಾನ ಮಂತ್ರಿ ಉಜ್ವಲ ಯೋಜನೆ: ಹೊಸ ಗ್ಯಾಸ್ ಸಂಪರ್ಕ ಮಂಜೂರಾತಿಗೆ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆಕೊಪ್ಪಳ :** ಕೇಂದ್ರ ಸರ್ಕಾರ ಪೆಟ್ರೋಲಿಯಂ, ನೈಸರ್ಗಿಕ ಅನಿಲ ಇಲಾಖೆಯ ಪ್ರಧಾನ ಮಂತ್ರಿ ಉಜ್ವಲ ಯೋಜನೆ (ಪಿಎಂಯುವೈ) ಅಡಿಯಲ್ಲಿ ಕೊಪ್ಪಳ ಜಿಲ್ಲೆಯ 14 ಗ್ಯಾಸ್ ಏಜೆನ್ಸಿಗಳಿಂದ ಉಜ್ವಲ–3 ಅಡಿಯಲ್ಲಿ ಹೊಸ ಗ್ಯಾಸ್ ಸಂಪರ್ಕ ಮಂಜೂರಾತಿಗಾಗಿ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಹ ಫಲಾನುಭವಿಗಳು ಏಜೆನ್ಸಿಗಳಿಗೆ ನೇರವಾಗಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿ ಇದರ ಪ್ರಯೋಜನ



ಪಡೆಯಬಹುದಾಗಿದೆ.

ಅರ್ಹತೆಗಳು: ಈಗಾಗಲೇ ಗ್ಯಾಸ್ ಕನೆಕ್ಷನ್ ಹೊಂದಿರದ ವಯಸ್ಕ ಮಹಿಳೆಯರು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಕುಟುಂಬದ ಯಾವುದೇ ಸದಸ್ಯರು ಪ್ರತಿ ತಿಂಗಳಿಗೆ 10,000 ಆದಾಯ ಹೊಂದಿರಬಾರದು. ಕೃಷಿಯೇತರ ಚಟುವಟಿಕೆ ನಡೆಸಲು ವ್ಯಾಪಾರ ಅಥವಾ ವ್ಯವಹಾರ ಮಾಡುವ ಎಂಟರ್‌ಪ್ರೈಸಸ್, ಸರ್ಕಾರದಲ್ಲಿ ನೋಂದಣಿಯಾಗಿರಬಾರದು. 2.5 ಎಕರೆ ನೀರಾವರಿ ಹಾಗೂ 7.5 ಎಕರೆ 1 ಬೆಳೆ ಬೆಳೆಯುವ ಭೂಮಿ ಹೊಂದಿರಬಾರದು. ಮನೆಯ ಸದಸ್ಯರು 3 ಮತ್ತು 4 ಚಕ್ರದ ಕೃಷಿ ವಾಹನ, ಟ್ರಾಕ್ಟರ್, 3 ಅಥವಾ 4 ಚಕ್ರದ ಮೀನುಗಾರಿಕೆ ದೋಣಿ ಹೊಂದಿರಬಾರದು. 5 ಎಕರೆ ಅದಕ್ಕಿಂತ ಹೆಚ್ಚು 2 ಬೆಳೆ ಬೆಳೆಯುವ ಕೃಷಿ ಜಮೀನು ಹೊಂದಿರಬಾರದು. "ಕಿಸಾನ್ ಕ್ರೆಡಿಟ್ ಕಾರ್ಡ್" ನಲ್ಲಿ 50,000 ಕ್ಕಿಂತ ಹೆಚ್ಚು ಸಾಲ ಹೊಂದಿರಬಾರದು. 30 ಚದರ ಅಡಿ ಸ್ಥಳದ ಮನೆ ಹೊಂದಿರಬಾರದು (ಸರ್ಕಾರದ ಯಾವುದೇ ಯೋಜನೆಯಲ್ಲಿ ಸೈಟ್ ಪಡೆದಿರಬಾರದು). ಸರ್ಕಾರಿ ನೌಕರ ಸದಸ್ಯರನ್ನು ಹೊಂದಿದ್ದಲ್ಲಿ ಆ ಕುಟುಂಬ ಅರ್ಹರಲ್ಲ. ಕುಟುಂಬದಲ್ಲಿ ಈಗಾಗಲೇ ಗ್ಯಾಸ್ ಸಂಪರ್ಕ ಹೊಂದಿರುವವರು ಸಹ ಅರ್ಹರಲ್ಲ.

ಕೆ.ವೈ.ಸಿ ಅರ್ಜಿ, ಗುರುತಿನ ಚೀಟಿ, ರೇಷನ್ ಕಾರ್ಡ್, ಆಧಾರ ಕಾರ್ಡ್, ಬ್ಯಾಂಕ್ ಖಾತೆ ಮತ್ತು ಘೋಷಣಾ ಪ್ರಮಾಣ ಪತ್ರ, ಈ ಎಲ್ಲಾ ದಾಖಲಾತಿಗಳೊಂದಿಗೆ ಜಿಲ್ಲೆಯಲ್ಲಿ ಹೊಸ ಗ್ಯಾಸ್ ಸಂಪರ್ಕಕ್ಕಾಗಿ ಅರ್ಹ ಮಹಿಳಾ ಫಲಾನುಭವಿಗಳು ಸಕಾಲದಲ್ಲಿ ಅರ್ಜಿ ಸಲ್ಲಿಸಿ ಈ ಯೋಜನೆಯ ಲಾಭ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿಗಳು ಹಾಗೂ ಕೊಪ್ಪಳ ಜಿಲ್ಲಾ ಉಜ್ವಲ್ ಸಮಿತಿ (ಡಿವಿಸಿ) ಅಧ್ಯಕ್ಷರಾದ ಡಾ. ಸುರೇಶ ಬಿ. ಇಟ್ನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಂಪ್ಲಿ: ಡಿ.10 ರಂದು ವಿದ್ಯುತ್ ವ್ಯತ್ಯಯ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಕಂಪ್ಲಿ ಜೆಸ್ಕಾಂ ವ್ಯಾಪ್ತಿಯ ಮೆಟ್ರಿ 110/11ಕೆವಿ ವಿದ್ಯುತ್ ಉಪ ಕೇಂದ್ರದಲ್ಲಿ ವಿದ್ಯುತ್ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುದರಿಂದ ಡಿ.10 ಬೆಳಿಗ್ಗೆ 09 ರಿಂದ ಮಧ್ಯಾಹ್ನ 03 ಗಂಟೆಯವರೆಗೆ ಮೆಟ್ರಿ ಉಪಕೇಂದ್ರದ ವ್ಯಾಪ್ತಿಗೆ ಬರುವ ಗ್ರಾಮಗಳ ನಿರಂತರ ಜ್ಯೋತಿ ಮಾರ್ಗಗಳಾದ ಎಫ್2–ಗೋನಾಳ್ ಮತ್ತು ಎಫ್4–ಮೆಟ್ರಿ ಮಾರ್ಗಗಳಲ್ಲಿ ಮತ್ತು ಪಂಪ್ ಸೆಟ್ ವಿದ್ಯುತ್ ಮಾರ್ಗಗಳಾದ ಎಫ್1–ಮಾವಿನಹಳ್ಳಿ, ಎಫ್3–ಜವುಕು, ಎಫ್5–ದೇವಲಾಪುರ ಮತ್ತು ಎಫ್6–ಉಪ್ಪಾರಹಳ್ಳಿ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಮೆಟ್ರಿಗೆ ಸಂಬಂಧಿಸಿದ ಪಂಪ್ ಸೆಟ್(ಐಪಿ ಸೆಟ್) ಮೇಲೆ ತಿಳಿಸಿದ ಮಾರ್ಗಗಳಲ್ಲಿ ಅಂದು ಬೆಳಿಗ್ಗೆ 04 ರಿಂದ 09 ಗಂಟೆಯವರೆಗೆ (5 ಗಂಟೆ) ಉಳಿದ 2 ತಾಸುಗಳು 3 ಗಂಟೆಯ ನಂತರ ವಿದ್ಯುತ್ ಸರಬರಾಜು ಮಾಡಲಾಗುವುದು.

ಹಾಗಾಗಿ ವಿದ್ಯುತ್ ಗ್ರಾಹಕರು, ಸಾರ್ವಜನಿಕರು ಸಹಕರಿಸಬೇಕು ಹಾಗು ವಿದ್ಯುತ್ ವ್ಯತ್ಯಯ ದಿನದಂದು ಸಾರ್ವಜನಿಕರು ಯಾವುದೇ ತರಹದ ವಿದ್ಯುತ್ ದುರಸ್ಥಿ ಕಾರ್ಯ ಪೂರ್ವಾನುಮತಿ ಇಲ್ಲದೇ ಮಾಡಬಾರದು. ಒಂದು ವೇಳೆ ವಿದ್ಯುತ್ ಅಪಘಾತ ಸಂಭವಿಸಿದ್ದಲ್ಲಿ ಜೆಸ್ಕಾಂ ಕಂಪನಿ ಜವಾಬ್ದಾರಿಯಾಗಿರುವುದಿಲ್ಲ ಎಂದು ಕಂಪ್ಲಿ ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

# ಡಿ.10 ರಂದು ವಿದ್ಯುತ್ ವ್ಯತ್ಯಯ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:** ಬಳ್ಳಾರಿ ಗ್ರಾಮೀಣ ಜೆಸ್ಕಾಂ ವ್ಯಾಪ್ತಿಯ 110/11ಕೆ.ವಿ ದಕ್ಷಿಣ ಉಪ–ಕೇಂದ್ರದ ವಿದ್ಯುತ್ ವಿತರಣಾ ಕೇಂದ್ರದ ಎಫ್–43 11ಕೆ.ವಿ ಮಾರ್ಗದ ಸ್ಥಳಾಂತರಿಸುವ ಕಾಮಗಾರಿ ತುರ್ತಾಗಿ ಕೈಗೊಂಡಿರುವುದರಿಂದ ಡಿ.10 ರಂದು ಬೆಳಿಗ್ಗೆ 09 ರಿಂದ ಸಂಜೆ 05 ಗಂಟೆಯವರೆಗೆ ಎಫ್43 – ಸಿದ್ದಾಪುರ ರಸ್ತೆ ಕೈಗಾರಿಕಾ ಮಾರ್ಗದ ಟಪಾಲ್ ಸ್ಟೀಲ್, ಸಿದ್ದಾಪುರ ರಸ್ತೆ, ಕೈಗಾರಿಕಾ ಪ್ರದೇಶಗಳ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು, ಸಾರ್ವಜನಿಕರು ಸಹಕರಿಸಬೇಕು ಎಂದು ಬಳ್ಳಾರಿ ಗ್ರಾಮೀಣ ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸುದ್ದಿ ಮನೆಗೆ ಘನತೆ ತಂದ ಟಿಜೆಎಸ್ ಜಾರ್ಜ್, ಅ.ಚ.ಶಿವಣ್ಣ

## ಕೆಯುಡಬ್ಲ್ಯೂಜೆ ಶ್ರದ್ಧಾಂಜಲಿ ಸಭೆಯಲ್ಲಿ ರವಿ ಹೆಗಡೆ ಗುಣಗಾನ



**ಮಲ್ಲಮ್ಮ ನುಡಿ ಬೆಂಗಳೂರು:**

ಹಿರಿಯ ಪತ್ರಕರ್ತರಾದ ಟಿ.ಜೆ.ಎಸ್. ಜಾರ್ಜ್ ಅವರು ಸುದ್ದಿ ಮನೆಗೆ ಘನತೆ ತಂದರೆ,

ಸಂಜೆವಾಣಿ ಅ.ಚ.ಶಿವಣ್ಣ ಅವರು ಸ್ಕೂಪ್ ಮತ್ತು ಬ್ರೇಕಿಂಗ್ ನ್ಯೂಸ್‌ಗಳಿಗೆ ಹೊಸ ಮೆರಗು ಕೊಟ್ಟರು ಎಂದು ಕೆಯುಡಬ್ಲ್ಯೂಜೆ ಶ್ಲಾಘಿಸಿದೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ)ವತಿಯಿಂದ ಅಗಲಿದ ಹಿರಿಯ ಪತ್ರಕರ್ತರಾದ ಟಿಜೆಎಸ್ ಜಾರ್ಜ್, ಅ.ಚ.ಶಿವಣ್ಣ ಅವರಿಗೆ ಏರ್ಪಡಿಸಿದ್ದ ನುಡಿನಮನ ಕಾರ್ಯಕ್ರಮದಲ್ಲಿ ಮಾತನಾಡಿದ ಹಿರಿಯರು ಈ ಅಭಿಪ್ರಾಯ ವ್ಯಕ್ತಪಡಿಸಿದರು.

ಆರಂಭದಲ್ಲಿ ಇಬ್ಬರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿ, ಒಂದು ನಿಮಿಶ ಮೌನ ಪ್ರಾರ್ಥನೆಯನ್ನು ಸಲ್ಲಿಸಲಾಯಿತು.

ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದ ಕನ್ನಡ ಪ್ರಭ ಹಾಗೂ ಸುವರ್ಣ ನ್ಯೂಸ್ ಪ್ರಧಾನ ಸಂಪಾದಕ ರವಿ ಹೆಗಡೆ, ಹಿರಿಯ ಪತ್ರಕರ್ತರಾದ ಟಿಜೆಎಸ್ ಜಾರ್ಜ್, ಅ.ಚ.ಶಿವಣ್ಣ ಅವರಲ್ಲಿದ್ದ ಸಮಗ್ರ ಒಳನೋಟ ಮತ್ತು ದೂರದೃಷ್ಟಿಯಿಂದಾಗಿ ಸುದ್ದಿಮನೆಗೆ ಆ ಕಾಲಘಟ್ಟದಲ್ಲಿ ತನ್ನದೇ ಆದ ಮಹತ್ವ ತುಂಬಿತ್ತು ಎಂದು ಹೇಳಿದರು.

ಇಂದು ನಾವು ಕಾಣುತ್ತಿರುವ ಪತ್ರಿಕೋದ್ಯಮದಲ್ಲಿ ಒಂದಷ್ಟು ವೃತ್ತಿ ಬದ್ಧತೆಯ ಬೆಳವಣಿಗೆಗೆ ಅಂದು ಅವರಲ್ಲಿದ್ದ ಕೆಲ ಮೌಲ್ಯಗಳು ಪೂರಕವಾಗಿದ್ದವು ಎಂದು ಅಭಿಪ್ರಾಯಪಟ್ಟರು. ಕಳೆದ ಇಪ್ಪತ್ತೈದು ವರ್ಷಗಳಿಂದ ಪತ್ರಿಕೋದ್ಯಮವು ತಂತ್ರಜ್ಞಾನದ ಬದಲಾವಣೆಗೆ ತಕ್ಕಂತೆ ಬದಲಾಗುತ್ತಾ ಹೋಗುತ್ತಿದೆ. ಟಿ.ಜೆ.ಎಸ್ ಮತ್ತು ಶಿವಣ್ಣರವರು ತಮ್ಮ ವೃತ್ತಿಜೀವನದಲ್ಲಿ ಮಾಧ್ಯಮದಲ್ಲಿ ಆದ ಬದಲಾವಣೆಯನ್ನು ವೃತ್ತಿಯಲ್ಲಿ ಅಳವಡಿಸಿಕೊಂಡು ಉಳಿದ ಪತ್ರಕರ್ತರಿಗೆ ಮಾದರಿಯಾದರು ಎಂದು ಹೇಳಿದರು. ಸಂಯುಕ್ತ ಕರ್ನಾಟಕ ಪತ್ರಿಕೆಯ ಹುಣಸವಾಡಿ ರಾಜನ್ ಮಾತನಾಡಿ, ಟಿಜೆಎಸ್ ಜಾರ್ಜ್ ಮತ್ತು ಅ.ಚ.ಶಿವಣ್ಣ ಇಬ್ಬರೂ ವೃತ್ತಿ ಬದ್ಧತೆಯನ್ನು ಮೆರೆದವರು. ಇಂದಿನ ಯುವ ಪತ್ರಕರ್ತರಿಗೆ ಮಾದರಿಯಾದವರು ಎಂದು ಹೇಳಿದರು. ಸಮಾರಂಭದ ಅಧ್ಯಕ್ಷತೆ ವಹಿಸಿ ಪ್ರಾಸ್ತಾವಿಕ ಮಾತುಗಳನ್ನಾಡಿದ ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಸಂಘವು ಮನೆಯಂಗಳದಲ್ಲಿ ಮನದುಂಬಿ ನಮನ ಕಾರ್ಯಕ್ರಮದಲ್ಲಿ ಟಿಜೆಎಸ್ ಜಾಜರ್ ಹಾಗೂ ಅ.ಚ ಶಿವಣ್ಣ ಅವರನ್ನು ಅವರ ಮನೆಯಂಗಳದಲ್ಲಿ ಸನ್ಮಾನಿಸಿದ್ದು ಹೆಮ್ಮೆಯ ಸಂಗತಿಯಾಗಿತ್ತು. ನಮ್ಮನ್ನಗಲಿದ ಈ ಇಬ್ಬರೂ ಪತ್ರಕರ್ತರ ಬದ್ಧತೆ ಮತ್ತು ಸಾಮರ್ಥ್ಯ ನಿಜಕ್ಕೂ ಇಂದಿನ ಪತ್ರಕರ್ತರಿಗೆ ಮಾದರಿ ಎಂದರು.

ಐಬ್ಲ್ಯೂಜೆ ಅಧ್ಯಕ್ಷ ಬಿ.ವಿ. ಮಲ್ಲಿಕಾರ್ಜುನಯ್ಯ ಮಾತನಾಡಿ, ಜಾಜರ್ ಹಾಗೂ ಶಿವಣ್ಣ ವಿಶಿಷ್ಟ ದೃಷ್ಟಿಕೋನ ಹೊಂದಿದ್ದ ಪತ್ರಕರ್ತರಾಗಿದ್ದರು. ಅವರಿಬ್ಬರ ಪತ್ರಿಕೋದ್ಯಮ ಸೇವೆ ಎಂದೆಂದಿಗೂ ಪತ್ರಿಕೋದ್ಯಮದಲ್ಲಿ ನೆನಪಿನಲ್ಲಿ ಇಡುವಂತಾದ್ದಾಗಿದೆ ಎಂದರು. ಹಿರಿಯ ಪತ್ರಕರ್ತರಾದ ಡಿ.ಮಹಾದೇವಪ್ಪ ಅವರು ಮಾತನಾಡಿ, ಜಾರ್ಜ್ ಅವರೊಬ್ಬ ಸಂತನಂತೆ ಸುದ್ದಿಮನೆಯಲ್ಲಿ ಗಮನ ಸೆಳೆದರು.

ಅ.ಚ.ಶಿವಣ್ಣ ಅವರು ಸುದ್ದಿ ಗ್ರಹಿಸಿ ಬರೆಯುವುದರಲ್ಲಿ ಪ್ರಾವಿಣ್ಯತೆ ಹೊಂದಿದ್ದರು ಎಂದು ಇಬ್ಬರು ಪತ್ರಕರ್ತರ ಗುಣಗಾನ ಮಾಡಿದರು. ಅ.ಚ.ಶಿವಣ್ಣ ಅವರ ಪುತ್ರ ಡಾ.ದೀಪಕ್ ಶಿವಣ್ಣ ಮಾತನಾಡಿ, ಅಪ್ಪನ ಬಗ್ಗೆ ಈಗಲೂ ಸುದ್ದಿಮನೆಯಲ್ಲಿ ಇಷ್ಟೊಂದು ಗೌರವ ಇಟ್ಟುಕೊಂಡಿರುವುದು ನಮ್ಮ ಕುಟುಂಬಕ್ಕೆ ಹೆಮ್ಮೆಯ ಸಂಗತಿ ಎಂದರು. ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಬೆಂಗಳೂರು ನಗರ ಜಿಲ್ಲಾ ಘಟದ ಸದಸ್ಯರು, ಗ್ರಾಮಾಂತರ ಘಟಕದ ಪದಾಧಿಕಾರಿಗಳು ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಕಾರ್ಯಕ್ರಮದ ಕೊನೆಯಲ್ಲಿ ಎಸ್.ಸೋಮಶೇಖರ ಗಾಂಧಿ ವಂದಿಸಿದರು.

# ಬಳ್ಳಾರಿ: ಡಿ.13 ರಂದು ಬಳ್ಳಾರಿ ವಿಭಾಗೀಯ ಕಚೇರಿಯ ಉದ್ಘಾಟನಾ ಸಮಾರಂಭ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**

ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ನೂತನ ಕಾನೂನು ಅಧಿಕಾರಿ (ಹಿರಿಯ) ಯವರ ಬಳ್ಳಾರಿ ವಿಭಾಗೀಯ ಕಚೇರಿಯ ಉದ್ಘಾಟನಾ ಸಮಾರಂಭ ಕಾರ್ಯಕ್ರಮವನ್ನು ಡಿ.13 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಹಳೆಯ ನ್ಯಾಯಾಲಯ ಆವರಣದ ಅಭಿಯೋಜಕ ಭವನದಲ್ಲಿ ಏರ್ಪಡಿಸಲಾಗಿದೆ.

ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರು ನೂತನ ಕಚೇರಿಯ ಉದ್ಘಾಟನೆ ನೆರವೇರಿಸುವರು. ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಹಾಗೂ ಪ್ರವಾಸೋದ್ಯಮ ಸಚಿವ ಡಾ.ಎಚ್.ಕೆ ಪಾಟೀಲ್ ಅವರು 'ನೊಂದವರಿಗೆ ನ್ಯಾಯ' ಜಾಗೃತಿ ಅಭಿಯಾನ ಉದ್ಘಾಟಿಸುವರು.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜಡ್ ಜಮೀರ್ ಅಹ್ಮದ್ ಖಾನ್ ಅವರು 'ನ್ಯಾಯ ಜ್ಯೋತಿ' ಸ್ಮರಣ ಸಂಚಿಕೆ ಬಿಡುಗಡೆ ಮಾಡುವರು. ಮಾಜಿ ಸಚಿವರು ಹಾಗೂ ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ವಿಭಾಗೀಯ ಕಚೇರಿಯ ವೆಬ್ ಸೈಟ್ ಗೆ ಚಾಲನೆ ನೀಡಿವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಸಂಸದರಾದ ಈ.ತುಕಾರಾಮ್, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಜೆ.ಎನ್. ಗಣೇಶ್, ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಬಳ್ಳಾರಿ ಮಹಾನಗರ ಪಾಲಿಕೆ ಮೇಯರ್ ಪಿ.ಗಾದೆಪ್ಪ, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯುಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಒಳಾಡಳಿತ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಬಳ್ಳಾರಿ ವಲಯ ಪೊಲೀಸ್ ಉಪ ಮಹಾನಿರೀಕ್ಷಕರಾದ ವರ್ತಿಕಾ ಕಟಿಯಾರ್, ಬಳ್ಳಾರಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್, ಕೊಪ್ಪಳ ಜಿಲ್ಲಾಧಿಕಾರಿ ಡಾ.ಬಿ.ಸುರೇಶ್ ಹಿಟ್ನಾಳ, ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ, ರಾಯಚೂರು ಜಿಲ್ಲಾಧಿಕಾರಿ ನಿತೀಶ್ ಕೆ., ಬಳ್ಳಾರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಕೊಪ್ಪಳ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ ಅರಸಿದ್ಧಿ, ವಿಜಯನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾಹ್ನವಿ., ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟ ಮಾದಯ್ಯ, ಬಳ್ಳಾರಿ ವಿಭಾಗ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ಹೇಮರಾಜ ಕೆ., ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಬೆಂಗಳೂರಿನ ನಿರ್ದೇಶಕರಾದ ಅಂಜಲಿದೇವಿ, ಬಳ್ಳಾರಿ ವಿಭಾಗೀಯ ಕಚೇರಿಯ ಕಾನೂನು ಅಧಿಕಾರಿ(ಹಿರಿಯ) ಬಿ.ಎಸ್.ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಕುಡತಿನಿ: ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:** ಕುಡತಿನಿ ಪಟ್ಟಣ ಪಂಚಾಯಿತಿ ವತಿಯಿಂದ 2025–26ನೇ ಸಾಲಿನ ಎಸ್‌ಎಫ್‌ಸಿ ಅನುದಾನದ ಟಿಎಸ್‌ಪಿ ಯೋಜನೆಯಡಿ ಹಾಗೂ 2019–20 ರಿಂದ 2024–25ನೇ ಸಾಲಿನ ಎಸ್‌ಎಫ್‌ಸಿ ಅನುದಾನದ ಎಸ್‌ಸಿಎಸ್‌ಪಿ–ಟಿಎಸ್‌ಪಿ ಹಾಗೂ ಶೇ.7.25ರ ಯೋಜನೆಗಳಡಿ ವೈಯಕ್ತಿಕ ಕಾರ್ಯಕ್ರಮಗಳ ಅನುಷ್ಠಾನದ ವಿವಿಧ ಸೌಲಭ್ಯಗಳಡಿ ಸಹಾಯಧನ ಪಡೆಯಲು ಕುಡತಿನಿ ಪಟ್ಟಣದ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

*ಸೌಲಭ್ಯಗಳು:*

ಕುಡತಿನಿ ಪಟ್ಟಣದ ಪರಿಶಿಷ್ಟ ಪಂಗಡದ ವರ್ಗದವರಿಗೆ ನಳ ಸಂಪರ್ಕ ಶುಲ್ಕ ವೆಚ್ಚ ಭರಿಸಲು ಸಹಾಯಧನ, ಪರಿಶಿಷ್ಟ ಜಾತಿ ವರ್ಗದ ಮೆಡಿಕಲ್, ಇಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಖರೀದಿಗಾಗಿ ಸಹಾಯಧನ, ಪರಿಶಿಷ್ಟ ವರ್ಗದ ಮೆಡಿಕಲ್, ಇಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಖರೀದಿಗಾಗಿ ಸಹಾಯಧನ ಮತ್ತು ಇತರೆ ಹಿಂದುಳಿದ ವರ್ಗದ ಮೆಡಿಕಲ್, ಇಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಖರೀದಿಗಾಗಿ ಸಹಾಯಧನ ನೀಡಲಾಗುತ್ತದೆ.

ಅರ್ಜಿಗಳನ್ನು ಕುಡತಿನಿ ಪಟ್ಟಣ ಪಂಚಾಯಿತಿ ಕಚೇರಿಯಿಂದ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಡಿ.22 ರ ಸಂಜೆ 4.30 ರೊಳಗಾಗಿ ಇದೇ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕುಡತಿನಿ ಪಟ್ಟಣ ಪಂಚಾಯಿತಿ ಕಾರ್ಯಾಲಯ ಅಥವಾ ದೂ. 08392–248025 ಗೆ ಸಂಪರ್ಕಿಬಹುದು ಎಂದು ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ್ಯಾಯಧೀಕರಣ ತರಬೇತಿಗೆ ಅರ್ಜಿ ಆಹ್ವಾನ

ರಾಯಚೂರು: ಇಲ್ಲಿನ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದಿಂದ 2025–26ನೇ ಸಾಲಿನಲ್ಲಿ ಪರಿಶಿಷ್ಟ ವರ್ಗದ ಕಾನೂನು ಪದವೀಧರರನ್ನು ಆಡಳಿತ ನ್ಯಾಯಧೀಕರಣ ತರಬೇತಿಗೆ ಆಯ್ಕೆ ಮಾಡಲು ಆನ್‌ಲೈನ್ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ಆಸಕ್ತರು, ಇಲಾಖೆಯ ವೆಬ್‌ಸೈಟ್ ವಿಳಾಸ: www.twd.karnataka.gov.in ರಡಿಯ ಸ್ಟಿಪೆಂಡ್ ಟು ಲಾ ಗ್ರಾ ಜ್ಯುಯೇಟ್ಸ್ (ಖಣುರಿಜಟಿಜ ಣಠ ಐಂಘ ಉಡಿಚಿಜಣಚಿಣಜ) ಲಿಂಕ್‌ನಲ್ಲಿ ಡಿಸೆಂಬರ್ 19ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯನ್ನು ಎಲ್ಲಾ ದಾಖಲಾತಿಗಳೊಂದಿಗೆ ಜಿಲ್ಲಾ ಅಥವಾ ತಾಲೂಕಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯಕ್ಕೆ ಕಚೇರಿ ವೇಳೆಯಲ್ಲಿ ಸಲ್ಲಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ರಾಯಚೂರು ಇವರನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ಶಿವಮಾನಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯರಗೇರಾ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ರಾಯಚೂರು: ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ–ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಯರಗೇರಾ ವಿದ್ಯುತ್ ಉಪ–ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಎಫ್–3 ಯರಗೇರಾ ಎನ್‌ಜೆವೈ ಫೀಡರ್‌ನಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಡಿಸೆಂಬರ್ 10ರ ಬೆಳಗ್ಗೆ 10 ಗಂಟೆಯಿಂದ ಸಾಯಂಕಾಲ 05 ಗಂಟೆವರೆಗೆ ಯರಗೇರಾ ಗ್ರಾಮದ ವ್ಯಾಪ್ತಿಯಲ್ಲಿ ವಿದ್ಯುತ್ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕಾರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ–ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲಿ ತಿಳಿಸಿದ್ದಾರೆ.

# ಡಿ.19 ಬೀಳಗಿ ತಾಲೂಕು ಕನ್ನಡ ಜಾನಪದ ಸಮ್ಮೇಳನ ಸರ್ವಾಧ್ಯಕ್ಷರಾಗಿ ಪುಂಡಲೀಕಪ್ಪ ಗಾಣಿಗೇರ ಆಯ್ಕೆ



ಮಲ್ಲಮ್ಮನುಡಿಬಾಗಲಕೋಟೆ: ಜಿಲ್ಲೆಯ ಬೀಳಗಿ ತಾಲೂಕಿನ ಬಾಡಗಿ ಗ್ರಾಮದಲ್ಲಿ ಕನ್ನಡ ಜಾನಪದ ಪರಿಷತ್ ಜಿಲ್ಲಾ ಘಟಕ, ತಾಲೂಕು ಮತ್ತು ವಲಯ ಘಟಕಗಳ ಆಶ್ರಯದಲ್ಲಿ ಡಿಸೆಂಬರ್ 19 ರಂದು ಬಕ್ಕೇಶ್ವರ ಮಠದಲ್ಲಿ ಜರುಗಲಿರುವ ಬೀಳಗಿ ತಾಲೂಕು ಪ್ರಥಮ ಕನ್ನಡ ಜಾನಪದ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಹಿರಿಯ ಜಾನಪದ ಕಲಾವಿದ ಪುಂಡಲೀಕಪ್ಪ ಗುಂಡಪ್ಪ ಗಾಣಿಗೇರ ಆಯ್ಕೆಯಾಗಿದ್ದಾರೆ.

ಭಾವೈಕ್ಯತೆಗೆ ಹೆಸರಾದ ಬಾಡಗಿ ಗ್ರಾಮದ ಗುರು ಹಿರಿಯರೊಂದಿಗೆ ಕನ್ನಡ ಜಾನಪದ ಪರಿಷತ್ತಿನ ಜಿಲ್ಲಾ ಮತ್ತು ತಾಲೂಕು ಘಟಕ, ವಲಯ ಘಟಕಗಳಪದಾಧಿಕಾರಿಗಳುಪುಂಡಲೀಕಪ್ಪ ಗಾಣಿಗೇರ ಅವರ ಮನೆಗೆ ತೆರಳಿ ಸನ್ಮಾನಿಸುವ ಮೂಲಕ ಸಮ್ಮೇಳನಕ್ಕೆ ಅಧಿಕೃತವಾಗಿ ಆಹ್ವಾನ ನೀಡಲಾಯಿತು.

ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಡಿ. ಎಂ. ಸಾವಕಾರ ಮಾತನಾಡಿ,ಬಾಡಗಿಯಲ್ಲಿನಡೆಯಲಿರುವ ಬೀಳಗಿ ತಾಲೂಕು ಪ್ರಥಮ ಕನ್ನಡ ಜಾನಪದ ಸಮ್ಮೇಳನವನ್ನುಪಕ್ಷಾತೀತ, ಜಾತ್ಯತೀತ, ಧರ್ಮಾತೀತವಾಗಿ ಸಂಘಟಿಸಿ, ಯಶಸ್ವಿಗೊಳಿಸಲು ಬಕ್ಕೇಶ್ವರ ಮಠದ ಸದ್ಭಕ್ತರು,ಗ್ರಾಮಸ್ಥರು ಶ್ರಮಿಸುತ್ತಿದ್ದಾರೆಂದು ಹೇಳಿದರು. ನೆಲಮೂಲ ಸಂಸ್ಕೃತಿಯಾಗಿರುವ ಜಾನಪದ ಸಂಸ್ಕೃತಿಯನ್ನು ಉಳಿಸಿ, ಬೆಳೆಸಲು ಕಳೆದ ಐವತ್ತು ವರ್ಷಗಳಿಂದ ಕರ್ನಾಟಕ ಅಷ್ಟೇ ಅಲ್ಲದೇ, ಮಹಾರಾಷ್ಟ್ರ, ಆಂಧ್ರಪ್ರದೇಶ ರಾಜ್ಯದಲ್ಲಿಯೂ ಕಲಾ ಪ್ರದರ್ಶನ ಮಾಡಿರುವ ಪುಂಡಲೀಕಪ್ಪ ಗಾಣಿಗೇರ, ಹಾರ್ಮೋನಿಯಂ, ಬಯಲಾಟ,ಶಿವಭಜನೆಗಾಗಿಶ್ರಮಿಸಿದ್ದಾರೆ. ಅವರ ಸಾಧನೆ ಗಮನಿಸಿ ಅವರನ್ನು ಒಮ್ಮತದಿಂದ ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ ಎಂದು ಹೇಳಿದರು.

ಪುಂಡಲೀಕಪ್ಪಗಾಣಿಗೇರ ಮಾತನಾಡಿ, ಸಮ್ಮೇಳನದ ಸರ್ವಾಧ್ಯಕ್ಷತೆ ನನಗೆ ಒಲಿದು ಬಂದಿರುವುದು ಸಂತಸ ತಂದಿದೆ. ತೆರೆ–ಮರೆಯ ನನ್ನ ಸಾಧನೆಗೆ ಈ ಗೌರವ ಸ್ಥಾನ ನೀಡಿದ್ದಕ್ಕಾಗಿ ಜಾನಪದ ಪರಿಷತ್ತಿನ ಅಧ್ಯಕ್ಷರಿಗೂ, ಸರ್ವ ಬಳಗಕ್ಕೂ ಋಣಿಯಾಗಿರುವೆ ಎಂದು ಹೇಳಿದರು. ಕಜಾಪ ತಾಲೂಕಾಧ್ಯಕ್ಷ ಬಸವರಾಜ ನಾಯ್ಕ, ಕಾರ್ಯದರ್ಶಿ ಎಂ.ಬಿ.ತಾಂಬೋಳಿ,

ಮಹಿಳಾ ಘಟಕದ ಅಧ್ಯಕ್ಷೆ ಎಚ್. ಬಿ. ಮಾಳಗೊಂಡ, ಬಾಡಗಿ ವಲಯ ಘಟಕದ ಅಧ್ಯಕ್ಷ ದಯಾನಂದ ಪೂಜಾರಿ, ಮಂಜುನಾಥ ಬಡಿಗೇರ, ಕಸ್ತೂರಿ ಪತ್ತಾರ, ಗೋದಾವರಿ ಮೂರಜಾವದಮಠ, ರುಕ್ಮೀಣಿ ಹಡಪದ, ಶಿವಪ್ಪ ಗುರಾಣಿ, ರುದ್ರಪ್ಪ ತಂಬಾಕದ, ಲಕ್ಷ್ಮಣ ಕುಸ್ತಿ, ಸುರೇಶ ಜೀರ, ರವೀಂದ್ರ ಜೀರ, ಸುರೇಶ ಮೆಡ್ಲಿ, ಶಶಿಕುಮಾರ ಬಾಡಗಿ ಸೇರಿದಂತೆ ಮತ್ತಿತರಿದ್ದರು.

# ಸಚಿವ ತಿಮ್ಮಾಪೂರ ನೇತೃತ್ವದಲ್ಲಿ ಪೂರ್ವಭಾವಿ ಸಭೆ ಚಾಲುಕ್ಯ ಉತ್ಸವ ಅದ್ದೂರಿ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿಬಾಗಲಕೋಟೆ: ಡಿಸೆಂಬರ 19 ರಿಂದ 21ವರೆಗೆ ಜಿಲ್ಲೆಯ ಐತಿಹಾಸಿಕ ತಾಣಗಳಾದ ಬಾದಾಮಿ, ಪಟ್ಟದಕಲ್ಲು ಹಾಗೂ ಐಹೊಳೆಯಲ್ಲಿ ತಲಾ ಒಂದು ದಿನ ನಡೆಯಲಿರುವ ಚಾಲುಕ್ಯ ಉತ್ಸವ–2025ನ್ನುಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ಜಿ ಲ್ಲೆಯ ಬಾದಾಮಿ ಗ್ರ್ಯಾಂಡ್ ಹೆರಿಟೇಜ್ ಹೋಟೆಲ್ ಸಭಾಭವನದಲ್ಲಿ ಶನಿವಾರ ಜರುಗಿದ ಚಾಲುಕ್ಯ ಉತ್ಸವ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಳೆದ 10 ವರ್ಷಗಳಿಂದ ನಾನಾ ಕಾರಣಗಳಿಂದ ಸ್ಥಗಿತಗೊಂಡಿ–ದ್ದ ಚಾಲುಕ್ಯ ಉತ್ಸವವನ್ನು ಈ ಭಾರಿ ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದ್ದು, ಕಾಯಕ್ರಮ ಅಚ್ಚುಕಟ್ಟಾಗಿ ಜರುಗಿಸಲು 25 ಸಮಿತಿಗಳನ್ನು ರಚಿಸಲಾಗಿದೆ. ಪ್ರತಿಯೊಂದು ಸಮಿತಿಯವರು ತಮಗೆ ನೀಡಿದ ಕೆಲಸವನ್ನು ಜವಾಬ್ದಾರಿಯಿಂದ ನಿರ್ವಹಿಸುವಂತೆ ಸೂಚಿಸಿದರು.

ಮೊದಲ ದಿನ ಬಾದಾಮಿ, ಎರಡನೇ ದಿನ ಪಟ್ಟದಕಲ್ಲು ಹಾಗೂ ಮೂರನೇ ದಿನ ಐಹೊಳೆಯಲ್ಲಿ ಉತ್ಸವ ನಡೆಯಲಿದ್ದು, ಮೂರೂ ಕಡೆಗಳಲ್ಲಿ ಸೂಕ್ತವಾದ ಸ್ಥಳ ಪರಿಶೀಲಿಸುವ ಕಾರ್ಯವಾಗಬೇಕು. ಕಾರ್ಯಕ್ರಮ ಸ್ಥಳದಲ್ಲಿ ಮೂಲಭೂತ ಸೌಲಭ್ಯ, ಕುಡಿಯುವ ನೀರು, ಪಾರ್ಕಿಂಗ್ ವ್ಯವಸ್ಥೆ ಚೆನ್ನಾಗಿ ಮಾಡಬೇಕು. ಕಾರ್ಯಕ್ರಮ ವೀಕ್ಷಣೆಗೆ ಎಲ್ಲ ರೀತಿಯಲ್ಲಿ ವ್ಯವಸ್ಥೆ ಮಾಡಬೇಕು. ಮೂರೂ ಕಡೆಗಳಲ್ಲಿ ಹಬ್ಬದ ವಾತಾವರಣ ಸೃಷ್ಠಿಯಾಗಬೇಕು. ಚಾಲುಕ್ಯರ ಗತಕಾಲದ ವೈಭವ ಮರುಕಳುಹಿಸುವಂತೆ ಆಗಬೇಕೆಂದು ಸಚಿವರು ತಿಳಿಸಿದರು.

ಮೂರುದಿನಗಳ ಕಾರ್ಯಕ್ರಮದಲ್ಲಿ ಸಂಜೆ 4 ರಿಂದ 6 ಗಂಟೆವರೆಗೆ ವೇದಿಕೆಯ ಮೇಲೆ ಸ್ಥಳೀಯ ಕಲಾವಿದರಿಗೆ ಅವಕಾಶ ಕಲ್ಪಿಸಬೇಕು. ನಂತರ ಮುಖ್ಯ ಕಲಾವಿದರ ಕಾರ್ಯಕ್ರಮ ಜರುಗಿಸಲು ತಿಳಿಸಿದ ಅವರು, ಕಾರ್ಯಕ್ರಮಕ್ಕೆ ಬೇರೆ ಕಡೆಯಿಂದ ಆಗಮಿಸುವವರಿಗೆ ವಿಶೇಷ ಸಾರಿಗೆ ವ್ಯವಸ್ಥೆ ಕಲ್ಪಿಸಬೇಕು, ಉತ್ಸವವಕ್ಕಾಗಿಯೇ ವಿಶೇಷವಾಗಿ ಹೆಚ್ಚುವರಿ ಬಸ್‌ಗಳನ್ನು ಬಿಡುವ ಕೆಲಸವಾಗಬೇಕು ಎಂದರು. ಉತ್ಸವದಲ್ಲಿಪಾಲ್ಗೊಳ್ಳುವಕಲಾವಿದರಿಗೆ ವಸತಿ ಹಾಗೂ ಊಟದ ವ್ಯವಸ್ಥೆ ವ್ಯವಸ್ಥಿತರವಾಗಿರಬೇಕು ಎಂದು ತಿಳಿಸಿದರು.

ಶಿಷ್ಠಾಚಾರದ ಪ್ರಕಾರ ಕಾರ್ಯಕ್ರಮದ ಆಮಂತ್ರಣ ಪತ್ರಿಕೆ ಮುದ್ರಣ, ಚಾಲುಕ್ಯ ಉತ್ಸವ–2025ರ ಲೋಗೋ ನಿರ್ಮಾಣ, ಕವಿ ಹಾಗೂ ವಿಚಾರಗೋಷ್ಠಿ ನಡೆಸಲು ಎಲ್ಲ ರೀತಿಯ ತಯಾರಿ ನಡೆಸಲು ಸೂಚಿಸಿದರು. ಉತ್ಸವದ ಅಂಗವಾಗಿ ಕುಸ್ತಿ, ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆ ಕೂಡಾ ಇಡಲಾಗುತ್ತಿದೆ. ಉತ್ಸವದ ಮೊದಲ ದಿನ ಅದ್ದೂರಿ ಮೆರವಣಿಗೆ ಕೂಡಾ ಹಮ್ಮಿಕೊಳ್ಳಲಾಗುತ್ತದೆ ಎಂದು ತಿಳಿಸಿದರು. ಇದರ ಜೊತೆಗೆ ಇಮ್ಮಡಿ ಪುಲಕೇಶಿ ಪುತ್ಥಳಿಯನ್ನು ಸಹ ಮುಖ್ಯಮಂತ್ರಿಗಳಿಂದ ಅನಾವರಣಗೊಳಿಸಲಾಗುತ್ತಿದೆ ಎಂದು ಸಚಿವ ತಿಮ್ಮಾಪೂರ ತಿಳಿಸಿದರು.

ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ದಿ ನಿಗಮದ ಅಧ್ಯಕ್ಷ ಎಸ್.ಜಿ.ನಂಜಯ್ಯನಮಠ ಮಾತನಾಡಿ, ಈ ಮೊದಲು ಒಂದು ದಿನ ಪಟ್ಟದಕಲ್ಲು, ಮತ್ತೊಂದು ದಿನ ಐಹೊಳೆಯಲ್ಲಿ ಉತ್ಸವ ಮಾಡಲಾಗುತ್ತಿತ್ತು. ಆದರೆ ಬಾದಾಮಿ ಸೇರಿ ಮೂರು ಕಡೆಗಳಲ್ಲಿ ಚಾಲುಕ್ಯ ಉತ್ಸವ ಹೆಸರಿನಲ್ಲಿ ಉತ್ಸವಗಳನ್ನು ಮಾಡಲಾಗುತ್ತಿದೆ. ಉತ್ಸವದಲ್ಲಿ ಬೇರೆ ಬೇರೆ ಕಡೆಗಳಿಂದ ಜನ ವೀಕ್ಷಣೆಗೆ ಬರುವ ನಿಟ್ಟಿನಲ್ಲಿ ಅದ್ದೂರಿಯಾಗಿ ಉತ್ಸವ ಆಚರಣೆಗೆ ಕರೆ ನೀಡಿದರು.

ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ ಉತ್ಸವ ಕಾರ್ಯಕ್ರಮದ ರೂಪುರೇಷೆ ಬಗ್ಗೆ ಮಾತನಾಡಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಓ ಶಶಿಧರ ಕುರೇರ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿ.ಪಂ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ತಹಶೀಲ್ದಾರ ರೂಪಾ ಸೇರಿದಂತೆ ವಿವಿಧ ಸಮಿತಿಯ ಅಧ್ಯಕ್ಷರು ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಉಪ್ಪಾರ ನಂದಿಹಾಳ ಗ್ರಾಮದಲ್ಲಿ ಹನುಮೇಶ ತಾತನವರ ಪುಣ್ಯಾರಾಧನೆ



ಮುದಗಲ್ ; ಪಟ್ಟಣ ಸಮೀಪದ ಉಪ್ಪಾರ ನಂದಿಹಾಳ ಗ್ರಾಮದಲ್ಲಿ ಹನುಮೇಶ ತಾತನವರ 17ನೇ ಪುಣ್ಯಾರಾಧನೆ ಕಾರ್ಯಕ್ರಮ ಪರಮ ಪೂಜ್ಯ ಶ್ರೀ ಶರಣ ಜಯೇಂದ್ರ ತಾತನವರ ದಿವ್ಯ ಸಾನಿದ್ಯದಲ್ಲಿ ಜರುಗಿತು.

ಬೆಳಿಗ್ಗೆ ಶ್ರೀ ಹನುಮೇಶ ತಾತನವರ ಗದ್ದುಗೆಗೆ ಧಾರ್ಮಿಕ ಪದ್ಧತಿಯಂತೆ ವಿವಿಧ ಪೂಜಾ ವಿಧಿ ವಿಧಾನಗಳು ಪಂಚಾಮೃತ ಅಭಿಷೇಕ, ತೀರ್ಥ ಪ್ರಸಾದ, ಭಜನೆ, ಉಪ್ಪಾರ ನಂದಿಹಾಳ ಶ್ರೀಮಠದಲ್ಲಿ ಧ್ವಜಾ ರೋಹಣಾ, ಹೋಮ ಹಾಗೂ ಕತೃಗದ್ದುಗೆಗೆ ವಿವಿಧ ಪುಷ್ಪಗಳಿಂದ ಅಲಂಕಾರ ಕ್ರಿಯೆಯನ್ನು ಶ್ರೀ ಶರಣ ಜಯೇಂದ್ರ ತಾತನವರು ನೇರವೇರಿಸಿದರು. ಶ್ರೀ ಮಠದಲ್ಲಿ ಧಾರ್ಮಿಕ ಹಾಗೂ ಸನ್ಮಾನ ಕಾರ್ಯಕ್ರಮ ಜರುಗಿದವು. ವಿವಿಧ ರಂಗಗಳಲ್ಲಿ ಸೇವೆ ಸಲ್ಲಿಸಿದ ಸಾಧಕರಿಗೆ, ಶ್ರೀಮಠದ ಶ್ರೀಗಳಿಂದ ಸನ್ಮಾನಿಸಿ ಗೌರವಿಸಲಾಯಿತು. ಸರ್ವ ಭಕ್ತಾಧಿಗಳು ಶ್ರೀಗಳ ಆಶೀರ್ವಚನ ಪಡೆದರು. ಪುಣ್ಯಾರಾಧನೆಯಲ್ಲಿ ಭಕ್ತರಿಗಾಗಿ ಅನ್ನಸಂತರ್ಪಣೆ ವ್ಯವಸ್ಥೆ ಕಲ್ಪಿಸಲಾಗಿತ್ತು.

ಈ ವೇಳೆ ಜವಳಗೇರ ನಾಗಲಿಂಗಮಠ ಶ್ರೀಸೂರ್ಯನಾರಾಯಣ ಮಹಾಸ್ವಾಮಿಗಳು, ಕಾಡು ಸಿದ್ದೇಶ್ವರ ಮಠದ ಶ್ರೀ ಮರುಳಾರಾಧ್ಯರು, ಬ್ಲಾಕ ಕಾಂಗ್ರೆಸ್ ಅಧ್ಯಕ್ಷ ಶಿವವ ಶಂಕರ ಗೌಡ್ರು, ರಾಯಚೂರು ವಿಶ್ವಕರ್ಮ ಸಮೂದಾಯದ ಜಿಲ್ಲಾಧ್ಯಕ್ಷ ಮೌಲೇಶ ಸಾಲವಾಡಗಿ, ನಿವೃತ್ತ ಎಇಇ ವಿಜಯಪುರ ರವೀಂದ್ರ ಪತ್ತಾರ, ಕಾಂತ ಪತ್ತಾರ, ಶಿವನಗೌಡ ಹಡಗಲಿ, ಮಹಾದೇವಪ್ಪ ಜಂಬಲದಿನ್ನಿ ಗ್ರಾ.ಪಂ ಸದಸ್ಯ ಶಿವಕುಮಾರ ಕಮ್ಮಾರ, ಉಪ್ಪಾರ ನಂದಹಾಳ ಶ್ರೀಮಠದ ಕಮಿಟಿ ಸರ್ವ ಸದಸ್ಯರು, ಸಕಲ ಭಕ್ತಾಧಿಗಳು, ಗ್ರಾಮಸ್ಥರು ಇದ್ದರು.

# ಕುಕನೂರಿನಲ್ಲಿ ಆರೋಗ್ಯ ಇಲಾಖೆಯಿಂದ ವಸ್ತು ಪ್ರದರ್ಶನ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಯಲಬುರ್ಗಾ ಮತ್ತು ಸಮುದಾಯ ಆರೋಗ್ಯ ಕೇಂದ್ರ ಕುಕನೂರು ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಗುದ್ನೇಶ್ವರ ಜಾತ್ರಾಮಹೋತ್ಸವದ ಅಂಗವಾಗಿ ದೇವಸ್ಥಾನದ ಆವರಣದಲ್ಲಿ ಇಲಾಖೆ ಯೋಜನೆಗಳು ಮತ್ತು ಸಾಂಕ್ರಾಮಿಕ/ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಕುರಿತು ವಸ್ತು ಪ್ರದರ್ಶನ ಕಾರ್ಯಕ್ರಮ ಹಾಗೂ ಪ್ರಥಮ ಚಿಕಿತ್ಸಾ ಕೇಂದ್ರ ಸ್ಥಾಪಿಸಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ನೀಲಗುಂದ ಗುದ್ನೇಪ್ಪನಮಠದ ಪ್ರಭುಲಿಂಗ ಮಹಾಸ್ವಾಮಿ ಇವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳು ಮತ್ತು ಸಾಂಕ್ರಾಮಿಕ/ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಕುರಿತು, ವಸ್ತು ಪ್ರದರ್ಶನವನ್ನು ಜಾತ್ರೆಯಲ್ಲಿ ಏರ್ಪಡಿಸುವಂತೆ ನಿರ್ದೇಶನವಿರುವುದರಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೊಪ್ಪಳದ ಜಿಲ್ಲಾ ಮಟ್ಟದಿಂದ ಈ ವಸ್ತುಪ್ರದರ್ಶನ ಕಾರ್ಯಕ್ರಮ ಏರ್ಪಡಿಸಿದ್ದು, ಸಾರ್ವಜನಿಕರಿಗೆ ಮಹತ್ವಪೂರ್ಣ ಕಾರ್ಯಕ್ರಮವಾಗಿದೆ. ಪ್ರಸ್ತುತ ದಿನಮಾನಗಳಲ್ಲಿ ಸಾಂಕ್ರಾಮಿಕ/ಅಸಾಂಕ್ರಾಮಿಕ ಖಾಯಿಲೆಗಳಿಂದ ಸಾರ್ವಜನಿಕರಿಗೆ ನೆಮ್ಮದಿ ಇಲ್ಲದಂತಾಗಿದೆ ಎಂದು ಹೇಳಿದರು.

ಪ್ರತಿಯೊಬ್ಬ ಸಾರ್ವಜನಿಕರು ಇಲಾಖೆಯಲ್ಲಿ ಲಭ್ಯವಿರುವ ಜನನಿ ಸುರಕ್ಷಾ ಯೋಜನೆ, ಜನನಿ–ಶಿಶು ಸುರಕ್ಷಾ ಯೋಜನೆ, ಡಾ.ಪುನೀತ್ ರಾಜಕುಮಾರ ಹೃದಯ ಜ್ಯೋತಿ ಯೋಜನೆ, ತಾಯಿ–ಮಕ್ಕಳ ಆರೋಗ್ಯ ಸುರಕ್ಷಿತ ಕಾರ್ಯಕ್ರಮ, ಕುಟುಂಬ ಕಲ್ಯಾಣ ಯೋಜನೆಗಳಾದ ತಾತ್ಕಾಲಿಕ ಮತ್ತು ಶಾಶ್ವತ ವಿಧಾನಗಳು, ಎನ್.ಪಿ.ಪಿ.ಸಿ.ಡಿ, ಪಿಸಿ&ಪಿ. ಎನ್.ಡಿ.ಟಿ, ಜೀವನ ಶೈಲಿಯಿಂದ ಬರುವ ರೋಗಗಳಾದ ಅಧಿಕ ರಕ್ತದೊತ್ತಡ(ಬಿ.ಪಿ), ಮಧುಮೇಹ, ಕ್ಯಾನ್ಸರ್, ಬೇಡವಾದ ಬೊಜ್ಜು, ಹೃದಯ ಸಂಬಂಧಿ ಖಾಯಿಲೆ ಹಾಗೂ ಪಾರ್ಶ್ವವಾಯು, ಮಾನಸಿಕ ಆರೋಗ್ಯ ಖಾಯಿಲೆ ಚಿಕಿತ್ಸೆ, ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮ, ಸೋಂಕಿತ ಸೊಳ್ಳೆಗಳಿಂದ ಹರಡುವ ಡೆಂಗ್ಯೂ–ಚಿಕನ್‌ಗುನ್ಯಾ, ಮಲೇರಿಯಾ, ಮೆದುಳು ಜ್ವರ ನಿಯಂತ್ರಣ, ಬಾಲ್ಯವಿವಾಹ ನಿಷೇಧ ಕುರಿತು, ಚಳಿಗಾಲ ಸಮಯದಲ್ಲಿ ಸಾರ್ವಜನಿಕರು ಆರೋಗ್ಯ ರಕ್ಷಣೆಗಾಗಿ ಅನುಸರಿಸುವ ಮುಂಜಾಗ್ರತ ಕ್ರಮಗಳ ಬಗ್ಗೆ ಮತ್ತು ವಿವಿಧ ಯೋಜನೆಗಳ ಕುರಿತು ವಿವಿಧ ಚಿತ್ರಗಳ ಮೂಲಕ ಸಾರ್ವಜನಿಕರಿಗೆ ಆಪ್ತಸಮಾಲೋಚನೆ ನೀಡುವುದರ ಮೂಲಕ ಹಾಗೂ ಆಡಿಯೋ ಜಿಂಗಲ್ಸ್‌ಳ ಮೂಲಕ ಅರಿವು ಮೂಡಿಸಲಾಗುತ್ತಿದೆ. ಇದರ ಸದುಪಯೋಗ ಪಡೆದುಕೊಂಡು ತಮ್ಮ ಆರೋಗ್ಯ ಕಾಪಾಡಿಕೊಳ್ಳುವಂತೆ ಸಾರ್ವಜನಿಕರಿಗೆ ತಿಳಿಸಿದರು.

ತಾಲೂಕಾ ಆರೋಗ್ಯಾಧಿಕಾರಿ ಡಾ. ನೇತ್ರಾವತಿ ಇವರು ಸಾರ್ವಜನಿಕರಿಗೆ ಕರಪತ್ರ ವಿತರಿಸಿದರು. ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯತಿಯ ಮುಖ್ಯ ಅಧಿಕಾರಿಗಳಾದ ನಬೀಸಾಬ್ ಕಂದಗಲ್, ಆಡಳಿತ ವೈದ್ಯಾಧಿಕಾರಿ ಡಾ.ರಾಮಕೃಷ್ಣ ರೆಡ್ಡಿ, ಮಕ್ಕಳ ತಜ್ಞರಾದ ಡಾ.ಮಂಜುನಾಥ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ಪ್ಥಿ.ಪಿ, ನಮ್ಮ ಕ್ಲಿನಿಕ್ ವೈದ್ಯಾಧಿಕಾರಿ ಡಾ.ಲಾಲಸಾಬ್ ಹಾಳಕೇರಿ, ಪ್ರಭಾರಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಕಾಳಪ್ಪ ಕುಂಬಾರ್, ಆರೋಗ್ಯ ನಿರೀಕ್ಷಣಾಧಿಕಾರಿ ಜಗನ್ನಾಥ, ಬಸವರೆಡ್ಡಿ, ಸಮುದಾಯ ಆರೋಗ್ಯಾಧಿಕಾರಿಗಳು, ಆರ್.ಕೆ.ಎಸ್.ಕೆ ಕಾರ್ಯಕ್ರಮದ ಆಪ್ತಸಮಾಲೋಚಕರು, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು, ವಿರೂಪಾಕ್ಷಪ್ಪ ಕಂದಾರಿ, ಇತರೆ ಸಿಬ್ಬಂದಿಗಳು, ಗ್ರಾಮದ ಮುಖಂಡರಾದ ಮಲ್ಲನಗೌಡ್ರು ಕೋನನಗೌಡ್ರು, ಸಿದ್ದಯ್ಯ ಕಳ್ಳಿಮಠ, ಜಗನ್ನಾಥ, ರುದ್ರಯ್ಯ ಎಸ್.ವಿ, ನಾಗಯ್ಯ ಕೊಪ್ಪಳ, ವೀರಯ್ಯ ಟಿ, ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಶಾಲೆಯಿಂದ ಹೊರಗುಳಿದ ಮಕ್ಕಳೊಂದಿಗೆ ಆಪ್ತ ಸಮಾಲೋಚನೆ ನಡೆಸಿ : ರಾಮತ್ನಾಳ



ಮಲ್ಲಮ್ಮನುಡಿವಾರ್ತೆಬಾಗಲಕೋಟೆ: ಶಾಲೆಯಿಂದ ಹೊರಗುಳಿದ ಮಕ್ಕಳು ಇದ್ದಲ್ಲಿ, ಅಂತಹ ಮಕ್ಕಳಿಗೆ ಆಪ್ತಸಮಾಲೋಚನೆ ನಡೆಸುವ ಮೂಲಕ ಪರಿವರ್ತನೆಗೊಳಿಸುವ ಕಾರ್ಯವಾಗಬೇಕೆಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ತಿಳಿಸಿದರು.

ನವನಗರದ ಅಗಸ್ತ್ರ ವಿಜ್ಞಾನ ಕೇಂದ್ರದಲ್ಲಿ ಇತ್ತೀಚೆಗೆ ಆರ್.ಟಿ.ಇ ಅನುಷ್ಠಾನದ ಕುರಿತು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಹಮ್ಮಿಕೊಳ್ಳಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಆರ್.ಟಿ.ಇ ಅನುಷ್ಠಾನದ, ಅದರ ಕಾರ್ಯವೈಖರಿಗಳ ಕುರಿತು ಹಾಜರಿದ್ದ ಎಲ್ಲ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಮಕ್ಕಳ ರಕ್ಷಣಾ ನೀತಿಗಳನ್ನು ಕಡ್ಡಾಯವಾಗಿ ಅಳವಡಿಸುವುದರ ಜೊತೆಗೆ ಮಕ್ಕಳ ಸಹಾಯವಾಣಿ–1098 ಶಾಶ್ವತ ಗೋಡೆಯಲ್ಲಿ ಬರೆಸುವುದು, ಗೃಹ ಆಧಾರಿತ ಎಲ್ಲಾ ಮಕ್ಕಳ ಯು.ಡಿ.ಆರ್ ಕಾರ್ಡ ಕಡ್ಡಾಯವಾಗಿ ಮಾಡಿಸಬೇಕು. ಶಾಲೆಯ ಆವರಣದಲ್ಲಿ ವಿದ್ಯುತ್ ತಂತಿ ಹಾಯ್ದು ಹೋಗಿರುವ ಶಾಲೆಗಳಲ್ಲಿ ವಿದ್ಯುತ್ ತಂತಿ ತೆಗೆದು ಹಾಕಲು ಕ್ರಮ ಕೈಗೊಳ್ಳಬೇಕು. ಶಾಲೆ ಆವರಣದಲ್ಲಿ ಹಳೆಯದಾದ ಗಿಡ–ಮರಗಳು ಇದ್ದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲು ಸೂಚಿಸಿದರು. ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಬೇಕಾದಲ್ಲಿ ಪೊಲೀಸ್ ವೆರಿಫಿಕೇಶನ್ ಆಗಬೇಕು. ಜಮಖಂಡಿ ತಾಲೂಕಿನಲ್ಲಿ ಅನಧೀಕೃತವಾಗಿರುವ ಕೋಚಿಂಗ್ ಸೆಂಟರ್‌ಗಳ ಕ್ರಮ ಕೈಗೊಳ್ಳಬೇಕೆಂದರು.

ಕಡ್ಡಾಯವಾಗಿ ಬಿ.ಆರ್.ಸಿ, ಸಿ.ಆರ್.ಸಿ, ಮುಖ್ಯೋಪಾಧ್ಯಾಯರಿಗೆ ಬಾಲ್ಯವಿವಾಹ ತಡೆಗಟ್ಟುವುದು ಹಾಗೂ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು. ಬಿಸಿ ಊಟದ ಸ್ವಚ್ಛತೆ ಹಾಗೂ ಶುದ್ಧವಾದ ಕುಡಿಯುವ ನೀರು ಪೂರೈಸುವುದು. ಮಕ್ಕಳ ವಿಶೇಷ ಗ್ರಾಮ ಸಭೆಯಲ್ಲಿ ಕಡ್ಡಾಯವಾಗಿ ಹಾಜರಾಗಿ ಮಕ್ಕಳ ಹಕ್ಕುಗಳು ಉಲ್ಲಂಘನೆಯಾಗದಂತೆ ನೋಡಿಕೊಳ್ಳುವುದು. ಶಾಲಾ ಮಕ್ಕಳ ಪ್ರವಾಸ ಕೈಗೊಳ್ಳಬೇಕಾದರೆ ಕಡ್ಡಾಯವಾಗಿ ಕೆ.ಎಸ್.ಆರ್.ಟಿ.ಸಿ ಬಸ್ ಮೂಲಕವೇ ಹೋಗುವುದು ಸೇರಿದಂತೆ ಹಲವು ವಿಚಾರಗಳ ಕುರಿತು ಚರ್ಚಿಸಿದರು.

ಸಭೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಡಾ.ವೀಣಾ.ಎಂ, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಅಜಿತ್ ಮನ್ನಿಕೇರಿ, ಅಸಾಂಸ್ಥಿಕ ರಕ್ಷಣಾಧಿಕಾರಿ ಕೇಶವದಾಸ ಹಾಗೂ ಜಿಲ್ಲೆಯ ಎಲ್ಲ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕ್ಷೇತ್ರ ಸಮನ್ವಯಾಧಿಕಾರಿಗಳು, ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಶಿಕ್ಷಣ ಸಂಯೋಜಕರು, ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಕ್ಷೇತ್ರ ಸಂಪನ್ಮೂಲ ವ್ಯಕ್ತಿಗಳು, ಸಿ.ಆರ್.ಪಿ ಹಾಗೂ ಬಿಐಇಆರ್‌ಟಿ ಶಿಕ್ಷಕರು ಹಾಗೂ ತಾಲೂಕು ದೈಹಿಕ ಶಿಕ್ಷಣ ಅಧಿಕಾರಿಗಳು ಹಾಜರಿದ್ದರು.

ಛಾಯಾಚಿತ್ರ ಲಗತ್ತಿಸಿದೆ.

# ಚೇತನ, ಉದ್ಯೋಗಿನಿ, ಧನಶ್ರೀ ಯೋಜನೆಯಡಿ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಮಾಜಿ ದೇವದಾಸಿ ಪುನರ್ವಸತಿ, ಚೇತನ ಮತ್ತು ಉದ್ಯೋಗಿನಿ ಹಾಗೂ ಧನಶ್ರೀ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಗಳಿಗೆ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಕೊನೆದಿನ ಡಿಸೆಂಬರ 15 ಕೊನೆಯ ದಿನವಾಗಿದೆ. ಅರ್ಜಿಗಳನ್ನು ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್, ಬೆಂಗಳೂರು ಒನ್ ಕೇಂದ್ರಗಳಲ್ಲಿ ಸಲ್ಲಿಸಬಹುದು. 2023–24 ಮತ್ತು 2024–25 ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆದುಕೊಳ್ಳದವರು ಮತ್ತೆ ಅರ್ಜಿ ಸಲ್ಲಿಸುವ ಅಗತ್ಯವಿಲ್ಲ. ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ ಉಪ ನಿರ್ದೇಶಕರ ಕಚೇರಿಗೆ ಭೇಟಿ ನೀಡುವಂತೆ ಪ್ರಕಟಣೆ ತಿಳಿಸಿದೆ.

# ಚಾಲುಕ್ಯ ಉತ್ಸವ-2025 ಆಸಕ್ತರಿಂದ ರೀಲ್ಸ್ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ : ನಾಡಿನ ಕಲೆ, ಸಂಸ್ಕೃತಿ, ಸಂಗೀತ, ನೃತ್ಯ ಪರಂಪರೆಯನ್ನು ಬಿಂಬಿಸುವ ಸ್ಥಳೀಯ ಹಾಗೂ ರಾಷ್ಟ್ರೀಯ ಕಲಾವಿದರನ್ನೆಲ್ಲಾ ಒಂದೆಡೆ ಸೇರಿಸುವ ಚಾಲುಕ್ಯ ಉತ್ಸವವು ಇದೇ ಡಿಸೆಂಬರ 19, 20 ಹಾಗೂ 21 ರಂದು ಬಾದಾಮಿ, ಪಟ್ಟದಕಲ್ಲ ಹಾಗೂ ಐಹೊಳೆಯಲ್ಲಿ ಜರುಗಲಿದ್ದು, ಚಾಲುಕ್ಯ ಉತ್ಸವ ಕುರಿತು ರೀಲ್ಸ್ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಅಪಲೋಡ್ ಮಾಡುವ ಆಸಕ್ತರಿಂದ ರೀಲ್ಸ್ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ, ಕೊಠಡಿ ಸಂ.35, ಜಿಲ್ಲಾಡಳಿತ ಭವನ, ನವನಗರ, ಬಾಗಲಕೋಟೆ ಇವರನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ಮರಗಳ ತೆರುವು : ಆಕ್ಷೇಪಣೆ ಸಲ್ಲಿಕೆ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

: ಮುಧೋಳ ತಾಲ್ಲೂಕು ವ್ಯಾಪ್ತಿಯ ಖಿಳೇಗಾಂವ–ಅನಗವಾಡಿ ರಾಜ್ಯ ಹೆದ್ದಾರಿ–262 ರ ವಜ್ಜರಮಟ್ಟಿ ಕೆ.ಇ.ಬಿ ಯಿಂದ ಆಲಗುಂಡಿ ಬಿ.ಕೆ ವರೆಗಿನ ರಸ್ತೆ ಅಭಿವೃದ್ಧಿ ಕಾಮಗಾರಿಯಲ್ಲಿ ಬರುವ ಒಟ್ಟು 128 ವಿವಿಧ ಜಾತಿಯ ಮರಗಳನ್ನು ತೆರುವುಗೊಳಿಸುವಂತೆ ಮುಧೋಳ ಲೋಕೋಪಯೋಗಿ ಇಲಾಖೆಯವರು ಅರಣ್ಯ ಇಲಾಖೆಗೆ ವಿನಂತಿಸಿರುತ್ತಾರೆ.

ಸದರಿ 128 ವಿವಿಧ ಜಾತಿಯ ಮರಗಳನ್ನು ಕಟಾವಣೆ ಮಾಡಿ ತೆರುವಗೊಳಿಸಲು ಸಾರ್ವಜನಿಕರ, ಸಂಘ ಸಂಸ್ಥೆಗಳ ಯಾವುದೇ ಆಕ್ಷೇಪಣೆ, ಅಹವಾಲುಗಳು, ತಂಟೆ ತಕರಾರುಗಳು ಇದ್ದಲ್ಲಿ ಈ ಸಾರ್ವಜನಿಕ ಪ್ರಕಟಣೆಯ ನಂತರದ 7 ದಿನಗಳಲ್ಲಿ ಮುಧೋಳ ವಲಯ ಅರಣ್ಯ ಅಧಿಕಾರಿ, ಜಮಖಂಡಿ ಉಪವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಕಛೇರಿಗೆ ಲಿಖಿತವಾಗಿ ಸಲ್ಲಿಸಬೇಕು. ಅವಧಿ ಮೀರಿ ಸಲ್ಲಿಕೆಯಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಬಾಗಲಕೋಟ ವಿಭಾಗ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮರ ತೆರುವು : ಸಾರ್ವಜನಿಕರಿಂದ ಆಕ್ಷೇಪಣೆ ಸಲ್ಲಿಕೆ

ಮಲ್ಲಮ್ಮನುಡಿವಾರ್ತೆಬಾಗಲಕೋಟೆ

ಬಾಗಲಕೋಟಯ ಬಿಳಿಗಿರಿ ರಂಗನಬೆಟ್ಟ ರಾಜ್ಯ ಹೆದ್ದಾರಿ ಪೈಕಿ ಬಾಗಲಕೋಟ ರೇಲ್ವೆ ಬ್ರಿಡ್ಜದಿಂದ ನೀರಲಕೇರಿ ಗ್ರಾಮದ ರೇಲ್ವೆ ಗೇಟ್‌ವರೆಗಿನ ರಸ್ತೆ ಅಭಿವೃದ್ದಿ ಕಾಮಗಾರಿಯಲ್ಲಿ ಬರುವ ಒಟ್ಟು 49 ವಿವಿಧ ಜಾತಿಯ ಮರಗಳನ್ನು ಕಟಾವಣೆ ಮಾಡಿ ತೆರವುಗೊಳಿಸಬೇಕಾಗಿದೆ.

ಸದರಿ 49 ಮರಗಳನ್ನು ಕಟಾವಣೆಮಾಡಿ ತೆರವುಗೊಳಿಸಲು ಯಾವುದೇ ಸಾರ್ವಜನಿಕರ, ಸಂಘ ಸಂಸ್ಥೆಗಳ, ನಿಗಮ, ಇತರೆ ಇಲಾಖೆಗಳ ಯಾವುದೇ ಆಕ್ಷೇಪಣೆ, ಅಹವಾಲು, ತಂಟೆ ತಕರಾರುಗಳು ಇದ್ದಲ್ಲಿ ಈ ಸಾರ್ವಜನಿಕ ಪ್ರಕಟಣೆಯ ನಂತರದ 7 ದಿನಗಳಲ್ಲಿ ವಲಯ ಅರಣ್ಯ ಅಧಿಕಾರಿ, ಬಾಗಲಕೋಟ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಉಪವಿಭಾಗ ಬಾಗಲಕೋಟೆ ಕಛೇರಿಗೆ ಲಿಖಿತವಾಗಿ ಸಲ್ಲಿಸಬೇಕು. ಅವಧಿ ಮೀರಿ ಸಲ್ಲಿಕೆಯಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಬಾಗಲಕೋಟ ವಿಭಾಗ ಉಪ ಅರಣ್ಯ ಸಂರಕ್ಷಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನರಿಗೆ ಕುಡಿಯಲು ನೀರು ಕೊಡುತ್ತಿಲ್ಲ ಸರಿಯಾದ ರಸ್ತೆಯಿಲ್ಲ ಇದೆಂತಹ ನಿಶ್ಪ್ರೋಜಕ ಸರ್ಕಾರ : ಜವರಾಯಿಗೌಡ

ಮಲ್ಲಮ್ಮ ನುಡಿ ವಾರ್ತೆ

ಪೀಣ್ಯ ದಾಸರಹಳ್ಳಿ: ಜನರಿಗೆ ಕುಡಿಯಲು ನೀರು ಕೊಡುತ್ತಿಲ್ಲ ಸರಿಯಾದ ರಸ್ತೆಯಿಲ್ಲ ಇದೆಂತಹ ನಿಶ್ಪ್ರೋಜಕ ಸರ್ಕಾರ? ಗ್ಯಾರಂಟಿ ಯೋಜನೆ ಎಂದು ಪ್ರೀ ಸ್ಕೀಂ ಕೊಟ್ಟು ಜನಸಾಮಾನ್ಯರಿಗೆ ತೆರಿಗೆ ಏರಿಸಿ ಹಣ ವಸೂಲಿ ಮಾಡುತ್ತಿದ್ದಿರಾ? ಇದೇನಾ ನಿಮ್ಮ ಸರ್ಕಾರದ ಕಾರ್ಯವೈಖರಿ ಎಂದು ಕಾಂಗ್ರೇಸ್ ಸರ್ಕಾರದ ವಿರುದ್ಧ ವಿಧಾನ ಪರಿಷತ್ತು ಸದಸ್ಯ ಟಿ. ಎನ್. ಜವರಾಯಿಗೌಡ ಅಕ್ರೋಶ ವ್ಯಕ್ತ ಪಡಿಸಿದರು.

ಕಳೆದ ಇಪ್ಪತ್ತು ವರ್ಷಗಳಿಂದ ಅನ್ನಪೂರ್ಣೇಶ್ವರಿ ಬಡಾವಣೆಯಲ್ಲಿ ವಾಸ ಮಾಡುತ್ತಿದ್ದು ಕುಡಿಯಲು ನೀರಿಲ್ಲ ಓಡಾಡಲು ರಸ್ತೆ ಇಲ್ಲಾ ,ಲಕ್ಷ ಲಕ್ಷ ತೆರಿಗೆ ವಸೂಲಿಗೆ ಮಾತ್ರ ಬರ್ತಿರಾ, ನಮ್ಮ ಸಮಸ್ಯೆ ಕೇಳುವರ್ಯಾರು? ಎಂದು ಸರ್ಕಾರ ವಿರುದ್ಧ ನಿವಾಸಿಗಳು ಖಾಲಿ ಬಿಂದಿಗೆ ಹಿಡಿದು ಪ್ರತಿಭಟನೆ ಮೂಲಕ ಜಲಮಂಡಳಿ ಅಧಿಕಾರಿಗಳ ವಿರುದ್ಧ ಅಕ್ರೋಶ ವ್ಯಕ್ತಪಡಿಸಿದರು. ಮಾರಣ್ಣ ಬಡಾವಣೆಯಲ್ಲಿ ಬೋರ್ವೆಲ್ ಪಂಪ್ ಸೆಟ್ಟು ಕೆಟ್ಟು ಸುಮಾರು ತಿಂಗಳಾಗಿದೆ. ಜಲಮಂಡಳಿಯ ನಿರ್ಧಾರದಿಂದ ಇಲ್ಲಿನ ನಿವಾಸಿಗಳಿಗೆ ನೀರಿನ ತೊಂದರೆ ತೀವ್ರ ತೊಂದರೆ ಅನಭವಿಸುತ್ತಿದ್ದಾರೆ ಸಂಭಂಧಪಟ್ಟ



ಅಧಿಕಾರಿಗಳ ಉಡಾಪೆ ಉತ್ತರ ನೀಡುತ್ತಿದ್ದಾರೆ , ಜಲಮಂಡಳಿ ಇರೋದು ಲಾಭ ಮಾಡಲಿಕ್ಕೆ ಅಲ್ಲ ಜನರ ಸೇವೆಗೆ ನೀರಿನ ವಿಚಾರದಲ್ಲಿ ರಾಜಕೀಯ ಸಲ್ಲುದು. ಕಾವೇರಿ ನೀರು ಇಲ್ಲಾ ಇತ್ತ ಬೋರ್ವೆಲ್ ನೀರು ಸಹ ಕೊಡುತ್ತಿಲ್ಲ ನೀರಿಲ್ಲದೆ ಬದುಕುವುದಾದರೂ ಹೇಗೆ ಜನಗಳು ಏನ್ಮಾಡಬೇಕು ಮೊದಲು ನೀರು ಕೊಡಿ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ನೀರಿಗಾಗಿ ಹಲವು ಭಾರಿ ಹೋರಾಟ ಮಾಡಿದರೂ ಪ್ರಯೋಜನವಾಗುತ್ತಿಲ್ಲ ಕಾವೇರಿ ನೀರಿನ ಕನೆಕ್ಷನ್ ತಗೊಂಡಿಲ್ಲ ಎಂದು ಬೋರ್ವೆಲ್ ರೀಪೇರಿ ಮಾಡಿಸುತ್ತಿಲ್ಲ ಎಂದು ಜಲಮಂಡಳಿ ಅಧಿಕಾರಿ ವಿರುದ್ಧ ಅಕ್ರೋಶ ವ್ಯಕ್ತಪಡಿಸಿದ ಮಹಿಳೆಯರು ಪಕ್ಷ ರಾಜಕೀಯ ನೆಡೆಯುತ್ತಿದೆ ಎಂದು ಅರೋಪಿಸಿದರು , ಕೂಡಲೇ ಎಚ್ಚೆತ್ತು ಅಧಿಕಾರಿಗಳು ಸ್ಪಂದಿಸದಿದ್ದರೆ ಜಮಮಂಡಳಿಗೆ ಮುತ್ತಿಗೆಯ ಎಚ್ಚರಿಕೆ ನೀಡಿದರು.

ನೀರು ಬಿಡದೆ ತಾರತಮ್ಯ ಮಾಡುತ್ತಾರೆ. ಎಲ್ಲರೂ ಕಾವೇರಿ ನೀರಿನ ಸಂಪರ್ಕ ಪಡೆದರೂ ಕೂಡ ಸರಿಯಾಗಿ ನೀರು ಬಿಡುತ್ತಿಲ್ಲ, ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಈ ಬಗ್ಗೆ ಸ್ಪಂದಿಸುತ್ತಿಲ್ಲ' ಎಂದು ಸ್ಥಳೀಯ ನಿವಾಸಿ ಕಾವ್ಯ ಆಕ್ರೋಶ ವ್ಯಕ್ತಪಡಿಸಿದರು. ಬೋರ್ ವೆಲ್ ಕೆಟ್ಟುಹೋಗಿದೆ. ಕಾವೇರಿ ನೀರು ಬರುತ್ತಿಲ್ಲ, ಟ್ಯಾಂಕರ್ ಮೂಲಕ ನೀರು ಪಡೆಯುತ್ತಿದ್ದೇವೆ. ನಾವು ಯಾರನ್ನು ಕೇಳಬೇಕು ಎಂಬುದು ತಿಳಿಯದಾಗಿದೆ' ಎಂದು ತ್ರಿವೇಣಿ ಆತಂಕ ವ್ಯಕ್ತಪಡಿಸಿದರು. ಈ ಸಂಧರ್ಭದಲ್ಲಿ ಮುಖಂಡರಾದ ತಿಪ್ಪೇನಹಳ್ಳಿ ಮಂಜುನಾಥ್, ವಿಧಾನ ಪರಿಷತ್ ಸದಸ್ಯ ಟಿಎನ್ ಜವರಾಯಗೌಡ, ಟ್ರಾವೆಲ್ ಮಂಜುನಾಥ್, ಕುಮಾರ್, ಪುನೀತ್, ಮಾರೇಗೌಡ್ರು, ಸಂತೋಷ್ ,ಕುಮಾರ್, ಇನ್ನೂ ಮುಂತಾದವರು ಜೆಡಿಎಸ್ ಮುಖಂಡರು ಉಪಸ್ಥಿತರಿದ್ದರು



ಹುಮನಾಬಾದ್‌ನಲ್ಲಿ ಓದುಗ ಮಲ್ಲಮ್ಮನುಡಿಯಲ್ಲಿ ತಲ್ಲೀನ..





ಕೊಪ್ಪಳ ಜಿಲ್ಲೆಯಲ್ಲಿ ಪುಟಾಣಿ ವಿದ್ಯಾರ್ಥಿಗಳು ಮಲ್ಲಮ್ಮ ನುಡಿ ಪತ್ರಿಕೆ ವೀಕ್ಷಿಸುತ್ತಿರುವುದು ಕಾಣಬಹುದು...



ಬಳ್ಳಾರಿ ನಗರದ ಬುಕ್ ಸ್ಟಾಲ್‌ಗಳಲ್ಲಿ ಮಲ್ಲಮ್ಮ ನುಡಿ ದಿನಪತ್ರಿಕೆ...

## ಹೈಮಾಸ್ಟ್ ದೀಪ ಅಳವಡಿಸಲು ಒತ್ತಾಯ

**ಕೆಂಭಾವಿ:** ಪಟ್ಟಣದ ವೀರ ರಾಣಿ ಕಿತ್ತೂರು ಚೆನ್ನಮ್ಮ ವೃತ್ತದಲ್ಲಿ ಹೈ ಮಾಸ್ಟ್ ವಿದ್ಯುತ್ ದೀಪ ಅಳವಡಿಸುವಂತೆ ನಮ್ಮ ಕರ್ನಾಟಕ ಸೇನೆಯ ಕಾರ್ಮಿಕ ಘಟಕದ ಹೋಬಳಿ ಅಧ್ಯಕ್ಷ ಗುರುರಾಜ್ ಎಸ್ ಅಂಗಡಿ ಒತ್ತಾಯಿಸಿದ್ದಾರೆ.

ಈ ಕುರಿತು ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದು, ಪಟ್ಟಣದ ರಾಣಿ ಚನ್ನಮ್ಮ ವೃತ್ತದಲ್ಲಿ ವಾಹನ ದಟ್ಟಣೆ ಹೆಚ್ಚಾಗಿರುತ್ತದೆ. ಪಕ್ಕದಲ್ಲಿಯೇ ಕೃಷ್ಣಾ ಕಾಲುವೆ ಇರುವುದರಿಂದ ರಾತ್ರಿ ವೇಳೆ ವೃತ್ತದ ಆಸುಪಾಸು ಬೆಳಕಿನ ಅಭಾವದಿಂದ ಬ್ರಹತ್ ವಾಹನಗಳು ಸೇರಿದಂತೆ ಲಘುವಾಹನಗಳು, ಪಾದಾಚಾರಿಗಳ ಸಂಚಾರಕ್ಕೆ ಅಡತೆಡೆ ಉಂಟಾಗುತ್ತಿದೆ. ವೃತ್ತದಲ್ಲಿ ಸಂಚಾರ ದಟ್ಟಣೆಯಿಂದ ಅವಘಡಗಳು ಸಂಭವಿಸುತ್ತಿವೆ. ಕಾರಣ ಹೈಮಾಸ್ಟ ದೀಪ್ ಅಳವಡಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ಮನವಿಯಲ್ಲಿ ಆಗ್ರಹಿಸಲಾಗಿದೆ.

## ಗಳಲೆ ರೋಗದಿಂದ ಕೃಷ್ಣಮೃಗ ಸಾವು

**ಬೆಳಗಾವಿ:** ಬ್ಯಾಕ್ಟೀರಿಯಾ ಸೋಂಕು ಗಳಲೆ ರೋಗ (ಹೆಮರೇಜಿಕ್ ಸೆಪ್ಟಿ ಸೀಮಿಯಾ)ದಿಂದ ರಾಣಿ ಚೆನ್ನಮ್ಮ ಕಿರು ಮೃಗಾಲಯದಲ್ಲಿ 31 ಕೃಷ್ಣಮೃಗಗಳು ಸಾವನ್ನಪ್ಪಿದ್ದು, ತಮಗೂ ನೋವು ತಂದಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ.

ವಿಧಾನಪರಿಷತ್ತಿನಲ್ಲಿಂದು ಸದಸ್ಯರ ಪ್ರಶ್ನೆಗೆ ಉತ್ತರಿಸಿದ ಅವರು, ಚಿಗುರು ತಿನ್ನುವ ಪ್ರಾಣಿಗಳಲ್ಲಿ ಸಾಮಾನ್ಯವಾಗಿ ಈ ಕಾಯಿಲೆ ಕಾಣಿಸಿಕೊಳ್ಳುತ್ತದೆ. ಹೊರ ನೋಟಕ್ಕೆ ಸೋಂಕಿನ ಲಕ್ಷಣವೂ ಕಾಣುವುದಿಲ್ಲ. ಈ ಸೋಂಕು ಬಂದ 6 ರಿಂದ 24 ಗಂಟೆಗಳಲ್ಲಿ ಅಥವಾ 8ರಿಂದ 24 ಗಂಟೆಗಳಲ್ಲಿ ಸಾವು ಸಂಭವಿಸುತ್ತದೆ ಎಂದು ವೈದ್ಯರು ಹೇಳುತ್ತಾರೆ. ಸೋಂಕು ತಗುಲಿದ ಕೆಲವೇ ಗಂಟೆಗಳಲ್ಲಿ ಸಾವು ಸಂಭವಿಸುವ ಕಾರಣ ಹೆಚ್ಚಿನ ಸಂಖ್ಯೆ ಕೃಷ್ಣಮೃಗ ಮೃತಪಟ್ಟಿದೆ ಎಂಬುದು ತಜ್ಞವೈದ್ಯರ ಅಭಿಪ್ರಾಯವಾಗಿದೆ ಎಂದು ವಿವರಿಸಿದ್ದಾರೆ.

## ಜೈಲಿನಲ್ಲೂ ದರ್ಶನ್ ಯಡವಟ್ಟು..!

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲುಪಾಲಾಗಿರುವ ನಟ ದರ್ಶನ್ ಜೈಲಿನಲ್ಲೂ ಯಡವಟ್ಟು ಮಾಡಿಕೊಂಡಿದ್ದು, ಸಹ ಕೈದಿಗೆ ಥಳಿಸಿದ್ದಾರೆ ಎಂದು ವರದಿಯಾಗಿದೆ.

ಸುದ್ದಿಮಾಧ್ಯಮವೊಂದು ಈ ಕುರಿತು ವರದಿ ಮಾಡಿದ್ದು,



ಜಾಮೀನು ರದ್ದಾಗಿ ಪರಪ್ಪನ ಅಗ್ರಹಾರ ಜೈಲಿಗೆ ಮರಳಿರುವ ನಟ ದರ್ಶನ್ ಸಹ ಕೈದಿಗಳಿಗೆ ಮಾನಸಿಕ ಹಾಗೂ ದೈಹಿಕ ಕಿರುಕುಳ ನೀಡುತ್ತಿರುವುದು ಬೆಳಕಿಗೆ ಬಂದಿದ್ದು, ದೊಡ್ಡ ಜಗಳಗಳು ನಡೆದಿವೆ ಎಂದು ವರದಿ ಮಾಡಿದೆ.

ಜೈಲಿನಲ್ಲಿ ನಡೆಯುತ್ತಿದ್ದ ಅಕ್ರಮಗಳು ಕುರಿತು ಮಾಧ್ಯಮಗಳು ಸುದ್ದಿ ಮಾಡುತ್ತಲೇ ಅಧಿಕಾರಿಗಳು ಎಚ್ಚೆತ್ತುಕೊಂಡು ಅಕ್ರಮಗಳಿಗೆ ಬ್ರೇಕ್ ಹಾಕಿದ್ದಾರೆ. ಈಗ ಬೆಂಗಳೂರಿನ ಪರಪ್ಪನ ಅಗ್ರಹಾರದಲ್ಲಿ ನಿಯಮಗಳು ಕಠಿಣವಾಗಿದ್ದು, ಈ ನಿಯಮಗಳಿಂದ ನಟ ದರ್ಶನ್ ತತ್ತರಿಸಿಹೋಗಿದ್ದಾರಂತೆ. ಮಾನಸಿಕ ಒತ್ತಡಕ್ಕೆ ಒಳಗಾಗಿ ನಟ ದರ್ಶನ್ ಸಹ ಕೈದಿಗಳಿಗೆ ಅವರು ಕಿರುಕುಳ ನೀಡುತ್ತಿರುವ ಆರೋಪ ಕೇಳಿ ಬಂದಿದೆ.

**ತೀವ್ರ ನಿಗಾದಲ್ಲಿ ದರ್ಶನ್, ಕಠಿಣ ನಿಯಮ:** ದರ್ಶನ್ ಈ ಬಾರಿ ಜೈಲು ಸೇರಿದಾಗಿನಿಂದಲೂ ಕಠಿಣ ನಿಯಮ ಜಾರಿಯಲ್ಲಿದೆ. ಅಲ್ಲದೆ, ಇತ್ತೀಚೆಗೆ ಜೈಲಿನ ಪಾರ್ಟಿ ವಿಡಿಯೋ ವೈರಲ್ ಆಗುತ್ತಿದ್ದಂತೆ ಎಲ್ಲವೂ ಬದಲಾಗಿದೆ. ಐಪಿಎಸ್ ಅಧಿಕಾರಿ ಅಂಶು ಕುಮಾರ್ ಜೈಲಿನ ಮುಖ್ಯ ಸೂಪರಿಂಟೆಂಡೆಂಟ್ ಆಗಿ ನೇಮಕಗೊಂಡಿದ್ದು, ಜೈಲಿನಲ್ಲಿ ಅತಿ ಕಠಿಣ ರೂಲ್ಸ್ ಜಾರಿಗೆ ತಂದಿದ್ದಾರೆ. ದರ್ಶನ್ ಅವರು ಸಾಲಿನಲ್ಲಿ ನಿಂತು ತಾವೇ ಊಟ ತೆಗೆದುಕೊಂಡು ಬರಬೇಕಿದೆ. ಒಳಗಿನ ಶೌಚಾಲಯ ಕೂಡ ತಾವೇ ಕ್ಲೀನ್ ಮಾಡಬೇಕಿದೆ. ಈ ನಿಯಮಗಳಿಂದ ದರ್ಶನ್ ತತ್ತರಿಸಿ ಹೋಗಿದ್ದಾರೆ.

# ಕನ್ನಡದ ಕಾರ್ಯಕ್ರಮಗಳಿಗೆ ಅಲಕ್ಷ್ಯ: ಕಿಡಿ



## 11 ಸಾಧಕರಿಗೆ ಕುವೆಂಪು ಪ್ರಶಸ್ತಿ ಪ್ರದಾನ...

ಕರವೇ 21ರ ಸಂಭ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರನ್ನು ಗುರುತಿಸಿ ಕುವೆಂಪು ಪ್ರಶಸ್ತಿ ಪ್ರದಾನ ಮಾಡಲಾಯಿತು.

• ಮಲ್ಲಮ್ಮ ನುಡಿ ಕೆಂಭಾವಿ

ನಮ್ಮ ವೇದಿಕೆಯಿಂದ ನಡೆಯುವ ಯಾವುದೆ ಕನ್ನಡದ ಕಾರ್ಯಕ್ರಮಗಳಿಗೆ ರಾಜಕಾರಣಿಗಳಿಗೆ ಆಹ್ವಾನ ನೀಡಬೇಡಿ ಮತ್ತು ಆಮಂತ್ರಣ ಪತ್ರಿಕೆಯಲ್ಲಿ ರಾಜಕಾರಣಿಗಳ ಹೆಸರು ಕೂಡ ಹಾಕುವದನ್ನು ನಿಲ್ಲಿಸಿಬಿಡಿ ಎಂದು ಕರವೇ ಜಿಲ್ಲಾಧ್ಯಕ್ಷ ಟಿ.ಎನ್ ಭೀಮು ನಾಯಕ್ ರಾಜಕಾರಣಿಗಳ ಅಸಡ್ಡೆ ಕುರಿತು ಕಠೋರವಾಗಿ ಟೀಕಿಸಿದರು.

ಕರ್ನಾಟಕ ರಕ್ಷಣಾ ವೇದಿಕೆಯ 21 ನೇ ಸಂಭ್ರಮಾಚರಣೆ ನಿಮಿತ್ತ ಕೆಂಭಾವಿ ವಲಯ ಘಟಕದ ವತಿಯಿಂದ ಪಟ್ಟಣದ ಪುರಸಭೆ ಆವರಣದಲ್ಲಿ ಹಮ್ಮಿಕೊಂಡ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕನ್ನಡ, ನಾಡು ನುಡಿ ಕಾರ್ಯಕ್ರಮವೆಂದರೆ ಹಲವು ರಾಜಕಾರಣಿಗಳಿಗೆ ಅಸಡ್ಡೆವಾಗಿದೆ. ಅವರು ಕನ್ನಡಪರ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದೆ ಇಲ್ಲ. ಸ್ವಾರ್ಥ ಸಾಧಕರಾಗಿದ್ದಾರೆ, ಇವರ ಸ್ವಾರ್ಥದ ಫಲವಾಗಿಯೆ ನಮ್ಮ ಭಾಗ ಸಾಮಾಜಿಕ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿದೆ. ನಿಜವಾಗಲೂ ನಿಮಗೆ ಸ್ವಾಭಿಮಾನವಿದ್ದರೆ ಬೆಳಗಾವಿ ಅಧಿವೇಶನದಲ್ಲಿ ಈ ಭಾಗದ ರೈತಪರ, ಶೈಕ್ಷಣಿಕ, ಸಾಮಾಜಿಕ ಸಮಸ್ಯೆಗಳನ್ನು ಎತ್ತಿ, ನಿಮ್ಮ ಸ್ವಾರ್ಥವನ್ನು ಅಭಿವೃದ್ಧಿ ಪರ ದ್ವನಿ ಎತ್ತುವ ಕೆಲಸ ಮಾಡಿ ಎಂದು ತಮ್ಮ ಮಾತಿನ ಮೂಲಕ ಬಾಗದ ರಾಜಕಾರಣಿಗಳನ್ನು ತರಾಟೆಗೆ ತೆಗೆದುಕೊಂಡರು.

ಯಾದಗಿರಿ ಜಿಲ್ಲೆಯಲ್ಲಿ ಎರಡು ಹೊಸ ತಾಲೂಕು ಘೋಷಣೆ ಯಾದರೂ ಎಲ್ಲ ಅರ್ಹತೆಯಿದ್ದರೂ ದಶಕಗಳ ಹೋರಾಟವಿದ್ದರೂ ಕೆಂಭಾವಿ ತಾಲೂಕು ಕೇಂದ್ರ ಮಾಡುವಲ್ಲಿ ಇಲ್ಲಿನ ರಾಜಕಾರಣಿಗಳು ವಿಫಲವಾಗಿದ್ದಾರೆ ಕಿಡಿಕಾರಿದರು.

ಸುರಪುರ ತಾಲೂಕು ಅಧ್ಯಕ್ಷ ವೆಂಕಟೇಶ ನಾಯಕ ಭೈರಮಡ್ಡಿ ಪ್ರಾಸ್ತಾವಿಕ ಮಾತನಾಡಿ, ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಧ್ಯಕ್ಷ ನಾರಾಯಣಗೌಡರ ನೇತೃತ್ವದಲ್ಲಿ ನಾಡು ನುಡಿ, ನೆಲ ಜಲ ಗಡಿ ವಿವಾದ, ಉದ್ಯೋಗ, ಸಂಸ್ಕೃತಿಯ ರಕ್ಷಣೆಗೆ ಹೀಗೆ ರಕ್ಷಣಾ ವೇದಿಕೆಯ ಮೂಲಕ ನಡೆದ ಹತ್ತು ಹಲವು ಹೋರಾಟಗಳನ್ನು ಮೆಲಕು ಹಾಕಿ, ನಮಗೆ ಕನ್ನಡವೆ ಜಾತಿ ಕನ್ನಡವೆ ಧರ್ಮ, ಕನ್ನಡವೇ ದೇವರು ಕನ್ನಡದ ಅಸ್ಮಿತೆಗೆ ಅಡತಡೆಯಾದರೆ ಕನ್ನಡಕ್ಕಾಗಿ ದಿಟ್ಟ ಹೋರಾಟ ನಮ್ಮದು ಎಂದರು.

ಕೆಂಭಾವಿ ಹಿರೇಮಠದ ಪೀಠಾಧಿಪತಿ ಚನ್ನಬಸವ ಶಿವಾಚಾರ್ಯರು, ಕರಡಕಲ್ ಪ.ಪೂ ಶಾಂತರುದ್ರಮುನಿ ಶಿವಾಚಾರ್ಯರು, ಮುದನೂರು ಕಂಠಿ ಮಠದ ಪ.ಪೂ ಸಿದ್ದ ಚನ್ನಮಲ್ಲಿಕಾರ್ಜುನ ಸ್ವಾಮಿಜಿಗಳು ಸಾನಿಧ್ಯವಹಿಸಿದ್ದರು. ಮುದಿಗೌಡ ಮಾಲಿ ಪಾಟೀಲ್, ಆದಿತ್ಯಗೌಡ ಪೊ. ಪಾಟೀಲ್, ರಾಜಶೇಖರಗೌಡ ಪೊ. ಪಾಟೀಲ್, ಪುರಸಭೆ ಅಧ್ಯಕ್ಷೆ ಪ್ರೀಯಾ ರಾಮನಗೌಡ ಪೊ. ಪಾಟೀಲ್, ಮಹಿಪಾಲರಡ್ಡಿ ಡಿಗ್ಗಾವಿ, ರಾಘವೇಂದ್ರ ದೇಶಪಾಂಡೆ, ಖಾಜಾ ಪಟೇಲ್ ಕಾಚೂರು, ಪಿಎ ಹಣಮಂತ ಸಿದ್ದಾಪೂರ, ಕೃಷ್ಣ ರಡ್ಡಿ ಮುದನೂರು, ಶರಣಪ್ಪ ಯಾಳಗಿ, ಶಿವು ಮಲ್ಲಿಭಾವಿ, ವಿಠ್ಠಲ, ಅಂಬಯ್ಯ ಬಡಿಗೇರ ಸೇರಿದಂತೆ ಪುರಸಭೆ ಸದಸ್ಯರು, ಕರವೇಯ ಜಿಲ್ಲೆ ತಾಲೂಕು ಪದಾಧಿಕಾರಿಗಳು ಹಲವು ಗಣ್ಯರಿದ್ದರು. ಕರವೇ ಕೋಶಾಧ್ಯಕ್ಷ ಶ್ರೀಶೈಲ ಕಾಚಾಪುರ ಸ್ವಾಗತಿಸಿದರೆ, ವಲಯ ಅಧ್ಯಕ್ಷ ಕುಮಾರ ಭೋವಿ ವಂದಿಸಿದರು ಡಾ. ಯಂಕನಗೌಡ ಪಾಟೀಲ್ ಕಾರ್ಯಕ್ರಮ ನಡೆಸಿಕೊಟ್ಟರು.

> ತಾಲೂಕು ಕೇಂದ್ರವಾಗಲು ಸಕಲ ರೀತಿಯಲ್ಲಿ ಅರ್ಹತೆ ಹೊಂದಿರುವ ಕೆಂಭಾವಿ ಪಟ್ಟಣವನ್ನು ಸಂಪೂರ್ಣ ಕಡೆಗಣಿಸಲಾಗಿದೆ. ಈ ಭಾಗದ ರಾಜಕಾರಣಿಗಳ ಇಚ್ಛಾಶಕ್ತಿ ಕೊರತೆ ಇದಕ್ಕೆ ಕಾರಣವಾಗಿದೆ.
>
> –ಟಿ. ಎನ್. ಭೀಮುನಾಯಕ
> ಕರವೇ ಜಿಲ್ಲಾಧ್ಯಕ್ಷ

## ಜನಮನ ಗೆದ್ದ ರಸಮಂಜರಿ ಕಾರ್ಯಕ್ರಮ

ಜೀ ಕನ್ನಡ ಖ್ಯಾತಿಯ ಮೋನಮ್ಮ, ರೇವಣಸಿದ್ದ ಅವರಿಂದ ಸಂಗೀತ ಕಾರ್ಯಕ್ರಮ ಹಾಗೂ ಜೂನಿಯರ್ ಕಲಾವಿದರ ರಸಮಂಜರಿ ಕಾರ್ಯಕ್ರಮ ನೋಡುಗರ ಕಣ್ಮನ ಸೆಳೆಯಿತು.

## ಇಡೀ ದೇಶಕ್ಕೆ ಗೊತ್ತು ದೇವೇಗೌಡರ ಶಕ್ತಿ ಸಾಮರ್ಥ್ಯ

• ಮಲ್ಲಮ್ಮ ನುಡಿ ಬೆಂಗಳೂರು

ಅನೇಕ ಕಠಿಣ ಸವಾಲುಗಳನ್ನು ಎದುರಿಸಿ ಜೆಡಿಎಸ್ ಪಕ್ಷ ಕಟ್ಟಿರುವ ದೇವೇಗೌಡರ ಶಕ್ತಿ ಸಾಮರ್ಥ್ಯ ಇಡೀ ದೇಶಕ್ಕೆಗೊತ್ತಿದೆ. ಇಳಿವಯಸ್ಸಿನಲ್ಲೂ ಕೂಡ ಪಕ್ಷ ಹಾಗೂ ಕಾರ್ಯಕರ್ತರಿಗೊಸ್ಕರ ಶ್ರಮಿಸುತ್ತಿದ್ದಾರೆ. ಅಂತಹ ಮಹಾನ್ ಚೇತನ ಕಟ್ಟಿ ಬೆಳಸಿದ ಪಕ್ಷಕ್ಕೆ ಇಂದು ರಜತ ಮಹೋತ್ಸವದ ಸಂಭ್ರಮ. ಈ ಸಂಭ್ರಮದಲ್ಲಿ ನಾವೆಲ್ಲ ಭಾಗಿಯಾಗೋಣ ಎಂದು ವಿಧಾನ ಪರಿಷತ್ತು ಸದಸ್ಯ ಟಿ ಎನ್ ಜವರಾಯಿಗೌಡ ಹೇಳಿದರು.

ಯಶವಂತಪುರ ವಾರ್ಡಿನ ಅಂದರಹಳ್ಳಿಯ ಜೆಡಿಎಸ್ ಮಹಿಳಾ ಅಧ್ಯಕ್ಷೆ ಸಾಕಮ್ಮ ವತಿಯಿಂದ ಅಯೋಜಿಸಿದ್ದ ಜೆಡಿಎಸ್ ಪಕ್ಷದ 25ನೇ ವರ್ಷದ ರಜತ ಮಹೋತ್ಸವ ಸಂಭ್ರಮಾಚರಣೆಯಲ್ಲಿ ವಿಧಾನ ಪರಿಷತ್ತು ಸದಸ್ಯ ಟಿ ಎನ್ ಜವರಾಯಿಗೌಡ ಭಾಗವಹಿಸಿ ಮಾತನಾಡಿದರು. ರಜತಮಹೋತ್ಸವದಲ್ಲಿ ಪಾಲ್ಗೊಳ್ಳುವುದು ಕಾರ್ಯಕರ್ತರ ಪಾಲಿಗೆ ಸಂಭ್ರಮದ ದಿನ.



ದೇವೇಗೌಡರು ರಾಜಕೀಯದಲ್ಲಿ ಬೃಹತ್ ಆಲದ ಮರವಿದ್ದಂತೆ. ನಮ್ಮ ಪಕ್ಷದಿಂದಲೇ ರಾಜಕೀಯ ಬದುಕು ಕಂಡುಕೊಂಡು ಸರ್ವರೀತಿಯಲ್ಲಿಯೂ ಶಕ್ತಿ ತುಂಬಿಕೊಂಡು ಪಕ್ಷ ಬಿಟ್ಟು ಹೋದರು ಕೂಡ ಎದೆಗುಂದದೆ ಕುಮಾರಸ್ವಾಮಿ ರವರೊಂದಿಗೆ ಸೇರಿ ಪಕ್ಷವನ್ನು ಕಟ್ಟಿ ಬೆಳೆಸಿಕೊಂಡು ಬರುತ್ತಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸದಸ್ಯರಾದ ಟಿ.ಜವರಾಯೀಗೌಡ, ಯುವ ಮುಖಂಡ ಸಂತೋಷ್ ಜವರಾಯೀಗೌಡ, ಹನುಮಂತೇ ಗೌಡ್ರು, ಅಜಯ್, ಸತೀಶ್, ಚೆಲುವರಾಜ್, ಸಾಕಮ್ಮ, ಅರುಣ್ ಕುಮಾರ್ ಇತರರು ಪಾಲ್ಗೊಂಡಿದ್ದರು.

## ಬಸವಾದಿ ಶರಣರಿಂದ ಮಹಿಳೆಯರಿಗೆ ಸಮಾನತೆ

• ಮಲ್ಲಮ್ಮ ನುಡಿ ಭಾಲ್ಕಿ

ಸಮ ಸಮಾಜದ ಕನಸ್ಸನ್ನು ಹೊತ್ತು ಕೊಂಡು ಬಸವಾದಿ ಶರಣರು ಜಗತ್ತಿನಲ್ಲಿಯೇ ಪ್ರಪ್ರಥಮ ಬಾರಿಗೆ ಮಹಿಳೆಯರಿಗೆ ಸಮಾನತೆ ನೀಡಿದ್ದಾರೆ ಎಂದು ಜಯಕ್ಕ ಮಧುಕರ ಗಾಂವಕರ ಪ್ರತಿಪಾದಿಸಿದರು.

ತಾಲೂಕಿನ ತಳವಾಡ (ಕೆ) ಗ್ರಾಮದ ಶ್ರೀದೇವಿ ಶಿವಪ್ರಕಾಶ ಅವರ ಬಸವ ಬೆಳಗು ನಿವಾಸದಲ್ಲಿ ಆಯೋಜಿಸಿದ 8ನೇ ಮನೆಯಲ್ಲಿ ಮಹಾ ಮನೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕುಟುಂಬ ಮತ್ತು ಸಮಾಜದ ಅವಿಭಾಜ್ಯ ಅಂಗವಾಗಿರುವ ಮಹಿಳೆಯರಿಗೆ ಸಾಮಾಜಿಕ, ಧಾರ್ಮಿಕ, ಎಲ್ಲಾ ಕ್ಷೇತ್ರಗಳಲ್ಲಿ ನಿಜಾರ್ಥದಲಿ ಸಮಾನತ ಶರಣರು ನೀಡಿದ್ದಾರೆ. ಈ ಕಾರಣಕ್ಕೆ ಈ ಅಕ್ಕಮಹಾದೇವಿ, ಸತ್ಯಕ್ಕ, ನೀಲಾಂಬಿಕೆ, ಅಕ್ಕ ನಾಗಮ್ಮನಂತಹ ಶಿವ ಶರಣಿಯರು ಅಸಂಖ್ಯಾತ ವಚನ ಸಾಹಿತ್ಯ ಹೊರ ಹೊಮ್ಮಲು ಸಾಧ್ಯವಾಯಿತು.



ಅಧ್ಯಕ್ಷತೆ ವಹಿಸಿದ ಪೂರ್ಣಿಮಾ ಕಾರಾಮುಂಗೆ ಮಾತನಾಡಿ, ವಚನ ಸಾಹಿತ್ಯದ ಅಧ್ಯಯನ, ಅನುಸಂಧಾನ, ಆಚರಣೆಗೆ ತರುವುದು ಇಂದಿನ ಅಗತ್ಯವಾಗಿದೆ. ವಚನ ಸಾಹಿತ್ಯ ಕೇವಲ ಧಾರ್ಮಿಕ ಸಾಹಿತಿಕವಾಗಿರದೆ, ಸಮಾಜ, ವಿಜ್ಞಾನ, ಕಲೆ, ವೈದ್ಯ, ತರ್ಕ, ಅರ್ಥಶಾಸ್ತ್ರ ಹೀಗೆ ಎಲ್ಲಾ ಕ್ಷೇತ್ರದ ಜ್ಞಾನ ಒಳಗೊಂಡಿದೆ ಎಂದು ವ್ಯಾಖ್ಯಾನಿಸಿದರು. ಮಧುಕರ ಗಾಂವಕರ ಇತರೆ ಗಣ್ಯರು ಉಪಸ್ಥಿತ ಇದ್ದರು.

ಪ್ರಜ್ವಲ ಕುಂಬಾರ ಬಸವ ಪೂಜೆ ನಡೆಸಿ ಕೊಟ್ಟರು. ಶಿವಪ್ರಕಾಶ ಕುಂಬಾರ ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು. ಶ್ರೀದೇವಿ ಕುಂಬಾರ ಶರಣು ಸಮರ್ಪಣೆ ಸಲ್ಲಿಸಿದರು.

# ಒಕ್ಕೂಟದ ಮನವಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಸ್ಪಷ್ಟನೆ

• ಮಲ್ಲಮ್ಮ ನುಡಿ ಹುಣಸೂರು

ತಾಲ್ಲೂಕಿನ ಖಾಸಗಿ ಶಾಲಾ–ಕಾಲೇಜುಗಳ ಒಕ್ಕೂಟ–ದ ಪದಾಧಿಕಾರಿಗಳು ಹಾಗೂ ಕಾರ್ಯದರ್ಶಿ ಡಾ. ಶ್ರೀನಾಥ್ ನೇತೃತ್ವದಲ್ಲಿ ಪ್ರತಿನಿಧಿ ಮಂಡಳಿ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಭೇಟಿಯಾಗಿ, ಪತ್ರ E-1917485 DPI–CPI0C73 (OT) 3/2025 ಅಡಿ ವರ್ಗಾವಣೆ ಪ್ರಮಾಣಪತ್ರ (TC) ವಿತರಣೆ ಕುರಿತ ಆದೇಶದ ಬಗ್ಗೆ ಮನವಿ ಸಲ್ಲಿಸಿತು.

ಒಕ್ಕೂಟದ ಪದಾಧಿಕಾರಿಗಳು ಕಳೆದ ಅನೇಕ ದಶಕಗಳಿಂದ ತಾಲ್ಲೂಕಿನ ಖಾಸಗಿ ಶಿಕ್ಷಣ ಸಂಸ್ಥೆಗಳು ನಿಸ್ವಾರ್ಥವಾಗಿ ಶೈಕ್ಷಣಿಕ ಸೇವೆ ಸಲ್ಲಿಸುತ್ತಿದ್ದು, ಬಡ ಮತ್ತು ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ, ಕ್ರೀಡಾಕೂಟ, ಪ್ರತಿಭಾಕಾರಂಜಿ, ಹಾಗೂ ವಿವಿಧ ಸರ್ಕಾರಿ ಕಾರ್ಯಕ್ರಮಗಳಿಗೆ ಸಮರ್ಪಿತ ಬೆಂಬಲ ನೀಡುತ್ತಿವೆ ಎಂದು ವಿವರಿಸಿದರು. ಶುಲ್ಕ ಬಾಕಿ ಉಳಿಸಿಕೊಂಡು ಏಕಾಏಕಿ ಶಾಲೆ ಬದಲಿಸುವ ಕೆಲವು ವಿದ್ಯಾರ್ಥಿಗಳ ಹಿನ್ನೆಲೆಯಲ್ಲಿ TC



ನೀಡುವ ಸಂದರ್ಭದಲ್ಲಿ ಸಂಸ್ಥೆಗಳು ಎದುರಿಸುವ ಅಡಚಣೆಯನ್ನು ಮನವಿ ಪತ್ರದಲ್ಲಿ ವಿಸ್ತಾರವಾಗಿ ಪ್ರಸ್ತಾಪಿಸಲಾಯಿತು.

ಮನವಿಯನ್ನು ಸ್ವೀಕರಿಸಿ ಪ್ರತಿಕ್ರಿಯಿಸಿದ ಪಿ ಮಹದೇಔಸ್ವೋಯ ಪಿ ಕ್ಷೇತ್ರ ಶಿಕ್ಷಣಾಧಿಕಾರಿಗಳು "ಯಾವುದೇ ಶಾಲೆಯು TC ನೀಡುವ ಸಂದರ್ಭದಲ್ಲಿ ವಿದ್ಯಾರ್ಥಿಯಿಂದ ಕೇವಲ ಒಂದು ವರ್ಷದ ಶುಲ್ಕ ಬಾಕಿಯಿದ್ದರೆ, ಅದನ್ನು ಮಾನವೀಯತೆಯ ಆಧಾರದ ಮೇಲೆ ಪರಿಗಣಿಸಿ TC ನೀಡುವುದು ಉತ್ತಮ. ಇದು ವಿದ್ಯಾರ್ಥಿಯ ಶಿಕ್ಷಣ ನಿರಂತರತೆ ಮತ್ತು ಹಿತವನ್ನು ಕಾಪಾಡುತ್ತದೆ. ಆದರೆ ಹಲವು ವರ್ಷಗಳ ಶುಲ್ಕ ಬಾಕಿಯಿರುವ ಸಂದರ್ಭದಲ್ಲಿ, ಸಂಸ್ಥೆಗಳು ತಮ್ಮ ಹಂತದಲ್ಲಿ ನಿಯಮಾನುಸಾರ ಮತ್ತು ದಾಖಲೆ ಆಧಾರದ ಮೇಲೆ ವಿಷಯವನ್ನು ಬಗೆಹರಿಸಿಕೊಳ್ಳುವುದು ಸೂಕ್ತ." ಎಂದು ತಿಳಿಸಿದರು ಮುಂದುವರೆದು "ವಿದ್ಯಾರ್ಥಿಗಳ ಹಿತಾಸಕ್ತಿ ಮತ್ತು ಶಿಕ್ಷಣದ ಹಕ್ಕುಗಳನ್ನು ಕಾಯ್ದುಕೊಳ್ಳುವ ಜೊತೆಗೆ, ಸಂಸ್ಥೆಗಳ ನ್ಯಾಯೋಚಿತ ಹಕ್ಕುಗಳು ಮತ್ತು ಆಡಳಿತಾತ್ಮಕ ಸಾಮರ್ಥ್ಯವನ್ನು ಸಹ ಪರಿಗಣಿಸಲಾಗುವುದು. ಒಕ್ಕೂಟದ ಮನವಿ ಪತ್ರದಲ್ಲಿರುವ ಅಂಶಗಳನ್ನು ಜಿಲ್ಲಾ ಮಟ್ಟಕ್ಕೆ ಮತ್ತು ಆಯುಕ್ತರ ಕಚೇರಿಗೆ ವರದಿ ಮಾಡಲಾಗುತ್ತದೆ. ಎಲ್ಲಾ ಪಕ್ಷಗಳಿಗೆ ನ್ಯಾಯವಾಗುವಂತೆ ಚರ್ಚೆ ನಡೆಸಿ ಸಮನ್ವಯಾತ್ಮಕ ಮಾರ್ಗಸೂಚಿಗಳನ್ನು ಹೊರತಂದು ಕೊಡಲು ಕ್ರಮ ಕೈಗೊಳ್ಳಲಾಗುವುದು."

ಪ್ರತಿನಿಧಿ ಮಂಡಳಿಯ ಸದಸ್ಯರು ಶಿಕ್ಷಣ ಇಲಾಖೆಯ ಸಕಾರಾತ್ಮಕ ಪ್ರತಿಕ್ರಿಯೆಗೆ ಕೃತಜ್ಞತೆ ವ್ಯಕ್ತಪಡಿಸಿದರು. ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸುವಾಗ . ಶಾಲೆಯ ಕಾರ್ಯದರ್ಶಿ ಡಾ ಶ್ರೀನಾಥ್ ಶಾಲೆಯ ಶಾಸ್ತ್ರೀಯ ಸಂಸ್ಥೆಯ ರಾಧಾಕೃಷ್ಣ ಎಂ ಆರ್ ಎನಿ ಶಾಲೆಯ ಮುಖ್ಯೋಪಾಧ್ಯಾಯರು ಕಾವೇರಿ ಮುಖ್ಯ ಉಪಾಧ್ಯಾಯರು ಹಾಗೂ ಹುಣಸೂರು ತಾಲೂಕಿನ ಎಲ್ಲಾ ಖಾಸಗಿ ವಿದ್ಯಾ ಸಂಸ್ಥೆಗಳ ಮುಖ್ಯ ಶಿಕ್ಷಕರು ಪಾಲ್ಗೊಂಡಿದ್ದರು.

# ಕ್ರಸ್ಟ್ ಗೇಟ್ ಕಾರ್ಯ ಆರಂಭಿಸಿ: ಶಿವರಾಜ ತಂಗಡಗಿ

## ಕೆ.ಎನ್.ಎನ್.ಎಲ್ ಅಧಿಕಾರಿಗಳು ಹಾಗೂ ತುಂಗಭದ್ರಾ ಮಂಡಳಿಯ ಅಧಿಕಾರಿಗಳೊಂದಿಗೆ ಸಭೆ

• ಮಲ್ಲಮ್ಮ ನುಡಿ ಕೊಪ್ಪಳ

ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟ್ ಅಳವಡಿಸುವ ಕಾರ್ಯ ಡಿಸೆಂಬರ್ 20 ರಿಂದ ಆರಂಭವಾಗಬೇಕು ಎಂದು ನೀರಾವರಿ ಸಲಹಾ ಸಮಿತಿ ಅಧ್ಯಕ್ಷರು ಆಗಿರುವ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಹೇಳಿದರು.

ಅವರು ಶನಿವಾರ ಮುನಿರಾಬಾದನ ಕರ್ನಾಟಕ ನೀರಾವರಿ ನಿಗಮ ನಿಯಮಿತದ ಮುಖ್ಯ ಅಭಿಯಂತರರ ಕಚೇರಿಯಲ್ಲಿ ತುಂಗಭದ್ರಾ ಜಲಾಶಯದ ನೂತನ ಕ್ರಸ್ಟಗೇಟ್ ಅಳವಡಿಸುವ ಕುರಿತು ಕೆ.ಎನ್.ಎನ್.ಎಲ್ ಅಧಿಕಾರಿಗಳು ಹಾಗೂ ತುಂಗಭದ್ರಾ ಮಂಡಳಿಯ ಅಧಿಕಾರಿಗಳೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ತುಂಗಭದ್ರಾ ಜಲಾಶಯವು ನಮ್ಮ ಭಾಗದ ಲಕ್ಷಾಂತರ ರೈತರ ಜೀವನಾಡಿಯಾಗಿದ್ದು, ಪ್ರಸ್ತುತ ಹಳೆಯದಾಗಿರುವ ಜಲಾಶಯದ ಎಲ್ಲಾ 33 ಕ್ರಸ್ಟ್ ಗೇಟ್ ಗಳನ್ನು ಬದಲಾಯಿಸಲು 52 ಕೋಟಿ ರೂ. ಗಳ ವೆಚ್ಚದಲ್ಲಿ ಈಗಾಗಲೇ ಟೆಂಡರ್ ಕರೆಯಲಾಗಿದೆ. ಅದರಂತೆ ಪ್ರಸ್ತುತ ಕ್ರಸ್ಟ್ ಗೇಟ್ ಗಳ ಡಿಸ್ ಮೆಟಲಿಂಗ್ ಮತ್ತು ಇತರೆ ಕೆಲ ಕಾರ್ಯಗಳನ್ನು ತ್ವರಿತವಾಗಿ ಕೈಗೊಳ್ಳಬೇಕು. ಇದಕ್ಕಾಗಿ ಗುತ್ತಿಗೆದಾರರು ಎರಡು ತಂಡಗಳನ್ನು ರಚಿಸಿ ಅವುಗಳಿಂದ ಬೇಗನೆ ಕೆಲಸವನ್ನು



ಮಾಡಿಸಿಕೊಳ್ಳಬೇಕು. ನೂತನ ಕ್ರಸ್ಟ್‌ಗೇಟ್ ಅಳವಡಿಸುವ ಕಾರ್ಯ ಡಿಸೆಂಬರ್ 20 ರಿಂದ ಆರಂಭಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಮತ್ತು ಈ ಕಾಮಗಾರಿಯು ಕಡ್ಡಾಯವಾಗಿ ಟೈಮ್ ಬಾಂಡ್ ಒಳಗೆ ಪೂರ್ಣಗೊಳ್ಳಬೇಕೆಂದು ಸೂಚನೆ ನೀಡಿದರು.

ನಮ್ಮ ರೈತರು ಎರಡನೇ ಬೆಳೆಗೆ ನೀರನ್ನು ತ್ಯಾಗ ಮಾಡಿದ್ದಾರೆ. ಇದನ್ನು ನಾವೆಲ್ಲರೂ ಅರಿತುಕೊಂಡ ಕೆಲಸಮಾಡಬೇಕು. ತುಂಗಭದ್ರಾ ಜಲಾಶಯದ 19ನೇ ಕ್ರಸ್ಟ್ ಗೇಟ್ ಸೇರಿ ಎಲ್ಲಾ 33 ಕ್ರಸ್ಟ್ ಗೇಟ್ ಗಳನ್ನು ಬದಲಾಯಿಸುವುದಾಗಿ ರೈತರಿಗೆ ಮಾತು ನೀಡಿದ್ದು, ಅದನ್ನು ಉಳಿಸಿಕೊಳ್ಳಬೇಕಿದೆ. 2026ರ ಮುಂಗಾರು ವೇಳೆ ಜೂನ್ ಮಾಹೆಯಲ್ಲಿ ಜಲಾಶಯದಲ್ಲಿ ನೀರು ಸಂಗ್ರಹವಾಗುತ್ತದೆ. ಮುಂಗಾರು ಬೆಳೆಗಳಿಗೆ ನೀರು ಒದಗಿಸಲು ಯಾವುದೇ ರೀತಿಯ ತೊಂದರೆಗಳಾಗದಂತೆ ನೋಡಿಕೊಳ್ಳುವುದು ಸಹ ನಮ್ಮ ಕರ್ತವ್ಯವಾಗಿದೆ. ಹಾಗಾಗಿ ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟ್ ಅಳವಡಿಸುವ ಕಾರ್ಯ ಮೇ ತಿಂಗಳೊಳಗೆ ಕಡ್ಡಾಯವಾಗಿ ಪೂರ್ಣಗೊಳಿಸಲು ಗುತ್ತಿಗೆದಾರರು ಅಗತ್ಯಕ್ರಮ ಕೈಗೊಳ್ಳಬೇಕು. ಈ ಬಗ್ಗೆ ಸಂಬಂಧಿಸಿದಂತೆ ಅಧಿಕಾರಿಗಳು ತೀವ್ರನಿಗಾವಹಿಸಬೇಕು. ನೂತನ ಕ್ರಸ್ಟ್ ಗೇಟ್ ಅಳವಡಿಸುವ ಕಾರ್ಯ ನಡೆಯುವ ಸ್ಥಳಕ್ಕೆ ಯಾರನ್ನು ಬಿಡಬಾರದು. ಬೇಸಿಗೆಯಲ್ಲಿ ಜನರಿಗೆ ಕುಡಿಯುವ ನೀರಿಗೆ ಯಾವುದೇ ಸಮಸ್ಯೆಗಳಾಗದಂತೆ ಕುಡಿಯುವ ನೀರು ಪೂರೈಕೆಯನ್ನು ಸಮರ್ಪಕವಾಗಿ ಮಾಡಬೇಕು ಎಂದರು.

ತುಂಗಭದ್ರಾ ಜಲಾಶಯದ ಒಟ್ಟಾರೆ 23 ಟಿ.ಎಂ.ಸಿಯಷ್ಟು ನೀರನ್ನು ಬಳಕೆ ಮಾಡಿದ್ದು, ಪ್ರಸ್ತುತ ಜಲಾಶಯದ ಮಟ್ಟವು 1621.72 ಅಡಿ ಇದೆ. ಕ್ರಸ್ಟ್ ಗೇಟ್ ಗಳನ್ನು ಆಳವಡಿಸಲು 1613 ಅಡಿ ಇರಬೇಕು. ಉಳಿದ ಹೆಚ್ಚುವರಿ 9 ಅಡಿಯಷ್ಟು ನೀರನ್ನು ಬಳಸಿಕೊಂಡು ನಂತರ ಕ್ರಸ್ಟ್ ಗೇಟ್ ಆಳವಡಿಸುವ ಕಾರ್ಯ ಕೈಗೊಳ್ಳಲಾಗುವುದು ಎಂದು ಕನೀನಿನಿ ಮುನಿರಾಬಾದ್ ತುಂಗಭದ್ರಯೋಜನಾ ವೃತ್ತದ ಅಧೀಕ್ಷಕ ಅಭಿಯಂತರರಾದ ಶ್ರೀನಿವಾಸ ಬಿ. ಮಲ್ಲಿಗವಾಡ ಹಾಗೂ ಹೊಸಪೇಟೆ ಟಿಬಿ ಡ್ಯಾಮಿನ ಟಿಬಿ ಬೋರ್ಡ್ ಅಧೀಕ್ಷಕ ಅಭಿಯಂತರರಾದ ಎಸ್.ನಾರಾಯಣ ನಾಯಕ ಸಚಿವರಿಗೆ ಮಾಹಿತಿ ನೀಡಿದರು.

ಮೆ. ಹಾರ್ಡ್ ವೇರ್ ಟೂಲ್ಸ್ ಮತ್ತು ಮಷಿನರಿ ಪ್ರೇಜಕ್ಟ್‌ಪ್ರೈ. ಲಿಮಿಟೆಡ್ ಅಹಮದಾಬಾದ್ ಗುಜರಾತ್ ಕಂಪನಿಯ ಪ್ರತಿನಿಧಿಗಳು ಮಾತನಾಡಿ, ತಮ್ಮ ಸಂಸ್ಥೆಯಿಂದ ಪಶ್ಚಿಮ ಬಂಗಾಳದ ಪರಾಕ್ ಬ್ಯಾರೇಜ್ ಜಲಾಶಯದಲ್ಲಿ 124 ಗೇಟ್ ಗಳನ್ನು ಅಳವಡಿಸಿದ್ದು, ಇವುಗಳು ತುಂಗಭದ್ರಾ ಜಲಾಶಯದ ಗೇಟ್ ಗಳ ಗಾತ್ರದ್ದೆ ಆಗಿವೆ. ಇದಲ್ಲದೆ ಕೆ.ಆರ್.ಎಸ್. ಜಲಾಶಯ ಮತ್ತು ನಾರಾಯಣಪುರ ಡ್ಯಾಮಿನ ಗೇಟ್ ಗಳ ಅಳವಡಿಸುವ ಕಾರ್ಯಕ್ರಮವನ್ನು ಯಶಸ್ವಿಯಾಗಿ ಹಮ್ಮಿಕೊಂಡಿದ್ದೇವೆಂದು ಸಚಿವರಿಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಮುನಿರಾಬಾದ್ ಕೇಂದ್ರ ವಲಯದ ಕಾರ್ಯಪಾಲಕ ಅಭಿಯಂತರರು ಪ್ರೀತಿ ಪತ್ತಾರ, ಟಿಬಿ ಬೋರ್ಡ್ ಕಾರ್ಯಪಾಲಕ ಅಭಿಯಂತರರಾದ ಚಂದ್ರಶೇಖರ, ವಡ್ಡರ ಹಟ್ಟಿ ವಿಭಾಗದ ಕಾರ್ಯಪಾಲಕ ಅಭಿಯಂತರರು ಎಂ.ಎಸ್ ಗೋಡೇಕರ್, ಮುನಿರಾಬಾದ್ ವಲಯದ ತಾಂತ್ರಿಕ್ರ ಸಹಾಕಯಕರಾದ ಯಲ್ಲಪ್ಪ, ವಿನಾಯಕ ಬಿ., ಬಸಪ್ಪ ಜಾನಕರ್, ಲಿಂಗರಾಜ್ ಹಾಗೂ ರಾಘವೇಂದ್ರ, ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಧರಂರಾಜ್, ಸಹಾಯಕ ಇಂಜಿನಿಯರ್ ಹುಲಿರಾಜ್ ಮತ್ತು ಕಿರಣ ಇತರರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)